ಸಂಪುಟ: 13 Volume | ಸಂಚಿಕೆ: 290 Issue | ಪುಟಗಳು 08 Pages | ಮಂಗಳವಾರ 06 ಜನವರಿ 2026 | ₹6 | PRGINO.120927 (RNINO: KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

MN ಸತ್ಯಮೇವ ಜಯತೆ
ಕನ್ನಡ ಕಿರಣ
Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ
ಸಂಪಾದಕರು: ರಮೇಶ ರೆಡ್ಡಿ

**ಬೆಳಗು**
ಮಾತುಗಳು ಪರಸ್ಪರ ಬೇರ್ಪಡಿಸಲು ಇರುವುದಲ್ಲ, ಪರಸ್ಪರ ಸೇರಿಸಲು ಇರುವುದಾಗಿದೆ.
–ಮಹಾತ್ಮ ಗಾಂಧೀಜಿ

ಅಬಕಾರಿ ಸನ್ನದುಗಳ ಇ-ಹರಾಜು ತರಬೇತಿ 6
ಬಾಲ್ಯವಿವಾಹ ಮುಕ್ತ ಗ್ರಾ.ಪಂ 7
ಜನಪ್ರತಿನಿಧಿಗಳನ್ನು ನಿರ್ಲಕ್ಷಿಸಿದ ರೈಲ್ವೆ ಇಲಾಖೆ 8



ಬೆಂಗಳೂರು ಮೆಜೆಸ್ಟಿಕ್ ಬಸ್ ನಿಲ್ದಾಣದಲ್ಲಿ ರಾರಾಜಿಸುತ್ತಿರುವ ಮಲ್ಲಮ್ಮ ನುಡಿ.

## ಮಾಂಸಾಹಾರಿ ಪ್ರಾಣಿಗಳ ಅಂದಾಜು ಪ್ರಕ್ರಿಯೆ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ರಾಜ್ಯದ ಎಲ್ಲಾ ಅರಣ್ಯ ಪ್ರದೇಶಗಳಲ್ಲಿ ಹುಲಿಗಳು ಮತ್ತು ಇತರ ಮಾಂಸಾಹಾರಿ ಪ್ರಾಣಿಗಳನ್ನು ಅಂದಾಜು ಮಾಡುವ ಪ್ರಕ್ರಿಯೆಯು ಪ್ರಾರಂಭವಾಗಿದೆ ಎಂದು ಸಚಿವ ಈಶ್ವರ್ ಖಂಡ್ರೆ ಹೇಳಿದ್ದಾರೆ. ಈ ಗಣತಿ ಕಾಳಿ, ಭದ್ರಾ, ನಾಗರಹೊಳೆ, ಬಂಡೀಪುರ ಮತ್ತು ಬಿಳಿಗಿರಿ ರಂಗಸ್ವಾಮಿ ದೇವಾಲಯ ಹುಲಿ ಮೀಸಲು ಸೇರಿದಂತೆ ಪ್ರಮುಖ ಹುಲಿ ಸಂರಕ್ಷಿತ ಪ್ರದೇಶಗಳಲ್ಲಿ ನಡೆಯಲಿದೆ ಎಂದಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿ, ರಾಷ್ಟ್ರವ್ಯಾಪಿ ಹುಲಿ ಗಣತಿ ಪ್ರತಿ ನಾಲ್ಕು ವರ್ಷಗಳಿಗೊಮ್ಮೆ ನಡೆಸಲಾಗುತ್ತದೆ. ಇದು ಅಂತಹ ಆರನೇ ಗಣತಿ ಎಂದು ಹೇಳಿದರು. ಹಿಂದಿನ ಗಣತಿಗಳನ್ನು 2006, 2010, 2014, 2018



ಮತ್ತು 2022ರಲ್ಲಿ ನಡೆಸಲಾಗಿತ್ತು. ಕರ್ನಾಟಕದಲ್ಲಿ ಈ ಹಿಂದೆ ಸುಮಾರು 563 ಹುಲಿಗಳಿವೆ ಎಂದು ಅಂದಾಜಿಸಲಾಗಿತ್ತು. ಹುಲಿ ಜನಸಂಖ್ಯೆಯ ವಿಷಯದಲ್ಲಿ ರಾಜ್ಯ ದೇಶದಲ್ಲಿ ಎರಡನೇ ಸ್ಥಾನವನ್ನು ಪಡೆದುಕೊಂಡಿತ್ತು ಎಂದು ಹೇಳಿದ್ದಾರೆ.

## ಗವಿಮಠದ ಅದ್ದೂರಿ ಮಹಾ ರಥೋತ್ಸವ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



ತ್ರಿವಿಧ ದಾಸೋಹಕ್ಕೆ ಹೆಸರಾಗಿರುವ ನಗರದ ಸಂಸ್ಥಾನ ಶ್ರೀ ಗವಿಮಠದ ಮಹಾರಥೋತ್ಸವವು ಲಕ್ಷಾಂತರ ಸದ್ಭಕ್ತರ ಹರ್ಷೋದ್ಗಾರದ ನಡುವೆ ಸೋಮವಾರದಂದು ಅದ್ದೂರಿಯಾಗಿ ನೆರವೇರಿದೆ. ಮೇಘಾಲಯ ರಾಜ್ಯಪಾಲ ಸಿ.ಎಚ್. ವಿಜಯಶಂಕರ ಅವರು ರಥೋತ್ಸವಕ್ಕೆ ಚಾಲನೆ ನೀಡಿದ್ದಾರೆ. ಶ್ರೀಮಠದ ಪೂಜ್ಯರಾದ ಅಭಿನವ ಗವಿಸಿದ್ದೇಶ್ವರ ಮಹಾಸ್ವಾಮಿಗಳ ಮಾತನಾಡಿ, ಈ ಅದ್ದೂರಿ ಹಾಗೂ ಅದ್ಭುತ ಜಾತ್ರೆಗೆ ಭಕ್ತರ ಪ್ರಮುಖ ಕಾರಣರಾಗಿದ್ದಾರೆ ಎಂದು ತಿಳಿಸಿದ್ದಾರೆ.

## ಶೌಚಾಲಯದಲ್ಲಿ ವಿಡಿಯೊ: ಸೆರೆ

**ಬೆಂಗಳೂರು:** ಇಲ್ಲಿನ ಚಿತ್ರಮಂದಿರವೊಂದರಲ್ಲಿ ಮಹಿಳೆಯರ ಶೌಚಾಲಯದೊಳಗೆ ವಿಡಿಯೋ ರೆಕಾರ್ಡ್ ಮಾಡಿದ ಆರೋಪದ ಮೇಲೆ ಅಪ್ರಾಪ್ತನನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಮಡಿವಾಳ ಪೊಲೀಸ್ ಠಾಣಾ ವ್ಯಾಪ್ತಿಯ ಥಿಯೇಟರ್‌ನಲ್ಲಿ ಗಲಾಟೆ ನಡೆದ ಬಗ್ಗೆ ಮಾಹಿತಿ ಲಭ್ಯವಾಗಿದೆ. ಗಸ್ತು ಅಧಿಕಾರಿಗಳು ತಕ್ಷಣ ಸ್ಥಳಕ್ಕೆ ಧಾವಿಸಿ ಪರಿಸ್ಥಿತಿಯನ್ನು ನಿಯಂತ್ರಣಕ್ಕೆ ತಂದರು ಎಂದು ಪೊಲೀಸರು ತಿಳಿಸಿದ್ದಾರೆ. ಇನ್ನೊಬ್ಬ ಶಂಕಿತನನ್ನು ವಿಚಾರಣೆಗಾಗಿ ವಶಕ್ಕೆ ಪಡೆಯಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.



## ವೀರಭದ್ರೇಶ್ವರ ಜಾತ್ರೋತ್ಸವ ಸಭೆ ರದ್ದು

**ಹುಮನಾಬಾದ್:** ಇಲ್ಲಿನ ಐತಿಹಾಸಿಕ ದೇವಸ್ಥಾನವಾದ ಶ್ರೀ ವೀರಭದ್ರೇಶ್ವರ ಜಾತ್ರಾ ಮಹೋತ್ಸವವು ಅತಿ ವಿಜ್ರಂಭಣೆಯಿಂದ ಆಚರಿಸುವ ನಿಮಿತ್ಯ ಮಂಗಳವಾರ ದೇವಸ್ಥಾನದ ಬಳಿ ಇರುವ ಶ್ರೀ ದಿ. ಬಸವರಾಜ ಎಚ್. ಪಾಟೀಲರವರ ಕಲ್ಯಾಣ ಮಂಟಪದಲ್ಲಿ ಸಂಜೆ 7:30 ಕ್ಕೆ ಸಭೆ ಆಯೋಜಿಸಲಾಗಿತ್ತು. ಆದರೆ ಕಾರಣಾಂತರಗಳಿಂದ ಆ ಸಭೆ ರದ್ದುಗೊಳಿಸಲಾಗಿದೆ ಎಂದು ದೇವಸ್ಥಾನದ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಸಹಾಯಕ ಆಯುಕ್ತರು ಆದ ಪ್ರಕಾಶ ಕುದರೆ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



## ಮಾಲಾಧಾರಿಗೆ ಕಲ್ಲೇಟು, ಬಂಧನ

**ಬೆಂಗಳೂರು:** ಓಂ ಶಕ್ತಿ ಮಾಲಾಧಾರಿಗಳ ಮೆರವಣಿಗೆಯ ಮೇಲೆ ದುಷ್ಕರ್ಮಿಗಳು ಕಲ್ಲು ತೂರಾಟ ನಡೆಸಿದ ನಂತರ ನಗರದ ಜಗಜೀವನರಾಮ್ ನಗರದಲ್ಲಿ ಪರಿಸ್ಥಿತಿ ಉದ್ವಿಗ್ನವಾಗಿದ್ದರೂ ನಿಯಂತ್ರಣದಲ್ಲಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಮೆರವಣಿಗೆಯ ವೇಳೆ ನಡೆದ ದಾಳಿಯಲ್ಲಿ ಇಬ್ಬರು ಮಹಿಳೆಯರು ಗಾಯಗೊಂಡಿದ್ದಾರೆ. ಈ ಕುರಿತು ಮಾತನಾಡಿದ ಗೃಹಸಚಿವ ಜಿ. ಪರಮೇಶ್ವರ್, ಈ ಬಗ್ಗೆ ಮೂವರು ಬಾಲಕರನ್ನು ಬಂಧಿಸಲಾಗಿದೆ. ಬಂಧಿತರು 15 ಮತ್ತು 16 ವರ್ಷದ ಅಪ್ರಾಪ್ತ ವಯಸ್ಸಿನವರು. ಕಾನೂನು ಪ್ರಕಾರ ಕ್ರಮ ಕೈಗೊಲಾಗುವುದು ಎಂದಿದ್ದಾರೆ.

# ಶಾಸಕರ ಪರಸ್ಪರ ವಾಕ್ಸಮರ

## ಸಿಂಧನೂರು ಸರ್ಕಾರಿ ಕಾರ್ಯಕ್ರಮದಲ್ಲಿ ಕಲಹ | ಬೀದರ್‌ನ ಕೆಡಿಪಿ ಸಭೆಯಲ್ಲಿ ಧುರೀಣ ಚಕಮಕಿ

• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು/ಬೀದರ್

ಬೇರೆ ಬೇರೆ ಕಾರ್ಯಕ್ರಮಗಳಲ್ಲಿ ಜನಪ್ರತಿನಿಧಿಗಳ ಪರಸ್ಪರ ಮಾತಿನ ಚಕಮಕಿ ನಡೆಸಿದ್ದು ಚರ್ಚೆಗೆ ಗ್ರಾಸವೊದಗಿಸಿದೆ. ಸಿಂಧನೂರಿನ ಸರ್ಕಾರಿ ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸದಸ್ಯ ಬಸನಗೌಡ ಬಾದರ್ಲಿ, ಶಾಸಕ ಹಂಪನಗೌಡ ಬಾದರ್ಲಿ ನಡುವೆ ವಾಕ್ಸಮರ ನಡೆಯಿತು.





**ನಡೆದದ್ದು ಏನು?:** ನಗರದ ಬಸ್ ನಿಲ್ದಾಣದಲ್ಲಿ ಇಂದು ವಿದ್ಯಾರ್ಥಿಗಳೊಂದಿಗೆ ಸಂವಾದ ಕಾರ್ಯಕ್ರಮ ಏರ್ಪಡಿಸಲಾಗಿತ್ತು. ಇದಕ್ಕೆ ಹಂಪನಗೌಡ ಬಾದರ್ಲಿ, ಬಸನಗೌಡ ಬಾದರ್ಲಿ ಅವರನ್ನು ಸ್ವಾಗತಿಸಲಾಯಿತು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಹಂಪನಗೌಡ ಬಾದರ್ಲಿ ಮಾತನಾಡಿದರು. ಇನ್ನೇನು ಬಸನಗೌಡ ಬಾದರ್ಲಿ ಮಾತನಾಡುವುದಕ್ಕೆ ಶುರು ಮಾಡಿದಾಗ, ನಮ್ಮ ಬಸನಗೌಡ ಬಾದರ್ಲಿ ಅವರಿಗೆ ಅವಮಾನ ಮಾಡಿದ್ದಾರೆ ಎಂದು ಕಲಹ ಶುರುಮಾಡಿದ್ದಾರೆ.


**ಬೀದರ್ ಕೆಡಿಪಿ ಸಭೆಯಲ್ಲಿ..?:** ಬೀದರ್‌ನ ಕೆಡಿಪಿ ಸಭೆ ಶಾಸಕ ಹಾಗೂ ಪರಿಷತ್ ಸದಸ್ಯರು ಕೈ ಕೈ ಮಿಲಾಯಿಸಿದ್ದಾರೆ. ಜಿಲ್ಲಾ ಪಂಚಾಯತ್ ಕಚೇರಿಯಲ್ಲಿ ನಡೆದ ಸಭೆಯಲ್ಲಿ ಹುಮನಾಬಾದ್ ಕ್ಷೇತ್ರದ ಬಿಜೆಪಿ ಶಾಸಕ ಸಿದ್ದು ಪಾಟೀಲ್ ಹಾಗೂ ಕಾಂಗ್ರೆಸ್ ಪರಿಷತ್ ಸದಸ್ಯ ಭೀಮರಾವ್ ಪಾಟೀಲ್ ನಡುವೆ ತೀವ್ರ ವಾಗ್ವಾದ ನಡೆದಿದ್ದು ಗದ್ದಲಕ್ಕೆ ಕಾರಣವಾತು.



### ಕುರ್ಚಿ, ಬಾಟಲ್ ಎಸೆದಾಡಿದರು..!

ಸಿಂಧನೂರಿನ ಶಾಸಕ ಹಂಪನಗೌಡ ಬಾದರ್ಲಿ ಅವರು 14 ಬಸ್‌ಗಳಿಗೆ ಚಾಲನೆ ನೀಡುವುದಕ್ಕೆ ಅಧಿಕಾರಿಗಳನ್ನು ಕರೆದುಕೊಂಡು ಎದ್ದು ಹೊರಟಾಗ, ಬಸನಗೌಡ ಬಾದರ್ಲಿ ಅವರು ಬೆಂಬಲಿಗರು ನಮ್ಮ ಬಸನಗೌಡ ಬಾದರ್ಲಿ ಅವರಿಗೆ ಅವಮಾನ ಮಾಡಿದ್ದಾರೆ ಎಂದು ಬೆಂಬಲಗರು ಕುರ್ಚಿ, ನೀರಿನ ಬಾಟಲಿಗಳನ್ನು ಎಸೆದಾಡಿದ್ದಾರೆ. ಇದು ಸರಕಾರಿ ಕಾರ್ಯಕ್ರಮ. ಎಂಎಲ್ಸಿ ಅವರನ್ನು ಕರೆದು ಅವಮಾನಿಸಿದ್ದೀರಿ. ಎಂದು ಡಿಪೊ ಮ್ಯಾನೇಜರ್, ಹಂಪನಗೌಡ ಬಾದರ್ಲಿ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ.

### ಕಾನೂನು ಸುವ್ಯವಸ್ಥೆಗಾಗಿ 144 ಸೆಕ್ಷನ್ ಜಾರಿ



ಬೀದರ್‌ನ ಕೆಡಿಪಿ ಸಭೆ ಶಾಸಕ ಹಾಗೂ ಪರಿಷತ್ ಸದಸ್ಯರು ಕೈ ಕೈ ಮಿಲಾಯಿಸಿದ್ದು, ಹುಮನಾಬಾದ್ ತಾಲೂಕು ತಹಶೀಲ್ದಾರ್ ಹಾಗೂ ತಾಲೂಕು ದಂಡಾಧಿಕಾರಿಗಳಾದ ಅಂಜುಮ್ ತಬಸ್ಸುಮ್ ಅವರು 144 ಸೆಕ್ಷನ್ ಜಾರಿಗೊಳಿಸಿದ್ದಾರೆ. ತಾಲೂಕಿನಾದ್ಯಂತ ಅಶಾಂತಿ, ಕಾನೂನು ಸುವ್ಯವಸ್ಥೆ ಹದಗೆಡುವ ಸಂಭವವಿದೆ. ಇದರಿಂದ ಮುನ್ನೆಚ್ಚರಿಕೆಯಾಗಿ ಈ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

### ಜಮೀನು ಒತ್ತುವರಿ ವಿಷಯದಿಂದ ಕಲಹ?

ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ್ ಖಂಡ್ರೆ ಅವರ ಅಧ್ಯಕ್ಷತೆಯಲ್ಲಿ ಮತ್ತು ಸಚಿವ ರಹಿಂ ಖಾನ್ ಅವರ ಉಪಸ್ಥಿತಿಯಲ್ಲಿ ಕೆಡಿಪಿ ಸಭೆ ಆಯೋಜಿಸಲಾಗಿತ್ತು. ಅಭಿವೃದ್ಧಿ ಕಾಮಗಾರಿಗಳ ಪ್ರಗತಿ ಪರಿಶೀಲನೆ ನಡೆಯುತ್ತಿದ್ದ ವೇಳೆ, ಜಮೀನು ಒತ್ತುವರಿ ವಿಷಯ ಪ್ರಸ್ತಾಪವಾಯಿತು. ಈ ನಿರ್ದಿಷ್ಟ ವಿಷಯದ ಕುರಿತು ಚರ್ಚೆ ಆರಂಭವಾಗುತ್ತಿದ್ದಂತೆ ಸಭೆಯ ಚಿತ್ರಣವೇ ಬದಲಾಗಿದೆ.

### ಜನಪ್ರತಿನಿಧಿಗಳ ಆಕ್ರೋಶ

ವೇದಿಕೆಯ ಮೇಲೆ ಸಚಿವರು ಮತ್ತು ಎದುರುಗಡೆ ಹಿರಿಯ ಅಧಿಕಾರಿಗಳು ಕುಳಿತಿದ್ದರೂ ಲೆಕ್ಕಿಸದೆ, ಇಬ್ಬರೂ ಜನಪ್ರತಿನಿಧಿಗಳು ಆಕ್ರೋಶಗೊಂಡು ಪರಸ್ಪರ ದೈಹಿಕವಾಗಿ ಹಲ್ಲೆ ಮಾಡುವ ಹಂತಕ್ಕೆ ಮುಂದಾಗಿದ್ದಾರೆ. ಪರಸ್ಪರ ಎಳೆದಾಡಲಾರಂಭಿಸಿದ್ದು, ಈ ಅನಿರೀಕ್ಷಿತ ಘಟನೆಯಿಂದ ಸಭೆಯಲ್ಲಿದ್ದ ಅಧಿಕಾರಿಗಳು ಮತ್ತು ಇತರ ಸದಸ್ಯರು ಒಂದು ಕ್ಷಣ ದಂಗಾಗಿದ್ದಾರೆ. ಬಳಿಕ ಧುರೀಣರ ಮಧ್ಯೆ ಪ್ರವೇಶದಿಂದಾಗಿ ಪರಿಸ್ಥಿತಿ ಶಾಂತವಾಗಿದೆ.

## ಶಂಕುಸ್ಥಾಪನೆ ಕಾರ್ಯಕ್ರಮದ ವೇಳೆ ಹೈಡ್ರಾಮಾ

**ಕೊಪ್ಪಳ:** ಕೊಪ್ಪಳ ತಾಲೂಕಿನ ಹಿಟ್ನಾಳ ಗ್ರಾಮದಲ್ಲಿ ರೈಲ್ವೆ ಮೇಲ್ಸೇತುವೆ ಕಾಮಗಾರಿ ಶಂಕುಸ್ಥಾಪನೆ ಕಾರ್ಯಕ್ರಮದ ವೇಳೆ ಹೈಡ್ರಾಮಾ ನಡೆದಿದೆ. ಕಾಂಗ್ರೆಸ್ ಕಾರ್ಯಕರ್ತರು ಕೇಂದ್ರ ಸಚಿವ ವಿ. ಸೋಮಣ್ಣ ಅವರತ್ತ ಕುರ್ಚಿ ಎಸೆದು ಆಕ್ರೋಶ ವ್ಯಕ್ತಪಡಿಸಿದ್ದಾರೆ.



ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವ ಶಿವರಾಜ ತಂಗಡಿಗಿ ಹಾಗೂ ಸಂಸದ ಕೆ. ರಾಜಶೇಖರ್ ಹಿಟ್ನಾಳ್ ಹೆಸರನ್ನು ಕಾರ್ಯಕ್ರಮದ ಆಹ್ವಾನ ಪತ್ರಿಕೆಯಲ್ಲಿ ಸೇರಿಸಿಲ್ಲ. ಶಿಷ್ಟಾಚಾರ ಪಾಲಿಸಿಲ್ಲ ಎಂದು ಆರೋಪಿಸಿ ಕೇಂದ್ರ ಸಚಿವ ಸೋಮಣ್ಣ ಎದುರೇ ಕಾಂಗ್ರೆಸ್ ಕಾರ್ಯಕರ್ತರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಸಂಸದರ ಹೆಸರಿಲ್ಲದಿದ್ದಕ್ಕೆ ಕಾಂಗ್ರೆಸ್ ಕಾರ್ಯಕರ್ತರು, ಕೇಂದ್ರ ಸಚಿವರತ್ತ ಕುರ್ಚಿ ಎಸೆದು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಯಾವುದೇ ಶಿಷ್ಟಾಚಾರ ಉಲ್ಲಂಘನೆ ಆಗಿಲ್ಲ. ಆದರೂ ಕಾಂಗ್ರೆಸ್ ಕಾರ್ಯಕರ್ತರಿಂದ ಗಲಾಟೆ ಮಾಡಿಸಿದ್ದಾರೆ ಎಂದು ಹೇಳಿದ್ದಾರೆ.

## ಎರಡು ಬಾರಿ ಮರಣೋತ್ತರ ಪರೀಕ್ಷೆ

**ಬೆಂಗಳೂರು:** ಬಳ್ಳಾರಿ ಶಾಸಕ ನಾರಾ ಭರತ್ ರೆಡ್ಡಿ ಆಪ್ತನ ಗನ್ ಮ್ಯಾನ್ ನಡೆಸಿದ ಗುಂಡಿನ ದಾಳಿಯ ಕುರಿತು ಸ್ಫೋಟಕ ಮಾಹಿತಿಯನ್ನು ಬಹಿರಂಗ ಮಾಡಿರುವ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು; ಗುಂಡಿಗೆ ಬಲಿಯಾದ ಕಾಂಗ್ರೆಸ್ ಕಾರ್ಯಕರ್ತ ರಾಜಶೇಖರ್ ಮೃತದೇಹದ ಮರಣೋತ್ತರ ಪರೀಕ್ಷೆಯನ್ನು ಕಾನೂನುಬಾಹಿರವಾಗಿ ಎರಡು ಬಾರಿ ನಡೆಸಲಾಗಿದೆ ಎಂದಿದ್ದಾರೆ.



ವರದಿಗಾರರ ಒತೆ ಮಾತನಾಡಿ, ಹೀಗಾಗಿ ಈ ಪ್ರಕರಣವನ್ನು ಸಿಬಿಐ ತನಿಖೆಗೆ ಒಪ್ಪಿಸಬೇಕು ಎಂದು ಅವರು ರಾಜ್ಯ ಸರ್ಕಾರವನ್ನು ಒತ್ತಾಯ ಮಾಡಿದ್ದಾರೆ. ಕಾರ್ಯಕರ್ತ ರಾಜಶೇಖರ್ ಹತ್ಯೆ ಒಂದೆಡೆ, ಆದರೆ ಸ್ವಪಕ್ಷದ ಕಾರ್ಯಕರ್ತನ ಕೊಲೆಯನ್ನು ಮುಚ್ಚಿಹಾಕಲು ಕಾಂಗ್ರೆಸ್ ಸರಕಾರ ಇನ್ನಿಲ್ಲದ ಪ್ರಯತ್ನ ನಡೆಸಿದೆ. ಇದು ನಾಚುಗೇಡು. ಅದಕ್ಕಾಗಿ ಆ ನತದೃಷ್ಟ ಕಾರ್ಯಕರ್ತನ ಮೃತದೇಹವನ್ನು ಎರಡು ಬಾರಿ ಮರಣೋತ್ತರ ಪರೀಕ್ಷೆಗೆ ಒಳಡಿಸಲಾಗಿದೆ ಎಂದು ಗಂಭೀರ ಆರೋಪ ಮಾಡಿದ್ದಾರೆ.

## ಧರ್ಮಾಧಿಕಾರಿಗೆ ಆಹ್ವಾನ



**ಭಾಲ್ಕಿ ಪಟ್ಟಣದಲ್ಲಿ ಏಪ್ರಿಲ್‌ನಲ್ಲಿ ನಡೆವ ಪಟ್ಟದ್ದೇವರ ಅಮೃತ ಮಹೋತ್ಸವಕ್ಕಾಗಿ ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆಗೆ ಸ್ವಾಗತ**

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಪಟ್ಟಣದಲ್ಲಿ 2026ರ ಏಪ್ರಿಲ್ ತಿಂಗಳಿನಲ್ಲಿ ನಡೆಯಲಿರುವ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರ ಅಮೃತ ಮಹೋತ್ಸವ ಸಮಾರಂಭಕ್ಕೆ ಧರ್ಮಸ್ಥಳದ ಧರ್ಮಾಧಿಕಾರಿ ಡಾ.ವೀರೇಂದ್ರ ಹೆಗ್ಗಡೆ ಅವರನ್ನು ಆಹ್ವಾನಿಸಲಾಗಿದೆ. ಧರ್ಮಸ್ಥಳಕ್ಕೆ ಸೋಮವಾರ ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಭೇಟಿ ನೀಡಿ ಧರ್ಮಾಧಿಕಾರಿ ಡಾ.ವೀರೇಂದ್ರ ಹೆಗ್ಗಡೆ ಅವರನ್ನು ಗೌರವಿಸಿ ಪೂಜ್ಯರ ಅಮೃತ ಮಹೋತ್ಸವ ಸಮಾರಂಭಕ್ಕೆ ಆಹ್ವಾನ ನೀಡಿದ್ದಾರೆ. ಗಡಿಭಾಗದಲ್ಲಿ ಕಳೆದ ನಾಲ್ಕು ದಶಕಗಳಿಂದ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ದಣಿವರಿಯದ ಸೇವೆ ಸಲ್ಲಿಸುತ್ತಿದ್ದಾರೆ. ಧರ್ಮ ಪ್ರಸಾರದ ಜತೆಗೆ ವಿದ್ಯಾ ಸಂಸ್ಥೆ ತೆರೆದು ಶೈಕ್ಷಣಿಕ ಕ್ಷೇತ್ರದಲ್ಲಿ ಕ್ರಾಂತಿಗೈಯುತ್ತಿದ್ದಾರೆ. ಹೀಗಾಗಿ ತಾವು ಈ ಐತಿಹಾಸಿಕ ಸಮಾರಂಭದಲ್ಲಿ ಭಾಗವಹಿಸಿ ದರುಶನ ಭಾಗ್ಯ ಕಲ್ಪಿಸಬೇಕು ಎಂದು ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಮನವಿ ಮಾಡಿದ್ದಾರೆ. ಸುರತ್ಕಲ್ ಎನ್‌ಐಟಿ ಕಂಪ್ಯೂಟರ್ ವಿಭಾಗದ ಪ್ರಾಧ್ಯಾಪಕ ವಿಜಯಕುಮಾರ ಘೋದೆ, ಚನ್ನಬಸವೇಶ್ವರ ಗುರುಕುಲದ ಹಳೆಯ ವಿದ್ಯಾರ್ಥಿ ಆಶಿಶ್ ಬಸವರಾಜ ಮೊಳಕೀರೆ ಹಾಜರಿದ್ದರು.


## ಅರಸು ದಾಖಲೆ ಮುರಿದ ಸಿಎಂ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ರಾಜ್ಯದ ಇತಿಹಾಸದಲ್ಲಿ ಅತಿ ಹೆಚ್ಚು ದಿನ ಮುಖ್ಯಮಂತ್ರಿಯಾಗಿ ಆಡಳಿತ ನಡೆಸಿದ ಕೀರ್ತಿಗೆ ಸಿದ್ದರಾಮಯ್ಯ ಪಾತ್ರವಾಗಲಿದ್ದಾರೆ. 7 ವರ್ಷ 239 ದಿನಗಳ ಕಾಲ ಆಡಳಿತ ನಡೆಸಿದ್ದ ಡಿ.ದೇವರಾಜ ಅರಸು ಅವರ ಬಳಿಕ ಈಗ ಸಿಎಂ ಸಿದ್ದರಾಮಯ್ಯನವರು ಆ ದಾಖಲೆಯನ್ನು ಮುರಿಯಲಿದ್ದಾರೆ. ದೇವರಾಜ ಅರಸುರವರು ಸತತವಾಗಿ ಏಳೂವರೆ ವರ್ಷ ಅಧಿಕಾರ ನಡೆಸಿ ಹೊಸ ಕ್ರಾಂತಿ ಸೃಷ್ಟಿಸಿದ್ದರು. ಸಿದ್ದರಾಮಯ್ಯ ಅವರು ಮೊದಲ ಬಾರಿಗೆ 2013ರಲ್ಲಿ ಮುಖ್ಯಮಂತ್ರಿಯಾಗಿ ಯಶಸ್ವಿಯಾಗಿ 5 ವರ್ಷ ಪೂರ್ಣಗೊಳಿಸಿದ್ದರು. 2023 ರಲ್ಲಿ ವರುಣಾ ಕ್ಷೇತ್ರದಿಂದ ಸ್ಪರ್ಧಿಸಿ ಗೆಲುವು ಸಾಧಿಸಿ, 2ನೇ ಬಾರಿಗೆ ಸಿಎಂ ಆಗಿ ಅಧಿಕಾರ ವಹಿಸಿದ್ದಾರೆ.



ಆರಂಭದಲ್ಲಿ ವಕೀಲ ವೃತ್ತಿಯಿಂದ ಸಾರ್ವಜನಿಕ ರಂಗಕ್ಕೆ ಬಂದ ಬಳಿಕ ಅನೇಕ ಅಡೆತಡೆ ನಡುವೆಯೂ ಕಾಂಗ್ರೆಸ್ ಸೇರಿ ಪ್ರತಿಪಕ್ಷ ನಾಯಕರಾಗಿ, ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಂಡು ಹಲವು ಭಾಗ್ಯಗಳನ್ನು ನೀಡಿದ ಕೀರ್ತಿ ಇವರದ್ದಾಗಿದೆ. ದೇವರಾಜ ಅರಸು 7 ವರ್ಷ 239 ದಿನಗಳ ಕಾಲ ಆಡಳಿತ ನಡೆಸಿದ್ದರು. ಈಗ ಸಿಎಂ ಸಿದ್ದರಾಮಯ್ಯ ಅವರು 7 ವರ್ಷ 239 ದಿನ ಪೂರೈಸಿದ್ದಾರೆ. ಇಂದು ಅವರು ಹೊಸ ದಾಖಲೆಯನ್ನು ಸೃಷ್ಟಿಸಲಿದ್ದಾರೆ .2ನೇ ಸ್ಥಾನದಲ್ಲಿ ದೇವರಾಜ ಅರಸುರವರು ಹೋದರೆ, 3ನೇ ಸ್ಥಾನದಲ್ಲಿ ಎಸ್.ನಿಜಲಿಂಗಪ್ಪ (7 ವರ್ಷ 175 ದಿನ), 4ನೇ ಸ್ಥಾನ ರಾಮಕೃಷ್ಣ ಹೆಗ್ಡೆ (5 ವರ್ಷ 216 ದಿನ) ಮತ್ತು 5ನೇ ಸ್ಥಾನ ಬಿ.ಎಸ್.ಯಡಿಯೂರಪ್ಪ (5 ವರ್ಷ 82 ದಿನ) ಇದ್ದಾರೆ.ಲೋಕದಳ, ಜನತಾದಳದಲ್ಲಿಯೂ ಸಿದ್ದರಾಮಯ್ಯನವರು ತಮ ವರ್ಚಸ್ಸನ್ನು ಪ್ರದರ್ಶಿಸಿದ್ದರು. 2006 ರಲ್ಲಿ ಕಾಂಗ್ರೆಸ್ ಸೇರಿದ ನಂತರ ಅವರು ಹಿಂದೆ ನೋಡಲೇ ಇಲ್ಲ. ಶಾಸಕರಾಗಿ, ವಿಪಕ್ಷ ನಾಯಕರಾಗಿ, ಮುಖ್ಯಮಂತ್ರಿ ಕುರ್ಚಿವರೆಗೂ ಹಲವಾರು ನಾಯಕರನ್ನು ಕಂಡಿದ್ದಾರೆ. ಪ್ರಸ್ತುತ ಅತಿ ಹೆಚ್ಚು ದಿನಗಳ ಆಡಳಿತ ನಡೆಸಿದ ಕೀರ್ತಿಯ ಜೊತೆಗೆ ಅತಿ ಹೆಚ್ಚು ಬಜೆಟ್ ಮಂಡಿಸಿದ ಕೀರ್ತಿಯೂ ಸಿದ್ದರಾಮಯ್ಯ ಅವರದ್ದಾಗಿದೆ.




**ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ದಿನೇ ದಿನೇ ಹದಗೆಡತೊಡಗಿದೆ, ಸರ್ಕಾರ ನಿಷ್ಕ್ರಿಯವಾಗಿದೆ: ಆರ್ ಅಶೋಕ್**

# ಸಮಾಜ ಪರಿವರ್ತನೆಗೆ ಮಾಧ್ಯಮ ಸಹಕಾರಿ: ಪ್ರೊ. ರಮೇಶ್ ಲಂಡನಕರ್



ಕಲಬುರಗಿ: ಸಮಾಜದ ಪರಿವರ್ತನೆಗೆ ಮಾಧ್ಯಮಗಳು ಸಹಕಾರಿಯಾಗಿದ್ದು, ತಮ್ಮ ಜವಾಬ್ದಾರಿಯನ್ನು ಸರಿಯಾಗಿ ನಿರ್ವಹಿಸಬೇಕು ಎಂದು ಗುಲಬರ್ಗಾ ವಿಶ್ವವಿದ್ಯಾಲಯದ ಕುಲಸಚಿವ ಪ್ರೊ. ರಮೇಶ್ ಲಂಡನಕರ್ ಅಭಿಪ್ರಾಯಪಟ್ಟರು.

ಖಾಸಗಿ ಸುದ್ದಿ ವಾಹಿನಿ ಹಾಗೂ ಗುಲಬರ್ಗಾ ವಿಶ್ವವಿದ್ಯಾಲಯದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ಸಹಯೋಗದಲ್ಲಿ ಸಂಕ್ರಾತಿ ಹಬ್ಬದ ಪ್ರಯುಕ್ತ ಜಿಲ್ಲಾ ಮಟ್ಟದ ರಂಗೋಲಿ ಸ್ಪರ್ಧೆ ಹಾಗೂ ಪರಿಸರ ಜಾಗೃತಿ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಾಧ್ಯಮಗಳ ಬಿತ್ತರಿಸುವ ಸುದ್ದಿಗಳಲ್ಲಿ ಸಾಮಾಜಿಕ ಕಳಕಳಿಯಿರಬೇಕು. ಇಂದಿನ ರಂಗೋಲಿ ಸ್ಪರ್ಧೆಗಳಲ್ಲಿ ಬುದ್ಧನ ಶಾಂತಿ, ಪರಿಸರ ಸಂರಕ್ಷಣೆ, ಮಹಿಳಾ ದೌರ್ಜನ್ಯ ತಡೆ. ಗಿಡ ಮರಗಳ ಪೋಷಣೆ, ಪ್ರಕೃತಿ ಕಾಪಾಡುವ ಸಂದೇಶವುಳ್ಳ ರಂಗೋಲಿ ಚಿತ್ತಾರಗಳು ಅಭಿವ್ಯಕ್ತಗೊಂಡಿವೆ. ನಿಜಕ್ಕೂ ಸಮಾಜ ಮತ್ತು ಸಮುದಾಯ ಕಾಳಜಿ ಕುರಿತು ಸ್ಪರ್ಧೆ ಆಯೋಜಿಸಿರುವ ವಾಹಿನಿಯ ಕಾರ್ಯ ಶ್ಲಾಘನೀಯ ಎಂದರು.

ಮುಖ್ಯ ಅತಿಥಿಗಳಾಗಿದ್ದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಬಾಬುರಾವ ಯಡ್ರಾಮಿ, ಉಪಾಧ್ಯಕ್ಷ ಡಾ. ಶಿವರಂಜನ ಸತ್ಯಂಪೇಟೆ, ಕೆಬಿಎನ್ ವಿವಿ ಸಮೂಹ ಸಂವಹನ ಮತ್ತು ಮಾಧ್ಯಮ ವಿಭಾಗದ ಮುಖ್ಯಸ್ಥೆ ಡಾ. ನಮ್ರತಾ ರಾವುತ್, ಸಿಂಡಿಕೇಟ್ ಸದಸ್ಯರಾದ ಉದಯಕುಮಾರ್ ಪಾಟೀಲ್, ರಾಘವೇಂದ್ರ ಭೈರಪ್ಪ ಮಾತನಾಡಿದರು. ಹೋರಾಟಗಾರ ಸಾಯಿಬಣ್ಣಾ ಜಮಾದಾರ, ನ್ಯಾಯವಾದಿ ಮಹ್ಮದ್ ಅಲ್ಲಾವುದೀನ್ ಜುನ್ಯೆದಿ, ಅತಿಥಿ ಉಪನ್ಯಾಸಕರ ಸಂಘದ ಅಧ್ಯಕ್ಷ ಡಾ. ಅರುಣ್ ಕುರನೆ ವೇದಿಕೆಯಲ್ಲಿದ್ದರು.

ಗುಲ್ಬರ್ಗ ವಿವಿ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ಸಂಯೋಜನಾಧಿಕಾರಿ ಡಾ. ಸುರೇಶ್ ಜಂಗೆ ಅಧ್ಯಕ್ಷತೆ ವಹಿಸಿದ್ದರು. ಡಾ. ಅಶೋಕ ದೊಡ್ಡಮನಿ ಸ್ವಾಗತಿಸಿದರು. ಶ್ರೀಕಾಂತ ಬಿರಾಳ ಪ್ರಾಸ್ತಾವಿಕವಾಗಿ ಮಾತನಾಡಿದರು. ಪ್ರಣವ ಸತ್ಯಂಪೇಟೆ ಪ್ರಾರ್ಥನೆ ಗೀತೆ ಹಾಡಿದರು. ವಿಠ್ಠಲ್ ಚಿಕಣಿ ವಂದಿಸಿದರು.

ನಿರ್ಣಾಯಕರಾಗಿ ಡಾ. ಮಾಧುರಿ ಬಿರಾದಾರ ಮತ್ತು ಡಾ. ಕವಿತಾ ನಾಗಶೆಟ್ಟಿ ಹಾಜರಿದ್ದರು. ರಂಗೋಲಿ ಸ್ಪರ್ಧೆಯಲ್ಲಿ ಸುಮಾರು 30 ಸ್ಪರ್ಧಿಗಳು ಭಾಗವಹಿಸಿದ್ದರು.

ಮಂಜುನಾಥ (ಪ್ರಥಮ–ರೂ, 5000 ರೂ. ಮತ್ತು ಮೆಡಲ್ ಹಾಗೂ ಪ್ರಶಸ್ತಿ ಪತ್ರ), ಕೃಷ್ಣ ಜಿ (ದ್ವಿತೀಯ– ರೂ, 3000 ಹಾಗೂ ಪ್ರಶಸ್ತಿ ಪತ್ರ) ಮತ್ತು ದೀಪ ದರ್ಶನ್ (ತೃತೀಯ–ರೂ, 1000 ಹಾಗೂ ಪ್ರಶಸ್ತಿ ಪತ್ರ) ಬಹುಮಾನ ನೀಡಲಾಯಿತು. ಭಾಗವಹಿಸಿದ 25 ಸ್ಪರ್ಧಿಗಳಿಗೆ ಪ್ರಶಂಸ ಪತ್ರ ನೀಡಲಾಯಿತು.

## ಜ, 6 ರಂದು ರಸ್ತೆ ಸುರಕ್ಷತಾ ಜಾಗೃತಿ ಕಾರ್ಯಕ್ರಮ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:**

ಕಲಬುರಗಿ ಜಿಲ್ಲಾಡಳಿತ, ಪೊಲೀಸ್ ಇಲಾಖೆ ಹಾಗೂ ಉಪ ಸಾರಿಗೆ ಆಯುಕ್ತರು ಮತ್ತು ಹಿರಿಯ ಪ್ರಾದೇಶಿಕ ಸಾರಿಗೆ ಕಚೇರಿ ಇವುಗಳ ಸಂಯುಕ್ತಾಶ್ರಯದಲ್ಲಿ ಇದೇ ಜನವರಿ 6 ರಂದು ಬೆಳಿಗ್ಗೆ 11 ಗಂಟೆಗೆ ಕಲಬುರಗಿ ನಗರದ ಪಿ.ಡಿ.ಎ. ಇಂಜನಿಯರಿಂಗ್ ಕಾಲೇಜಿನಲ್ಲಿ "ರಸ್ತೆ ಸುರಕ್ಷತಾ ಜಾಗೃತಿ ಕಾರ್ಯಕ್ರಮ"ವನ್ನು ಹಮ್ಮಿಕೊಳ್ಳಲಾಗಿದೆ.

ಕಲಬುರಗಿ ರಸ್ತೆ ಸುರಕ್ಷತಾ ಸಮಿತಿಯ ಅಧ್ಯಕ್ಷರು ಆದ ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು ಕಾರ್ಯಕ್ರಮದಲ್ಲಿ ಉಪಸ್ಥಿತರಿರುವರು. ಕಲಬುರಗಿ ನಗರ ಪೊಲೀಸ್ ಆಯುಕ್ತ ಡಾ. ಶರಣಪ್ಪ ಎಸ್.ಡಿ. ಅವರು ಮುಖ್ಯ ಅತಿಥಿಗಳಾಗಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಡ್ಡೂರು ಶ್ರೀನಿವಾಸುಲು ಹಾಗೂ ಕಲಬುರಗಿ ವಿಭಾಗದ ಸಾರಿಗೆ ಜಂಟಿನಿರ್ದೇಶಕ ಸಿದ್ದಪ್ಪ ಹೆಚ್. ಕಲ್ಲೇರ್ ಹಾಗೂ ಪಿ.ಡಿ.ಎ. ಇಂಜನಿಯರಿಂಗ್ ಕಾಲೇಜಿನ ಪ್ರಾಚಾರ್ಯರಾದ ಡಾ. ಸಿದ್ದರಾಮ ಆರ್.ಪಾಟೀಲ ಅವರು ಗೌರವ ಅತಿಥಿಗಳಾಗಿ ಪಾಲ್ಗೊಳ್ಳುವರು.

## ಕುಡಿಯುವ ನೀರನ್ನು ಕಾಯಿಸಿ ಕುಡಿಯಲು ಮನವಿ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:**

ಕಲಬುರಗಿ ನಗರಕ್ಕೆ ನೀರು ಸರಬರಾಜು ಮಾಡುವ ಜಲಮೂಲ ನದಿಯಾದ ಭೀಮಾ ನದಿಯಿಂದ ನಿಂತ ನೀರು ಕಲುಷಿತವಾಗಿ ಬರುತ್ತಿರುವ ಕಾರಣ ನೀರನ್ನು ಶುದ್ಧೀಕರಿಸಿ, ಸೂಪರ್ ಕ್ಲೋರಿನೇಶನ್ ಮಾಡಿ ನೀರು ಸರಬರಾಜು ಮಾಡಲಾಗುತ್ತಿದೆ. ಆದಾಗ್ಯೂ ಸಹ ಕಲಬುರಗಿ ಸಾರ್ವಜನಿಕರು ಮುನ್ನೆಚ್ಚರಿಕೆ ಕ್ರಮವಾಗಿ ಕುಡಿಯುವ ನೀರನ್ನು ಕಾಯಿಸಿ, ಆರಿಸಿ ಮತ್ತು ಸೋಸಿ ಕುಡಿಯಬೇಕೆಂದು ಕಲಬುರಗಿ ಕೆಯುಡಬ್ಲ್ಯೂಎಸ್‌ಎಂಪಿ–ಕೆಯುಐಡಿಎಫ್‌ಸಿ ಯೋಜನಾ ಅನುಷ್ಠಾನ ಘಟಕದ ಕಾರ್ಯಪಾಲಕ ಅಭಿಯಂತರರು ತಿಳಿಸಿದ್ದಾರೆ. ನಗರದ ಸಾರ್ವಜನಿಕರು ತಮ್ಮ ಮನೆಗಳಿಗೆ ತೆಗೆದುಕೊಂಡ ನಳದ ಜೋಡಣೆಗೆ ತೊಟ್ಟಿಯನ್ನು ಕಡ್ಡಾಯವಾಗಿ ಕೂಡಿಸಿಕೊಳ್ಳಬೇಕು. ನಳದ ತಗ್ಗುಗಳನ್ನು ಮುಚ್ಚಬೇಕು. ಏಕೆಂದರೆ ತಗ್ಗುಗಳಲ್ಲಿ ಕಲುಷಿತ ನೀರು ಸಂಗ್ರಹಣೆಯಾಗಿ ಅದೇ ನೀರು ಮತ್ತೆ ನಳದ ತೊಟ್ಟಿಯಲ್ಲಿ ಸೇರುವ ಮೂಲಕ ಮುಂದಿನ ಗ್ರಾಹಕರಿಗೆ ತಲುಪುತ್ತದೆ. ಇದರಿಂದ ಸಾಂಕ್ರಾಮಿಕ ರೋಗ ಹರಡುವ ಸಾಧ್ಯತೆ ಇರುತ್ತದೆ. ನೀರಿನ ತೊಟ್ಟಿ ಅಳವಡಿಸಿಕೊಳ್ಳುವುದರಿಂದ ನೀರು ಪೋಲಾಗದಂತೆ ನೋಡಿಕೊಳ್ಳಬಹುದಾಗಿದೆ. ಗ್ರಾಹಕರು ನೀರಿನ ಕರ ಪಾವತಿಸಿ: ಕಲಬುರಗಿ ನಗರದ ನೀರು ಸರಬರಾಜಿನ ಗ್ರಾಹಕರು ಸುಮಾರು 73 ಕೋಟಿ ರೂ.ಗಳ ನೀರಿನ ಕರದ ಬಾಕಿ ಉಳಿಸಿಕೊಂಡಿದ್ದು, ನಿರಂತರ ನೀರು ಸರಬರಾಜು ಯೋಜನೆ ಯಶಸ್ವಿ ಅನುಷ್ಠಾನ ಮತ್ತು ನಿರ್ವಹಣೆಗಾಗಿ ನೀರಿನ ಕರ ಸಂಗ್ರಹಿಸುವುದು ಅತೀ ಅವಶ್ಯಕವಾಗಿದೆ. ಸಾರ್ವಜನಿಕರು ನೀರಿನ ಕರವನ್ನು ಕರ್ನಾಟಕ ಒನ್, ಮಹಾನಗರ ಪಾಲಿಕೆಯ ಆನ್‌ಲೈನ್‌ನಲ್ಲಿ ನೀರಿನ ಬಿಲ್ ವಿತರಕರ ಹತ್ತಿರ ಇರುವ ಕ್ಯೂಆರ್ ಕೋಡ್, ಕಲಬುರಗಿಯಲ್ಲಿರುವ ಮೆ. ಎಲ್ ಆಂಡ್ ಟಿ ಕಂಪನಿ ಸ್ಥಾಪಿಸಿರುವ ಕ್ಯಾಶ್‌ಕೌಂಟರ್‌ಗಳಲ್ಲಿ ನೀರಿನ ಕರ ತುಂಬಿ ಕಲಬುರಗಿ ನಗರದ ಸಾರ್ವಜನಿಕರು ಕಲಬುರಗಿ ಮಹಾನಗರಪಾಲಿಕೆ, ಕೆಯುಐಡಿಎಫ್‌ಸಿ ಹಾಗೂ ಮೆ॥ ಎಲ್ ಆಂಡ್ ಟಿ. ಲಿಮಿಟೆಡ್ ಇವರೊಂದಿಗೆ ಸಹಕರಿಸಬೇಕು. ನೀರಿನ ಸಮಸ್ಯೆಗಳ ಕುರಿತು ಹೆಚ್ಚಿನ ಮಾಹಿತಿಗಾಗಿ ಗ್ರಾಹಕರ ಸೇವಾ ದೂರವಾಣಿ ಸಂಖ್ಯೆ: +91 1800 425 8247 (ccc) ಗೆ ಸಂಪರ್ಕಿಸಲು ಕೋರಲಾಗಿದೆ.

## ಪಟ್ಟಿ ಪ್ರಕಟ: ಆಕ್ಷೇಪಣೆ ಆಹ್ವಾನ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:**

ಕಲಬುರಗಿ ಮಹಾನಗರಪಾಲಿಕೆಯಿಂದ 2025–26ನೇ ಸಾಲಿಗೆ ಶೇ.5ರ ಯೋಜನೆಯಡಿ 2023–24ನೇ ಸಾಲಿನ ಎಸ್.ಎಫ್.ಸಿ (ಮುಕ್ತ ನಿಧಿ) ಅನುದಾನದಡಿ ವಿಶೇಷಚೇತನರಿಗೆ ತ್ರಿಚಕ್ರ ವಾಹನ ನೀಡಲು ಅರ್ಜಿ ಆಹ್ವಾನಿಸಿ, ಅರ್ಹ ಹಾಗೂ ಅನರ್ಹ ಫಲಾನುಭವಿಗಳ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಕಲಬುರಗಿ ಮಹಾನಗರ ಪಾಲಿಕೆಯ ಸೂಚನಾ ಫಲಕ ಹಾಗೂ ವೆಬ್‌ಸೈಟ್‌ದಲ್ಲಿ ಈಗಾಗಲೇ ಪ್ರಕಟಿಸಲಾಗಿದೆ ಎಂದು ಕಲಬುರಗಿ ಮಹಾನಗರ ಪಾಲಿಕೆ ಉಪ ಆಯುಕ್ತರು (ಆಡಳಿತ) ಅವರು ತಿಳಿಸಿದ್ದಾರೆ.

ಅದೇ ರೀತಿ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಪಾಲಿಕೆಯ ಪಾಲಿಕೆಯ http://www.kalaburagicity.mrc.gov ವೆಬ್‌ಸೈಟ್‌ನಲ್ಲಿ ಈಗಾಗಲೇ ಪ್ರಕಟಿಸಲಾಗಿದ್ದು, ಈ ತಾತ್ಕಾಲಿಕ ಪಟ್ಟಿಗೆ ಆಕ್ಷೇಪಣೆಗಳು ಇದ್ದಲ್ಲಿ 2026ರ ಜನವರಿ 8 ರಿಂದ 23 ರೊಳಗಾಗಿ ಪೂರಕ ದಾಖಲೆಗಳೊಂದಿಗೆ ಕಲಬುರಗಿ ಮಹಾನಗರ ಪಾಲಿಕೆಯಲ್ಲಿ ಆಕ್ಷೇಪಣೆಗಳನ್ನು ಸಲ್ಲಿಸಬೇಕು. ಕೊನೆಯ ದಿನಾಂಕದ ನಂತರ ಬರುವ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಅವರು ತಿಳಿಸಿದ್ದಾರೆ.

## ಆಕ್ಷೇಪಣೆ ಆಹ್ವಾನ


• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:**

ಮಹಾನಗರ ಪಾಲಿಕೆಯ ಶೇ. 24.10ರ ಅನುಮೋದಿತ ಕ್ರೀಯಾ ಯೋಜನೆ, ಎಸ್.ಎಫ್.ಸಿ (ಮುಕ್ತ ನಿಧಿ) ಯೋಜನೆ ಹಾಗೂ ಪರಿಶಿಷ್ಟ ಪಂಗಡದ ಜನರ ಕಲ್ಯಾಣ ಕಾರ್ಯಕ್ರಮಗಳಡಿ 2025–26ನೇ ಸಾಲಿನಲ್ಲಿ ಕೆಳಕಂಡ ಸೌಲಭ್ಯ ಪಡೆಯಲು ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಮಹಾನಗರ ಪಾಲಿಕೆಯ ಉಪ ಆಯುಕ್ತರು (ಆಡಳಿತ) ಅವರು ತಿಳಿಸಿದ್ದಾರೆ. ಎಸ್.ಎಫ್.ಸಿ(ಮುಕ್ತ ನಿಧಿ) ಯೋಜನೆಯಡಿ ಪರಿಶಿಷ್ಟ ಪಂಗಡದ ಜನರಿಗೆ ಸಣ್ಣ ಉದ್ದಿಮೆ ಸ್ಥಾಪಿಸಲು ಸಹಾಯಧನ (ಬ್ಯಾಂಕ್ ಮುಖಾಂತರ) ಪಡೆಯಲು ಕಲಬುರಗಿ ನಗರ ನಿವಾಸಿಯಾಗಿರಬೇಕು. ಪರಿಶಿಷ್ಟ ಪಂಗಡದವರಾಗಿರಬೇಕು. ವಾರ್ಷಿಕ ಆದಾಯ 3 ಲಕ್ಷ ರೂ. ಮೀರಿರಬಾರದು. ಅರ್ಹ ಫಲಾನುಭವಿಗಳು ನಿಗದಿತ ಅರ್ಜಿಯನ್ನು ಮಹಾನಗರ ಪಾಲಿಕೆಯ ಶೇ. 24.10 ಮತ್ತು ಆವಕ ಶಾಖೆಯಿಂದ ಕಚೇರಿ ಸಮಯದಲ್ಲಿ ಪಡೆದು ಭರ್ತಿ ಮಾಡಿ ಅವಶ್ಯಕ ದಾಖಲೆಗಳೊಂದಿಗೆ 2026ರ ಜನವರಿ 8 ರಿಂದ 31 ರೊಳಗಾಗಿ ಅರ್ಜಿ ಸಲ್ಲಿಸಬೇಕು. ಈ ಮೊದಲು ಮಹಾನಗರ ಪಾಲಿಕೆಯಿಂದ ಅಥವಾ ಸರಕಾರದ ವಿವಿಧ ಯೋಜನೆಯಡಿ ಸೌಲಭ್ಯ ಪಡೆದವರು ಪುನಃ ಸೌಲಭ್ಯಕ್ಕೆ ಅರ್ಜಿ ಸಲ್ಲಿಸುವಂತಿಲ್ಲ. ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ಮಹಾನಗರ ಪಾಲಿಕೆಯ ಶೇ. 24.10ರ ಶಾಖೆಯನ್ನು ಹಾಗೂ http://www.kalaburagicity.mrc.gov ವೆಬ್‌ಸೈಟ್‌ನ್ನು ಸಂಪರ್ಕಿಸಲು ಕೋರಲಾಗಿದೆ.

## ಪೋಷಕರ ಪತ್ತೆಗೆ ಮನವಿ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:**

ರೇವಗ್ಗಿ ಗುಡ್ಡದಲ್ಲಿ ದಿನಾಂಕ: 21–05–2024 ರಂದು ಪತ್ತೆಯಾದ 16 ವರ್ಷದ ಬಾಲಕನಾದ ನಿಖಿಲ ತಂದೆ ಶಶಿಧರ ಇವರನ್ನು ಮಕ್ಕಳ ಸಹಾಯವಾಣಿ ಮೂಲಕ ಕಲಬುರಗಿ ಸರ್ಕಾರಿ ಬಾಲಕರ ಬಾಲಮಂದಿರದಲ್ಲಿ



ದಾಖಲಿಸಲಾಗಿದೆ ಎಂದು ಕಲಬುರಗಿ ಬಾಲಕರ ಸರ್ಕಾರಿ ಬಾಲಮಂದಿರದ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಈ ಬಾಲಕನು ಬಿಳಿ ಬಣ್ಣ ಹೊಂದಿದ್ದು, 162 ಸೆಂ.ಮಿ. ಎತ್ತರ ಹಾಗೂ 38 ಕೆ.ಜಿ ತೂಕ ಹೊಂದಿರುತ್ತಾನೆ. ಮೇಲ್ಕಂಡ ಬಾಲಕನ ಪಾಲಕರು ಮತ್ತು ಪೋಷಕರು ಪ್ರಕಟಣೆಯಾದ 30 ದಿನದೊಳಗಾಗಿ ಅಗತ್ಯ ದಾಖಲೆಗಳೊಂದಿಗೆ ಕಲಬುರಗಿಯ ಪ್ರಗತಿ ಕಾಲೋನಿಯ ಬಾಲಕರ ಸರ್ಕಾರಿ ಬಾಲ ಮಂದಿರದ ಅಧೀಕ್ಷಕರನ್ನು ಹಾಗೂ ಕಲಬುರಗಿ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಮುಂದೆ ಹಾಜರಾಗಬೇಕು. ಹೆಚ್ಚಿನ ಮಾಹಿತಿಗಾಗಿ ಕಲಬುರಗಿಯ ಪ್ರಗತಿ ಕಾಲೋನಿಯ ಬಾಲಕರ ಸರ್ಕಾರಿ ಬಾಲ ಮಂದಿರದ ಅಧೀಕ್ಷಕರನ್ನು ಹಾಗೂ ದೂರವಾಣಿ ಸಂಖ್ಯೆ 08472–269438 ಗೆ ಸಂಪರ್ಕಿಸಲು ಕೋರಿದೆ.

## ರೈತರಿಗೆ ಒಂದು ದಿನದ ತರಬೇತಿ: ಹೆಸರು ನೋಂದಣಿಗೆ ಸೂಚನೆ

• **ಮಲ್ಲಮ್ಮ ನುಡಿವಾರ್ತೆ ,ಕಲಬುರಗಿ:**

2025–26ನೇ ಸಾಲಿನಲ್ಲಿ ಸೂಕ್ಷ್ಮ ನೀರಾವರಿ ಕಾರ್ಯಕ್ರಮದ ಯೋಜನೆಯಡಿ ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ತುಂತುರು ಮತ್ತು ಹನಿ ನೀರಾವರಿ ಪದ್ಧತಿ ಅಳವಡಿಕೆಯಿಂದ ಆಗುವ ಉಪಯೋಗಗಳು ಮತ್ತು ಅವುಗಳ ನಿರ್ವಹಣೆ ಕುರಿತು ಒಂದು ದಿನದ ತರಬೇತಿ ಕಾರ್ಯಕ್ರಮವನ್ನು ಇದೇ ಜನವರಿ 7 ರಂದು ಕೋಟನೂರ(ಡಿ) ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಆಯೋಜಿಸಲಾಗಿದೆ ಎಂದು ಜಿಲ್ಲಾ ಕೃಷಿ ತರಬೇತಿ ಕೇಂದ್ರ ಮುಖ್ಯಸ್ಥರು ತಿಳಿಸಿದ್ದಾರೆ.

ತರಬೇತಿ ಪಡೆಯಲು ಆಸಕ್ತಿವುಳ್ಳ ಎಫ್‌ಐಡಿ (FID) ಹೊಂದಿರುವ ರೈತರು ಮತ್ತು ರೈತ ಸಂಪರ್ಕ ಕೇಂದ್ರಗಳಿಂದ ತುಂತುರು ಮತ್ತು ಹನಿ ನೀರಾವರಿ ಘಟಕಗಳನ್ನು ಪಡೆದ ರೈತರು ಸಹಾಯಕ ಕೃಷಿ ನಿರ್ದೇಶಕರು (ರೈ.ಮ) ನೀಲಕ್ಕಾ. ನರಸಲಗಿ ಇವರ ಮೊಬೈಲ್ ಸಂಖ್ಯೆ–9845350226 ಮತ್ತು ಕೃಷಿ ಅಧಿಕಾರಿ ಯಾಸ್ಮಿನ್–9901604822 ಹಾಗೂ ಕೃಷಿ ಅಧಿಕಾರಿ ಪ್ರಿಯಾಂಕ ಕುಲಕರ್ಣಿ ಇವರ ಮೊಬೈಲ್ ಸಂಖ್ಯೆ 9164145939 ಗೆ ಸಂಪರ್ಕಿಸಿ ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳಬೇಕು. ಎಫ್.ಐ.ಡಿ. ಹೊಂದಿರುವ ಆಸಕ್ತ ರೈತರು ನೊಂದಾಯಿಸಿಕೊಳ್ಳಬೇಕು. ಈ ಹಿಂದೆ ಸೂಕ್ಷ್ಮ ನೀರಾವರಿ ಕಾರ್ಯಕ್ರಮದ ಯೋಜನೆಯಡಿ ತರಬೇತಿ ಪಡೆದ ರೈತರನ್ನು ಪರಿಗಣಿಸಲಾಗುವುದಿಲ್ಲ ಎಂದು ಅವರು ತಿಳಿಸಿದ್ದಾರೆ.

## ಕಾರ್ಖಾನೆ ವಿರೋಧಿ ಧರಣಿ 67ನೇ ದಿನ: ಪತ್ರ ಚಳವಳಿ ಆಂದೋಲನ ಶುರು



• **ಮಲ್ಲಮ್ಮ ನುಡಿವಾರ್ತೆ,ಕೊಪ್ಪಳ:**

ನಗರಸಭೆ ಮುಂದೆ ಜಿಲ್ಲಾ ಬಚಾವೋ ಆಂದೋಲನ ಸಮಿತಿ ಹಾಗೂ ಪರಿಸರ ಹಿತರಕ್ಷಣಾ ವೇದಿಕೆ ಇದರ ಜಂಟಿ ಕ್ರಿಯಾ ವೇದಿಕೆ ನಡೆಸುತ್ತಿರುವ 67ನೇ ದಿನದ ಧರಣಿಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಪ್ರಧಾನ ಮಂತ್ರಿ ನರೇಂದ್ರ ಮೋದಿಯವರಿಗೆ ಸಾಮೂಹಿಕವಾಗಿ ಪತ್ರ ಬರೆಯಲಾಯಿತು.

ಕೊಪ್ಪಳ–ಭಾಗ್ಯನರ 1.5 ಲಕ್ಷ ಜನರ ಆರೋಗ್ಯ ರಕ್ಷಣೆಯ ಉದ್ದೇಶದಿಂದ, 54 ಸಾವಿರ ಕೋಟಿ ರೂ. ಹೂಡಿಕೆ ಮಾಡಿ ಬಲ್ಡೋಟ (ಬಿಎಸ್ಪಿಎಲ್) ವಿಸ್ತರಣೆ ಮಾಡುವುದನ್ನು ತಡೆಯಬೇಕೆಂದು, ಈಗಿರುವ ಬಲ್ಡೋಟ ಎಂಎಸ್ಪಿಎಲ್ ಪೆಲ್ಲೆಟ್ ಘಟಕದಿಂದ ನಗರದ ಅರ್ಧ ಭಾಗ ಮಾಲಿನ್ಯವಾಗಿದ್ದರ ಆಧಾರದಲ್ಲಿ ಆ ಘಟಕ ಕಾರ್ಯಾರಣೆ ಸ್ಥಗಿತಗೊಳಿಸಬೇಕೆಂದು ಆಗ್ರಹಿಸಿ ಆಂದೋಲನ ನಡೆಸಲಾಯಿತು.

ಈ ಪತ್ರ ಚಳವಳಿಗೆ ಚಾಲನೆ ಕೊಟ್ಟ ಪ್ರಧಾನ ಸಂಚಾಲಕ ಅಲ್ಲಮಪ್ರಭು ಬೆಟ್ಟದೂರು ಮಾತನಾಡಿ ನಮ್ಮ ಭವಿಷ್ಯಕ್ಕೆ ಎದುರಾದ ಆತಂಕದ ಧ್ವನಿಯನ್ನು ರಾಜ್ಯದ ದೊರೆ ಮುಖ್ಯಮಂತ್ರಿ ಮತ್ತು ದೇಶ ಮುನ್ನಡೆಸುವ ಪ್ರಧಾನ ಮಂತ್ರಿಗೆ ಪತ್ರದ ಮೂಲಕ ಬರೆದು ತಲುಪಿಸೋಣ. ಅವರು ನಮ್ಮ 2 ಲಕ್ಷ ಜನರ ಆರೋಗ್ಯ, ಜೀವ ಕಾಪಾಡುತ್ತಾರೋ ಇಲ್ಲವೋ ಕಾಯ್ದು ನೋಡೋಣ. 20 ಕಾರ್ಖಾನೆ ಬಾಧಿತ ಹಳ್ಳಿಗಳ ಮಾಲಿನ್ಯ ಪರಿಸ್ಥಿತಿ ಎಲ್ಲೆ ಮೀರಿ ಹೋಗಿದೆ. ಇವರು ಗ್ರಾಮಗಳ ಸತ್ಯದರ್ಶನ ಮಾಡಬೇಕೆಂದು ಕರೆಯುತ್ತಿದ್ದೇವೆ. ಆದರೂ ಇತ್ತ ಕಡೆ ಹೊರಳಿ ನೋಡಲಾರರು. ಇಲ್ಲಿನ ಶಾಸಕರು, ಸಂಸದರು, ಜಿಲ್ಲಾ ಮಂತ್ರಿ, ಮುಖ್ಯಮಂತ್ರಿ ಸಲಹೆಗಾರರು ಹೋರಾಟಕ್ಕೆ ಬೆಂಬಲಿಸುತ್ತೇವೆ ಎನ್ನುವುದನ್ನು ಬಿಡಬೇಕು. ಮೊದಲು ಸರ್ಕಾರದಿಂದ ಬಲ್ಡೋಟ ವಿಸ್ತರಣೆಯ ತಡೆ ಆದೇಶ ತರಬೇಕು. ಅಷ್ಟು ಮಾಡಿ ಜನರಿಗೆ ಉಪಕಾರ ಮಾಡಲಿ' ಎಂದು ಹೇಳಿದರು.

ಧರಣಿಯಲ್ಲಿ ಸಂಚಾಲಕ ಡಿ.ಎಚ್. ಪೂಜಾರ ಪ್ರಕಾಶಕ ಡಿ.ಎಂ. ಬಡಿಗೇರ, ಸಂಚಾಲಕರು ಮಲ್ಲಿಕಾರ್ಜುನ ಬಿ. ಗೋನಾಳ, ಮಂಜುನಾಥ ಜಿ. ಗೊಂಡಬಾಳ, ಕವಿಯತ್ರಿ ಪುಷ್ಪಲತಾ ಏಳುಬಾವಿ, ಶರಣು ಗಡ್ಡಿ, ಎಸ್. ಬಿ. ರಾಜೂರು, ಚಾರಣ ಬಳಗದ ಚಂದ್ರಗೌಡ ಪಾಟೀಲ್, ಸಾವಿತ್ರಿ ಮುಜುಮದಾರ್, ಮಹಾದೇವಪ್ಪ ಎಸ್. ಮಾವಿನಮಡು, ಯಮನೂರಪ್ಪ ಹಾಲಳ್ಳಿ ಬಸಾಪುರ, ಗವಿಸಿದ್ದಪ್ಪ ಹಲಿಗಿ, ರವಿ ಕಾಂತನವರ, ಭುಜಂಗ ಸ್ವಾಮಿ, ಶಿವಪ್ಪ ಜಲ್ಲಿ, ರಾಜಶೇಖರ ಏಳುಬಾವಿ, ಹನುಮಪ್ಪ ಕಟಿಗಿ, ಶಿವಕುಮಾರ ಕುಸುಮ, ಬಸವರಾಜ್ ನರೇಗಲ್, ಶೇಖರಯ್ಯ ಹೊಸಮನಿ, ಶಿವಪ್ಪ ಹಡಪದ ಪತ್ರ ಚಳವಳಿ ಆಂದೋಲನ ನಡೆಸಿದರು.

## ಶ್ಯಾಮಲಾ ಗೌಡರ ಕಾರ್ಯ ಎಲ್ಲರೂ ಹೆಮ್ಮೆ ಪಡುವಂಥದ್ದು : ಮಂಗಲಲಕ್ಷ್ಮೀ ಪಾಟೀಲ



• **ಮಲ್ಲಮ್ಮ ನುಡಿವಾರ್ತೆ, ಅಂಕೋಲಾ :**

ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ತಾಲೂಕು ಘಟಕ ಅಂಕೋಲಾ ವತಿಯಿಂದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಅಂಕೋಲಾ ನಂಬರ್ 1ರಲ್ಲಿ ಅಕ್ಷರದವ್ವ, ದೇಶದ ಮೊದಲ ಮಹಿಳಾ ಶಿಕ್ಷಕಿ ಸಾವಿತ್ರಿಬಾಯಿ ಪುಲೆಯವರ 195ನೇ ಜನ್ಮ ಜಯಂತೋತ್ಸವ ಹಾಗೂ ಕರ್ನಾಟಕ ಘನ ಸರ್ಕಾರದ ಗ್ಯಾರೆಂಟಿ ಯೋಜನೆ ಯಡಿಯಲ್ಲಿ ನೀಡಲಾದ ಗೃಹಲಕ್ಷ್ಮಿ ಹಣವನ್ನು ಒಟ್ಟುಗೂಡಿಸಿಕೊಂಡು ಸರಕಾರಿ ಕಿರಿಯ ಪ್ರಾಥಮಿಕ ಶಾಲೆ ಅಂಬುಕೋಣಕ್ಕೆ ಧ್ವಜಸ್ಥಂಭವನ್ನು ನಿರ್ಮಿಸಿಕೊಟ್ಟ ಶ್ಯಾಮಲಾ ತಿಮ್ಮಪ್ಪ ಗೌಡ ದಂಪತಿಗಳನ್ನು ಸನ್ಮಾನಿಸುವ ಕಾರ್ಯಕ್ರಮ ನಡೆಯಿತು.

ಸನ್ಮಾನ ಕಾರ್ಯಕ್ರಮವನ್ನು ನೆರವೇರಿಸಿ ಮಾತನಾಡಿದ ಅಂಕೋಲಾ ಕ್ಷೇತ್ರ ಶಿಕ್ಷಣಾಧಿಕಾರಿ ಮಂಗಲ ಲಕ್ಷ್ಮೀ ಪಾಟೀಲ ಶ್ಯಾಮಲಾ ಗೌಡರವರು ಮಾಡಿದ ಕಾರ್ಯ ನಾವೆಲ್ಲರೂ ಹೆಮ್ಮೆಪಡುವಂಥದ್ದು ಶಿಕ್ಷಣ ಇಲಾಖೆ ಅವರನ್ನು ಅಭಿನಂದಿಸುತ್ತದೆ ಶಾಲಾ ಶಿಕ್ಷಕರ ಸಂಘದ ಕಾರ್ಯವು ಸಹ ಶ್ಲಾಘನೀಯವಾದದ್ದು ಎಂದರು. ಹೀಗೆ ಸಮಾಜದ ಸಹಭಾಗಿತ್ವ ಸರಕಾರಿ ಶಾಲೆಗಳಿಗೆ ಅಗತ್ಯವಾಗಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ಅಂಕೋಲಾ ಘಟಕದ ಅಧ್ಯಕ್ಷ ಜಗದೀಶ ಜಿ ನಾಯಕ ಹೊಸ್ಕೇರಿ ಮಾತನಾಡಿ ಅಕ್ಷರದವ್ವ, ಸಾವಿತ್ರಿಬಾಯಿ ಫುಲೆ ಅವರ ಜನ್ಮ ದಿನಾಚರಣೆಯ ಈ ಶುಭ ಸಂದರ್ಭದಲ್ಲಿ ದಿನಾಚರಣೆಯ ಶುಭ ಸಂದರ್ಭದಲ್ಲಿ ಶ್ಯಾಮಲಾ ತಿಮ್ಮಪ್ಪ ಗೌಡ ದಂಪತಿಗಳನ್ನು ಸನ್ಮಾನಿಸಿ, ಗೌರವಿಸಲು ಶಿಕ್ಷಕರ ಸಂಘ ಹೆಮ್ಮೆಪಡುತ್ತದೆ. ಬಡ ಕುಟುಂಬದ ಈ ದಂಪತಿಗಳ ಕಾರ್ಯ ಸರ್ವತ್ರ ಶ್ಲಾಘನೀಯವಾದದ್ದು. ಇವರ ಹೃದಯವಂತಿಕೆ ಸಮಾಜಕ್ಕೆ ಮಾದರಿಯಾದದು ಎಂದರು. ಅಂಬುಕೋಣ ಸರಕಾರಿ ಕಿರಿಯ ಪ್ರಾಥಮಿಕ ಶಾಲಾ ಶಿಕ್ಷಕ ವೆಂಕಟೇಶ ಗೌಡ, ತುಕಾರಾಮ ಭಂಟ ಅಭಿನಂದಿಸಿ ಮಾತನಾಡಿದರು. ಪ್ರಧಾನ ಕಾರ್ಯದರ್ಶಿ ರಾಜು ಎಚ್. ನಾಯಕ ಪ್ರಾಸ್ತಾವಿಕ ಮಾತುಗಳೊಂದಿಗೆ ಸ್ವಾಗತಿಸಿದರು. ಸದಸ್ಯೆ ಶೋಭಾ ಎಸ್. ನಾಯಕ ವಂದಿಸಿದರು. ಸಂಘದ ಪದಾಧಿಕಾರಿಗಳಾದ ದಿವಾಕರ ದೇವನ ಮನೆ, ವೆಂಕಮ್ಮ ನಾಯಕ, ಆನಂದು ವಿ. ನಾಯ್ಕ, ವಿ.ಪಿ. ನಾಯ್ಕ ಶಿಕ್ಷಕರಾದ ಬೀರಣ್ಣ ನಾಯಕ, ಭಾಸ್ಕರ ಜೋಗಿ ನಾಯಕ, ವೇಲಾಯುಧ ನಾಯರ, ವೀಣಾ ಹೆಗಡೆ, ಸೃಜನಾ ನಾಯಕ ವಿಶ್ರಾಂತ ಶಿಕ್ಷಕರಾದ ರೋಹಿದಾಸ ಭಂಟ, ಸಂಜೀವ ಆರ್. ನಾಯಕ ಮುಂತಾದವರು ಉಪಸ್ಥಿತರಿದ್ದರು.

## ಶ್ರೀ ಗವಿಸಿದ್ದೇಶ್ವರ ಜಾತ್ರೆಯ ಪಾದಯಾತ್ರೆಗಳಿಗೆ ಉಪಹಾರ ಚಹಾ, ಹಾಲು,ಹಣ್ಣು ವಿತರಣೆ

• **ಮಲ್ಲಮ್ಮ ನುಡಿ ವಾರ್ತೆ, ಕೊಪ್ಪಳ :**

ದಕ್ಷಿಣ ಭಾರತದ ಎಂದೇ ಕುಂಭಮೇಳ ಪ್ರಸಿದ್ಧವಾದ ಕೊಪ್ಪಳದ ಶ್ರೀಗವಿಸಿದ್ದೇಶ್ವರ ಜಾತ್ರಾ ಮಹೋತ್ಸವಕ್ಕೆ ಪಾದಯಾತ್ರೆ ಮೂಲಕ ತೆರಳುವ ಭಕ್ತಾದಿಗಳಿಗೆ ಕುಕನೂರು, ಮಸಬ ಹಂಚಿನಾಳ, ತಳಕಲ್ಲ, ಹಲಗೇರಿ, ಬಾನಾಪೂರ, ಕಿನ್ನಾಳ, ಇರಕಲ್ಗಡ, ಹಿರೇಸಿಂಡೂಗಿ ಸೇರಿದಂತೆ ವಿವಿಧ ಸ್ಥಳಗಳಲ್ಲಿ ಉಪಹಾರದ ಸೇವೆಯನ್ನು ರಸ್ತೆಯುದ್ದಕ್ಕೂ ಶ್ರೀ ಮಠದ ಭಕ್ತರಿಂದ ಆಯೋಜಿಸಲಾಯಿತು.

ನಗರಕ್ಕೆ ಸಂಪರ್ಕ ಕಲ್ಪಿಸುವ ಪ್ರತಿ ರಸ್ತೆಗಳಲ್ಲೂ ಶ್ರೀ ಗವಿಸಿದ್ದೇಶ್ವರ ಜಾತ್ರಾ ಮಹೋತ್ಸವಕ್ಕೆ ಪಾದಯಾತ್ರೆ ಮಾಡುವ ಭಕ್ತಾದಿಗಳಿಗೆ ಪ್ರತಿ ವರ್ಷ ಉಪಹಾರ ಸೇವೆ ಮಾಡಿ ಶ್ರೀ ಗವಿಸಿದ್ದೇಶನ ಸೇವಾ ಕಾರ್ಯ ಕೈಗೊಳ್ಳುತ್ತಾ ಹಲವಾರು ಸಂಘ ಸಂಸ್ಥೆಗಳು, ಗೆಳೆಯರ ಬಳಗಗಳು ಭಕ್ತಿ ಪರಾಕಾಷ್ಠೆ ಮೆರೆಯುತ್ತಿದ್ದು. ಇಲ್ಲಿ ಪಾದಯಾತ್ರಿಗಳಿಗೆ



ಪೂರಿ ಚಟ್ನಿ, ಮಂಡಾಳ ಒಗ್ಗರಣೆ, ಚಹಾದ ವ್ಯವಸ್ಥೆಯನ್ನು ಮಾಡಿ ಭಕ್ತರ ಮನವನ್ನು ತಣಿಸಿದರು. ಕುಕನೂರು ತಾಲೂಕ ಟ್ಯಾಕ್ಸಿ ಮಾಲೀಕರು ಹಾಗೂ ಚಾಲಕರ ಸಂಘದ ವತಿಯಿಂದ ಪಾದಯಾತ್ರೆಯಲ್ಲಿ ಶ್ರೀಮಠಕ್ಕೆ ತೆರಳುತ್ತಿದ್ದ ಭಕ್ತಾದಿಗಳಿಗೆ ಬಗೆ ಬಗೆಯ ಹಣ್ಣುಗಳ ಮಿಶ್ರಣವನ್ನು ವಿತರಣೆ ಮಾಡುತ್ತಾ ಪಾದಯಾತ್ರೆಗಳ ಸೇವೆ ಮಾಡಿದರು.

## ಅಫಜಲಪೂರ ಪಟ್ಟಣಕ್ಕೆ ಎರಡು ನೂತನ ಬಸ್‌ಗಳಿಗೆ ಶಾಸಕ ಎಂ.ವೈ.ಪಾಟೀಲ ಅವರಿಂದ ಚಾಲನೆ

• **ಮಲ್ಲಮ್ಮನುಡಿವಾರ್ತೆ, ಕಲಬುರಗಿ:**

ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದಿಂದ ಅಫಜಲಪೂರ ಪಟ್ಟಣಕ್ಕೆ ಹಂಚಿಕೆಯಾದ 2 ನೂತನ ಬಸ್‌ಗಳಿಗೆ ಅಫಜಲಪೂರ ಶಾಸಕರಾದ ಎಂ.ವೈ.ಪಾಟೀಲ ಹಾಗೂ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷ ಅರುಣಕುಮಾರ ವೈ.ಪಾಟೀಲ ಅವರು ನೂತನ ಬಸ್‌ಗಳಿಗೆ ಭಾನುವಾರದಂದು ಚಾಲನೆ ನೀಡಿದರು.

ಸಾರ್ವಜನಿಕರಿಗೆ, ಸುಗಮ ಸುರಕ್ಷಿತ ಹಾಗೂ ಸಮಯಕ್ಕೆ ಸರಿಯಾಗಿ ಸಾರಿಗೆ ಸೇವೆ ಒದಗಿಸಲಾಗುವುದು. ನಿಗಮದ ಮುಖ್ಯ ಆದ್ಯತೆಯಾಗಿದ್ದು, ಅದರ ಭಾಗವಾಗಿ ಈ ನೂತನ ನಗರ ಸಾರಿಗೆ ಸೇವೆಯನ್ನು ಪ್ರಾರಂಭಿಸಲಾಗಿದೆ. ಈ ಸೇವೆಯಿಂದ ಅಫಜಲಪೂರ ಸಾರ್ವಜನಿಕ ವಿದ್ಯಾರ್ಥಿಗಳಿಗೆ ಹಾಗೂ ದೈನಂದಿನ ಪ್ರಯಾಣದಲ್ಲಿ ಉದ್ಯೋಗಸ್ಥರಿಗೆ ಬಹಳಷ್ಟು ಅನುಕೂಲವಾಗಲಿದೆ



ಎಂದು ಶಾಸಕರಾದ ಎಂ.ವೈ. ಪಾಟೀಲ ಹೇಳಿದರು.

ಜನಸೇವೆಯೇ ನಮ್ಮ ಧ್ಯೇಯ ಸುಗಮ ಸಾರಿಗೆಯೇ ನಮ್ಮ ಸಂಕಲ್ಪ, ಈ ಆಶಯದೊಂದಿಗೆ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮವು ಜನಪರ ಹಾಗು ವಿಶ್ವಾಸಾರ್ಹ ಸಾರಿಗೆ ಸೇವೆಯನ್ನು ನಿರಂತರವಾಗಿ ಮುಂದುವರೆಯಲ್ಲಿದೆ ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಅಫಜಲಪೂರ ತಹಶೀಲ್ದಾರರಾದ ಸಂಜುಕುಮಾರ ದಾಸರ್, ಸಂಸ್ಥೆಯ ಘಟಕ ವ್ಯವಸ್ಥಾಪಕರಾದ ಅಮೀನಪ್ಪ ಭೋವಿ, ಪಕ್ಷದ ಹಿರಿಯ ಮುಖಂಡರು, ಯುವ ಮುಖಂಡರು ಹಾಗೂ ಅಪಾರ ಸಂಖ್ಯೆಯ ಸಾರ್ವಜನಿಕರು ಭಾಗವಹಿಸಿದ್ದರು.

# ಒಂದು ವಾರದಲ್ಲಿ ವರದಿ ಸಲ್ಲಿಸಲು ಕಟ್ಟುನಿಟ್ಟಿನ ಸೂಚನೆ



ವರದಿ: ಡಿ.ಕೆ ದೇವಿಂದ್ರ.

• **ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ:**

ಯಾದಗಿರಿ: ರಾಜ್ಯ ಲೋಕಾಯುಕ್ತ ನ್ಯಾಯಮೂರ್ತಿಗಳಾದ ರಮಾಕಾಂತ ಚವ್ಹಾಣ ಅವರ ನೇತೃತ್ವದ ಅಧಿಕಾರಿಗಳ ತಂಡ ಭಾನುವಾರ ಜಿಲ್ಲೆಯಲ್ಲಿ ವಿವಿಧ ಸರ್ಕಾರಿ ಕಚೇರಿಗಳು, ಆಸ್ಪತ್ರೆಗಳು, ವಿದ್ಯಾರ್ಥಿ ನಿಲಯಗಳು ಹಾಗೂ ಸಾರ್ವಜನಿಕ ಸ್ಥಳಗಳಿಗೆ ದಿಢೀರ್ ಭೇಟಿ ನೀಡಿ ಸಮಗ್ರ ಪರಿಶೀಲನೆ ನಡೆಸಿತು.

ಪರಿಶೀಲನೆಯ ವೇಳೆ ಹಲವೆಡೆ ಗಂಭೀರ ನ್ಯೂನತೆಗಳು ಕಂಡುಬಂದ ಹಿನ್ನೆಲೆಯಲ್ಲಿ ಸಂಬಂಧಪಟ್ಟ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡ ಲೋಕಾಯುಕ್ತರು, ತಕ್ಷಣ ತಿದ್ದುಪಡಿ ಕ್ರಮ ಕೈಗೊಳ್ಳುವಂತೆ ಸೂಚಿಸಿದರು. ಕೈಗೊಂಡ ಕ್ರಮಗಳ ವಿವರವಾದ ವರದಿಯನ್ನು ಒಂದು ವಾರದೊಳಗೆ ಸಲ್ಲಿಸಬೇಕೆಂದು ಕಟ್ಟುನಿಟ್ಟಿನ ಆದೇಶ ನೀಡಿದರು.

ಘನ ತ್ಯಾಜ್ಯ ವಿಲೇವಾರಿ ಘಟಕದಲ್ಲಿ ಅವ್ಯವಸ್ಥೆ : ಯಾದಗಿರಿ ನಗರಸಭೆಯ ಬಬಲಾದ ಘನ ತ್ಯಾಜ್ಯ ವಿಲೇವಾರಿ ಘಟಕದಲ್ಲಿ ತ್ಯಾಜ್ಯವನ್ನು ಅನಧಿಕೃತ ಸ್ಥಳಗಳಲ್ಲಿ ಎಸೆಯುತ್ತಿರುವುದು, ಕಸದ ಸಂಗ್ರಹಣೆ ಸಂಪೂರ್ಣವಾಗಿಲ್ಲದಿರುವುದು ಹಾಗೂ ತ್ಯಾಜ್ಯವನ್ನು ಸರಿಯಾಗಿ ವರ್ಗೀಕರಿಸದ ಕಾರಣ ಮರುಬಳಕೆಗೆ ಯೋಗ್ಯ ವಸ್ತುಗಳು ನಾಶವಾಗುತ್ತಿರುವುದು ಗಮನಕ್ಕೆ ಬಂದಿತು. ಈ ಅವ್ಯವಸ್ಥೆಗಳ ಬಗ್ಗೆ ಲೋಕಾಯುಕ್ತರು ತೀವ್ರ ಅಸಮಾಧಾನ ವ್ಯಕ್ತಪಡಿಸಿ ತಕ್ಷಣ ಕ್ರಮಕ್ಕೆ ಸೂಚಿಸಿದರು.

ಯಿಮ್ಸ್ ಆಸ್ಪತ್ರೆಯಲ್ಲಿ ಸ್ವಚ್ಛತೆ ಕೊರತೆ : ಯಾದಗಿರಿ ಯಿಮ್ಸ್ ಆಸ್ಪತ್ರೆಯಲ್ಲಿ ಸ್ವಚ್ಛತೆಯ ಕೊರತೆ, ಚಿಕಿತ್ಸೆಗೆ ಬರುವ ರೋಗಿಗಳು ಹಾಗೂ ಸಾರ್ವಜನಿಕರಿಗೆ ವೈದ್ಯಕೀಯ ಸೌಲಭ್ಯಗಳ ಕುರಿತು ಸಮರ್ಪಕ ಮಾಹಿತಿ ನೀಡದಿರುವುದು ಕಂಡುಬಂದಿತು. ಸಿಬ್ಬಂದಿ ಮತ್ತು ಅಗತ್ಯ ವೈದ್ಯಕೀಯ ಉಪಕರಣಗಳ ಕೊರತೆಯೂ ಗಮನಕ್ಕೆ ಬಂದಿದ್ದು, ಈ ಕುರಿತು ಸರ್ಕಾರಕ್ಕೆ ವರದಿ ಸಲ್ಲಿಸಲಾಗುವುದೆಂದು ಲೋಕಾಯುಕ್ತರು ತಿಳಿಸಿದರು.

ಕೇಂದ್ರ ಬಸ್ ನಿಲ್ದಾಣದಲ್ಲೂ ಲೋಪ : ಯಾದಗಿರಿ ಕೇಂದ್ರ ಬಸ್ ನಿಲ್ದಾಣದಲ್ಲಿ ಶುದ್ಧ ಕುಡಿಯುವ ನೀರು, ಪ್ರಯಾಣಿಕರಿಗೆ ಸೂಕ್ತ ಆಸನ ವ್ಯವಸ್ಥೆ ಹಾಗೂ ಸೂಚನಾ ಫಲಕಗಳ ಕೊರತೆ ಕಂಡುಬಂತು. ಶೌಚಾಲಯಗಳಲ್ಲಿ ಸ್ವಚ್ಛತೆ ಇಲ್ಲದಿರುವುದು ಮತ್ತು ಗ್ರಾಮೀಣ ಪ್ರದೇಶಗಳಿಗೆ ಸಮಯಕ್ಕೆ ಸರಿಯಾಗಿ ಬಸ್‌ಗಳು ಸಂಚರಿಸದಿರುವ ಕುರಿತು ಸಾರ್ವಜನಿಕರು ಅಸಮಾಧಾನ ವ್ಯಕ್ತಪಡಿಸಿದರು.

ಹಾಸ್ಟೆಲ್‌ಗಳಲ್ಲಿ ಮೂಲಸೌಕರ್ಯ ಸಮಸ್ಯೆ : ಹಿಂದುಳಿದ ವರ್ಗಗಳ ಕಲ್ಯಾಣ, ಸಮಾಜ ಕಲ್ಯಾಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗಳ ವಿದ್ಯಾರ್ಥಿ ನಿಲಯಗಳಿಗೆ ಭೇಟಿ ನೀಡಿದ ಲೋಕಾಯುಕ್ತರು, ವಿದ್ಯಾರ್ಥಿಗಳಿಗೆ ಕಿಟ್ ವಿತರಣೆ ಸಮರ್ಪಕವಾಗಿಲ್ಲದಿರುವುದು, ಹಾಸ್ಟೆಲ್ ಆವರಣದಲ್ಲಿ ಸ್ವಚ್ಛತೆ ಕೊರತೆ ಹಾಗೂ ನಿಗದಿತ ಮೆನು ಪ್ರಕಾರ ಆಹಾರ ಒದಗಿಸಲಾಗುತ್ತಿಲ್ಲವೆಂಬ ದೂರುಗಳನ್ನು ಆಲಿಸಿದರು. ಈ ಹಿನ್ನೆಲೆಯಲ್ಲಿ ವಾರ್ಡನ್‌ಗಳಿಗೆ ಎಚ್ಚರಿಕೆ ನೀಡಿ ತಕ್ಷಣ ತಿದ್ದುಪಡಿ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಪರಿಶೀಲನೆ ಸಂದರ್ಭದಲ್ಲಿ ಲೋಕಾಯುಕ್ತ ಡಿಎಸ್‌ಪಿ ಜೆ.ಹೆಚ್. ಇನಾಮದಾರ್, ಮಲ್ಲಿಕಾರ್ಜುನ ಚುಕ್ಕಿ, ಪೂವಯ್ಯ ಕೆ.ಸಿ ಸೇರಿದಂತೆ ಪೊಲೀಸ್ ನಿರೀಕ್ಷಕರಾದ ಸಂಗಮೇಶ್, ಗೋವಿಂದರಾಜ, ಉಮಾಮಹೇಶ್, ಕಲ್ಲಪ್ಪ ಬಡಿಗೇರ, ಬಸವರಾಜ ಬುದ್ದಿನ್ನಿ, ಭೀಮನಗೌಡ ಬಿರಾದಾರ, ಪ್ರಭುಲಿಂಗಯ್ಯ ಹಿರೇಮಠ, ಸುನೀಲ್ ಮೇಗಲಮನಿ ಸೇರಿದಂತೆ ಇನ್ನಿತರ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಜಾವೀದ ಹವಲ್ದಾರಗೆ ಅಪ್ಪ ಪ್ರಶಸ್ತಿ ಪ್ರದಾನ



ವರದಿ: ಡಿ.ಕೆ ದೇವಿಂದ್ರ.

• **ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ**

ಅಪ್ಪ ಸಾಹಿತ್ಯ ಸಾಂಸ್ಕೃತಿಕ ಕಲಾ ವೇದಿಕೆ ವಿಜಯಪುರ ಇವರು ಕೂಡ ಮಾಡುವ 2026ನೇ ಸಾಲಿನ ರಾಜ್ಯ ಮಟ್ಟದ ಅಪ್ಪ ಪ್ರಶಸ್ತಿ ಯನ್ನು ಸಾಹಿತ್ಯ ಕ್ಷೇತ್ರ ದಲ್ಲಿ ಸುರಪುರದ ಸಾಹಿತಿಗಳಾದ ಜಾವೀದ ಹುಸೇನ ಹವಲ್ದಾರ ಅವರ ಸಾಹಿತ್ಯ ಸೇವೆ ಸಾಧನೆಯನ್ನು ಪರಿಗಣಿಸಿ ಅಪ್ಪ ಪ್ರಶಸ್ತಿಯನ್ನು ನೀಡಿ ಗೌರವಿಸಿದ್ದಾರೆ. ವಿಜಯಪುರದ ಚೇತನ ಕಾಲೇಜಿನ ಸಭಾಂಗಣದಲ್ಲಿ ನಡೆದ ಅಪ್ಪ ಉತ್ಸವ 2026ರ ಕಾರ್ಯಕ್ರಮದಲ್ಲಿ ನಾಡಿನ ಗಣ್ಯ ಮಾನ್ಯರು ಪ್ರಶಸ್ತಿಯನ್ನು ಸ್ವಿಕರಿಸಿದ್ದರೆ.

ಸುರಪುರ ಸಂಸ್ಥಾನದ ಪ್ರಸ್ತುತ ಅರಸರಾದ ಡಾ.ರಾಜಾ ಕೃಷ್ಣಪ್ಪ ನಾಯಕ ಬಲವಂತ ಬಹರಿ ಬಹದ್ದೂರ ರವರು ಸೇರಿ ನಾಡಿನ ಹಿರಿಯ ಸಾಹಿತಿಗಳು ಶುಭ ಹಾರೈಸಿ ಅಭಿನಂದಿಸಿದ್ದಾರೆ.

# ಜಿಲ್ಲಾ ಮಟ್ಟದ ಸಿರಿಧಾನ್ಯ ಪಾಕ ಸ್ಪರ್ಧೆ

• **ಮಲ್ಲಮ್ಮ ನುಡಿ ವಾರ್ತೆ,ಕಾರವಾರ:**

ಕೃಷಿ ಇಲಾಖೆಯಿಂದ ಪ್ರಸಕ್ತ ಸಾಲಿನ ಸಿರಿಧಾನ್ಯ ಮತ್ತು ಸಾವಯವ ಅಂತರ ರಾಷ್ಟ್ರೀಯ ವಾಣಿಜ್ಯ ಮೇಳದ ಅಂಗವಾಗಿ ಜಿಲ್ಲಾ ಮಟ್ಟದ ಸಿರಿಧಾನ್ಯ ಮತ್ತು ಮರೆತು ಹೋದ ಖಾದ್ಯಗಳ ಪಾಕ ಸ್ಪರ್ಧೆ ಜ.13 ರಂದು ಬೆಳಗ್ಗೆ 10.30 ಗಂಟೆಗೆ ಟಿ.ಆರ್.ಸಿ (ಖಿಖಅ) ಸಭಾಭವನ ಎಪಿಎಂಸಿ ಯಾರ್ಡ ಶಿರಸಿಯಲ್ಲಿ ಆಯೋಜಿಸಲಾಗಿದ್ದು, ಜನವರಿ 12 ರಂದು ಸಂಜೆ 5 ಘಂಟೆಯೊಳಗಾಗಿ ಹೆಸರು ನೋಂದಾಯಿಸಕೊಳ್ಳಬಹುದಾಗಿದೆ.

ಈ ಸ್ಪರ್ಧೆಯಲ್ಲಿ ವಿದ್ಯಾರ್ಥಿಗಳು, ಕೃಷಿ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳನ್ನು ಹೊರತುಪಡಿಸಿ ಎಲ್ಲಾ ಸಾರ್ವಜನಿಕರಿಗೆ ಭಾಗವಹಿಸಲು ಅವಕಾಶವಿರುತ್ತದೆ. ಅಭ್ಯರ್ಥಿಗಳು ತಮ್ಮ ಭಾವ ಚಿತ್ರದೊಂದಿಗೆ ಹೆಸರು, ವಿಳಾಸ ಮತ್ತು ತಯಾರಿಸುವ ಖಾದ್ಯ, ಬೇಕಾಗುವ ಸಾಮಗ್ರಿಗಳು ಹಾಗೂ ತಯಾರಿಸುವ ವಿಧಾನದ ಸಂಕ್ಷಿಪ್ತ ಮಾಹಿತಿಯೊಂದಿಗೆ ಅರ್ಜಿ ಸಲ್ಲಿಸಿ ಭಾಗವಹಿಸಬಹುದು. ಹಿಂದಿನ ವರ್ಷ ಬಹುಮಾನ ಪಡೆದ ಸ್ಪರ್ಧಿಗಳಿಗೆ ಪ್ರಸ್ತುತ ಸಾಲಿನಲ್ಲಿ ಭಾಗವಹಿಸಲು ಅವಕಾಶವಿರುವುದಿಲ್ಲ.

ಸ್ಪರ್ಧೆಯಲ್ಲಿ ಭಾಗವಹಿಸುವ ಅಭ್ಯರ್ಥಿಗಳಿಗೆ ಸೂಚನೆಗಳು: ಪ್ರತಿ ಸ್ಪರ್ಧಿಗೆ ಸಿರಿಧಾನ್ಯ ಸಿಹಿ/ಖಾರಾ/ಮರೆತು ಹೋದ ಖಾದ್ಯ ಇವುಗಳಲ್ಲಿ ಯಾವುದಾದರೂ ಒಂದು ವಿಭಾಗದಲ್ಲಿ ಮಾತ್ರ ಸ್ಪರ್ಧಿಸಲು ಅವಕಾಶವಿರುತ್ತದೆ. ಮರೆತು ಹೋದ ಖಾದ್ಯಗಳಡಿ ಸಿರಿಧಾನ್ಯಗಳನ್ನು ಹೊರತುಪಡಿಸಿ ಇತರ ಆಹಾರ ಸಾಮಗ್ರಿಗಳನ್ನು ಬಳಸಿ ತಯಾರಿಸುವುದು. ಮನೆಯಲ್ಲಿಯೇ ತಯಾರಿಸಿದ ಸಿರಿಧಾನ್ಯ/ಮರೆತು ಹೋದ ಖಾದ್ಯಗಳ ತಿನಿಸು (ಅಡುಗೆ) ಪ್ರದರ್ಶಿಸುವುದು. ಹಾಗೂ ಬಳಸುವ ಸಾಮಾಗ್ರಿಗಳ ಮಾದರಿಗಳನ್ನು ಪ್ರದರ್ಶಿಸುವುದು.

ತಯಾರಿಸಿದ ತಿನಿಸುಗಳ ಪ್ರದರ್ಶನ ತಯಾರಿಕೆ ಬಳಸಿದ ಪದಾರ್ಥಗಳು ತೋರಿಕೆ, ರುಚಿ, ಪರಿಮಳಗಳ ಮೇಲೆ ಅಂತಿಮ ನಿರ್ಧಾರ ಕೈಗೊಳ್ಳಲಾಗುವುದು. ತಮ್ಮ ಅರ್ಜಿಯಲ್ಲಿ ನಮೂದಿಸಿದ ತಿನಿಸುಗಳನ್ನು ಮನೆಯಲ್ಲಿ ತಯಾರಿಸಿ, ಜನವರಿ– 13 ರಂದು ಟಿ.ಆರ್.ಸಿ ಸಭಾಭವನ ಎಪಿಎಂಸಿ ಯಾರ್ಡ ಶಿರಸಿಯಲ್ಲಿ ಸರಿಯಾಗಿ ಬೆಳಗ್ಗೆ 10.30 ಘಂಟೆ ಪ್ರದರ್ಶಿಸುವುದು. ಸ್ಪರ್ಧೆಯ ಪ್ರತಿ ವಿಭಾಗದಲ್ಲೂ ಮೂರು ನಗದು ಬಹುಮಾನಗಳನ್ನು ನೀಡಲಾಗುವುದು. ಪ್ರಥಮ ಬಹುಮಾನ ರೂ. 5,000, ದ್ವಿತೀಯ ಬಹುಮಾನ ರೂ. 3000, ತೃತೀಯ ಬಹುಮಾನ ರೂ. 2000 ನೀಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಸಂಬಂಧಿಸಿದ ಆಯಾ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರ ಕಚೇರಿ ಅಥವಾ ಇಮೇಲ್ ವಿಳಾಸ jdauttarakannada1@gmail.com ಅಥವಾ ದೂರವಾಣಿ ಸಂಖ್ಯೆ 8884008017 ಸಂಪರ್ಕಿಸಿ ಹೆಸರು ನೋಂದಾಯಿಸಿಕೊಳ್ಳಬಹುದಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರಿಯಾಂಕ್ ಖರ್ಗೆ ಇಚ್ಛಾಶಕ್ತಿ: ತಲೆಯತ್ತಿದ ಪ್ರಬುದ್ಧ ಅಕಾಡೆಮಿ



• **ಮಲ್ಲಮ್ಮ ನುಡಿ ವಾರ್ತೆ,ಕಲಬುರಗಿ:**

ಯುಪಿಎಸ್‌ಸಿ, ಕೆಪಿಎಸ್‌ಸಿ, ಬ್ಯಾಂಕಿಂಗ್, ಪೊಲೀಸ್ ಮತ್ತು ಇತರ ಸರ್ಕಾರಿ ನೇಮಕಾತಿಗಳಲ್ಲಿ ಆಸಕ್ತಿ ಹೊಂದಿರುವ ಯುವಜನರಿಗೆ ತರಬೇತಿ ನೀಡುವ ಸಂಸ್ಥೆ ಕಲಬುರಗಿಯ ಜೇವರ್ಗಿ ರಸ್ತೆಯ ವಾಜಪೇಯಿ ಬಡಾವಣೆಯಲ್ಲಿ ಮುಂದಿನ ವಾರದಿಂದ ಕಾರ್ಯಾರಂಭ ಮಾಡಲಿದೆ. ಗ್ರಾಮೀಣಾಭಿರುದ್ಧಿ ಮತ್ತು ಪಂಚಾಯತ್ ಹಾಗೂ

ಕಲಬುರಗಿ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಕನಸಿನ ಕೂಸು ಈ ಪರೀಕ್ಷಾ ಪೂರ್ವ ತರಬೇತಿ ಕೇಂದ್ರವಾಗಿದೆ.

ಕಲ್ಯಾಣ ಕರ್ನಾಟಕದಾದ್ಯಂತ ಸ್ಪರ್ಧಾತ್ಮಕ–ಪರೀಕ್ಷಾ ಸಿದ್ಧತೆಯನ್ನು ಬಲಪಡಿಸಲಿದೆ. ಕ್ಯಾಂಪಸ್ 10,449.35 ಚದರ ಮೀ. ಸಾಮರ್ಥ್ಯ ಹೊಂದಿದ್ದು 1000 ವಿದ್ಯಾರ್ಥಿಗಳು ಏಕಕಾಲಕ್ಕೆ ಕುಳಿತುಕೊಳ್ಳಬಹುದಾಗಿದೆ. ಇದಕ್ಕಾಗಿ –29.52 ಕೋಟಿ ವೆಚ್ಚ ತಗುಲಿದೆ. ಕೆಇಎ ಪರೀಕ್ಷೆಯ ಮೂಲಕ ಪ್ರವೇಶ (ಅರ್ಹತೆ ಆಧಾರಿತ) ತರಬೇತಿ ನಡೆಯಲಿದೆ. ಸ್ಮಾರ್ಟ್ ತರಗತಿ ಕೊಠಡಿಗಳು / ಡಿಜಿಟಲ್ ವ್ಯವಸ್ಥೆ ಇರಲಿದೆ.

ಡಿಜಿಟಲ್ ಗ್ರಂಥಾಲಯ ಮತ್ತು ಅಧ್ಯಯನ ಸಂಪನ್ಮೂಲ ಕೇಂದ್ರ, ಪುಸ್ತಕಗಳು, ಆಕಾರ ಮೂಲಗಳು, ಹಿಂದಿನ ಪತ್ರಿಕೆಗಳು, ಸ್ವಯಂ–ಅಧ್ಯಯನ ಅವಕಾಶ ಸೇರಿ ಹಲವು ಸೌಲಭ್ಯ ಸಿಗಲಿದೆ. ಆನ್‌ಲೈನ್ ಪರೀಕ್ಷೆಗಳಿಗಾಗಿ ಕಂಪ್ಯೂಟರ್ ಲ್ಯಾಬ್, ಅಣಕು ಪರೀಕ್ಷೆಗಳು, ಇ–ಸಂಪನ್ಮೂಲಗಳು, ಅಣಕು ಪರೀಕ್ಷಾ ಸಭಾಂಗಣಗಳು, ಮಾರ್ಗದರ್ಶನ ಮತ್ತು ಸಮಾಲೋಚನಾ ಕೊಠಡಿಗಳು, ವಿದ್ಯಾರ್ಥಿ ವಿರಾಮ, ಗುಂಪು ಅಧ್ಯಯನ ಸ್ಥಳಗಳು ಇರಲಿವೆ. ಇದು ವಿದ್ಯಾರ್ಥಿಗಳಿಗೆ ಕಲಿಕೆಯ ಹೊಸ ಕೇಂದ್ರವಾಗಲಿದೆ. ನಾವು ಇಲ್ಲಿ ಸಂವಹನ, ಐಕ್ಯೂ ಮತ್ತು ಎಸ್‌ಕ್ಯೂ ಮತ್ತು ಸೈಕೋಮೆಟ್ರಿಕ್ ಪರೀಕ್ಷೆಗಳತ್ತಲೂ ಗಮನ ಹರಿಸುತ್ತಿದ್ದೇವೆ ಅಂತಾರೆ ಸಚಿವರು.



ಭಾಲ್ಕಿ : ಬೆಂಗಳೂರಿನ ಸಮಗ್ರ ಶಿಕ್ಷಣ ಕರ್ನಾಟಕ ಕಛೇರಿಯಲ್ಲಿ ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತೆ ಇಲಾಖೆ ಸಚಿವರಾದ ಮಧು ಬಂಗಾರಪ್ಪ ಅವರನ್ನು ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷರಾದ ಶಶಿಧರ ಕೋಸಂಬೆ ಭೇಟಿ ಮಾಡಿ, ಮಕ್ಕಳ ಶೈಕ್ಷಣಿಕ ಪ್ರಗತಿಯ ಕುರಿತು ಸಮಾಲೋಚನೆ ನಡೆಸಿ, ಸನ್ಮಾನಿಸಿದರು.ಈ ಸಂದರ್ಭದಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತೆ ಇಲಾಖೆಯ ಪ್ರಧಾನ ಕಾರ್ಯದರ್ಶಿ ರಶ್ಮಿ ಮಹೇಶ್ ಹಾಗೂ ಇತರರಿದ್ದರು.



ಖಾಜಾ ಬಂದಾನವಾಜ ವಿಶ್ವ ವಿದ್ಯಾಲಯದ ಕೇಂದ್ರ ಗ್ರಂಥಾಲಯವು ಸೋಮವಾರ" ಪಿ ಜಿ ಮೆಡಿಕಲ ವಿದ್ಯಾರ್ಥಿಗಳಲ್ಲಿ ಡೆಲ್ಲನೆಟ ಈ ಸಂಪನ್ಮೂಲಗಳ ಬಳಕೆ" ಕುರಿತು ಒಂದು ದಿನದ ಕಾರ್ಯಾಗಾರವನ್ನು ಏರ್ಪಡಿಸಲಾಗಿತ್ತು. ಕರ್ನಾಟಕ ಕೇಂದ್ರ ವಿಶ್ವ ವಿದ್ಯಾಲಯದ ಗ್ರಂಥ ಪಾಲಕ ಡಾ ಪಿ ಎಸ ಕಟ್ಟಿಮನಿ ಸಂಪನ್ಮೂಲ ವ್ಯಕ್ತಿಯಾಗಿದ್ದರು. ಕೆಬಿಎನ ವಿವಿ ಎಕ್ಸಾಮಿನೇಷನ ಕಂಟ್ರೋಲರ್ ಡಾ ಬಷೀರ ಮುಖ್ಯ ಅತಿಥಿಯಾಗಿದ್ದರು. ಮೆಡಿಕಲ ಡೀನ್ ಡಾ ಗುರುಪ್ರಸಾದ, ಮೈಕ್ರೋಬಿಲಜಿ ಮುಖ್ಯಸ್ಥ ಡಾ ಸಿದ್ದೇಶ ಸಿರವಾರ, ಸಹಾಯಕ ಗ್ರಂಥಪಾಲಕ ಸಮಸ್ತ, ಡಾ ಸುಜಾತಾ ಹಾಗೂ ಎಲ್ಲ ಮೆಡಿಕಲ ಪಿ ಜಿ ವಿದ್ಯಾರ್ಥಿಗಳು ಹಾಜರಿದ್ದರು.

# ಕೃಷಿ ಮೇಳದ ಪ್ರಯುಕ್ತ ಶ್ರೇಷ್ಠ ಕೃಷಿಕ/ಕೃಷಿ ಮಹಿಳೆ ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ,**

ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯವು 2026ರ ಜನವರಿ ತಿಂಗಳಿನಲ್ಲಿ ರಾಯಚೂರು ಮುಖ್ಯ ಆವರಣದಲ್ಲಿ "ಕೃಷಿ ಮೇಳ"ವನ್ನು ಆಯೋಜಿಸುತ್ತಿದೆ. ಕೃಷಿ ಮೇಳದ ಪ್ರಯುಕ್ತ ಶ್ರೇಷ್ಠ ಕೃಷಿಕ/ಕೃಷಿ ಮಹಿಳೆ ಪ್ರಶಸ್ತಿಗೆ ಅರ್ಜಿ ಆಹ್ವಾನಿಸಲಾಗಿದೆ ಎಂದು ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ವಿಸ್ತರಣಾ ನಿರ್ದೇಶಕರು ತಿಳಿಸಿದ್ದಾರೆ.

ಕೃಷಿ ಮೇಳದ ಪ್ರಯುಕ್ತ ಕಲ್ಯಾಣ ಕರ್ನಾಟಕ ಭಾಗದ ಪ್ರತಿ ಜಿಲ್ಲಾವಾರು ಶ್ರೇಷ್ಠ ಕೃಷಿಕ ಹಾಗೂ ಕೃಷಿ ಮಹಿಳೆಯನ್ನು ಗುರುತಿಸಿ ಪ್ರಮಾಣ ಪತ್ರವನ್ನು ನೀಡಿ ಸನ್ಮಾನಿಸಲಾಗುತ್ತಿದೆ. ಕೃಷಿಗೆ ಸಂಬಂಧಿಸಿದ ಹೊಸ ತಂತ್ರಜ್ಞಾನಗಳ ಬಗ್ಗೆ ರೈತ ಬಾಂಧವರಿಗೆ ಮಾಹಿತಿ ಒದಗಿಸುವುದು ಹಾಗೂ ಅವುಗಳನ್ನು ಅಳವಡಿಸಲು ಪ್ರೇರೇಪಿಸುವ ಉದ್ದೇಶ ಈ ಮೇಳದ್ದಾಗಿದೆ. ನಿಗದಿತ ಅರ್ಜಿ ನಮೂನೆಯನ್ನು ಆಯಾ ಜಿಲ್ಲೆಗಳ ಕೃಷಿ ವಿಜ್ಞಾನ ಕೇಂದ್ರ, ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರ ಹಾಗೂ ರಾಯಚೂರ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ೀಣಣಥಿ://ಣಚಿಡಿಚುಛಿಣಡಿ. ಇಚಿಡಿಟಿಚಿಣಚಿಇಚಿ.ರಠತ.ಎಟ ವೆಬ್‌ಸೈಟ್‌ದಿಂದ ಪಡೆದು ಭರ್ತಿ ಮಾಡಿ 2026ರ ಜನವರಿ 16 ರ ಸಂಜೆ 5 ಗಂಟೆಯೊಳಗಾಗಿ ಅರ್ಜಿಗಳನ್ನು ಆಯಾ ಜಿಲ್ಲೆಗಳ ಕೃಷಿ ವಿಜ್ಞಾನ ಕೇಂದ್ರ ಹಾಗೂ ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರಗಳ ಕಚೇರಿಯಲ್ಲಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಹಿರಿಯ ವಿಜ್ಞಾನಿ ಮತ್ತು ಮುಖ್ಯಸ್ಥರು, ಕೃಷಿ ವಿಜ್ಞಾನ ಕೇಂದ್ರ, ರಾಯಚೂರು, ಬೀದರ, ಕಲಬುರಗಿ, ರದ್ದೇವಾಡಗಿ, ಗಂಗಾವತಿ, ಕವಡಿಮಟ್ಟಿ, ಹಗರಿ ಮತ್ತು ಮುಖ್ಯಸ್ಥರು, ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರ, ಭೀಮರಾಯನಗುಡಿ, ಲಿಂಗಸೂಗೂರು, ಕೊಪ್ಪಳ, ನಾಲವಾರ, ದೇವದುರ್ಗ, ಹೂವಿನಹಡಗಲಿ ಹಾಗೂ ಮೊಬೈಲ್ ಸಂಖ್ಯೆಗಳಾದ 9480696314/315/316/317/318/319/334/335/336 ಗಳಿಗೆ ಸಂಪರ್ಕಿಸಲು ಕೋರಲಾಗಿದೆ.

# ಶಾಸಕ ಪದಕ್ಕೆ ಕಳಂಕ ತಂದ ಹುಮನಾಬಾದ್ ಶಾಸಕ

• **ಮಲ್ಲಮ್ಮ ನುಡಿ ವಾರ್ತೆ, ಹುಮನಾಬಾದ್:**

ಹುಮನಾಬಾದ್ ಕ್ಷೇತ್ರದ ಪ್ರಸ್ತುತ ಶಾಸಕರ ವರ್ತನೆ ಮತ್ತು ಕಾರ್ಯಶೈಲಿಗೆ ಮಾಜಿ ಸಚಿವ ರಾಜಶೇಖರ ಪಾಟೀಲ ಅವರು ತೀವ್ರ ಅಸಮಾಧಾನ ವ್ಯಕ್ತಪಡಿಸಿ, ಸಾರ್ವಜನಿಕವಾಗಿ ನೀತಿ ಪಾಠ ಹೇಳಿದ್ದಾರೆ. ಶಾಸಕರ ಸ್ಥಾನಮಾನಕ್ಕೆ ತಕ್ಕಂತೆ ನಡೆದುಕೊಳ್ಳದೆ, ಕ್ಷೇತ್ರದ ಗೌರವಕ್ಕೆ ಧಕ್ಕೆ ತರುತ್ತಿರುವುದು ವಿಷಾದಕರ ಎಂದು ಅವರು ಕಿಡಿಕಾರಿದರು. ಸೋಮವಾರ ಅವರ ನಿವಾಸದಲ್ಲಿ ಕರೆದ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದರು. ಶಾಸಕರು ಜನಸೇವೆಯ ಪ್ರತಿನಿಧಿಯಾಗಿದ್ದು, ಸಂವಿಧಾನ ಮತ್ತು ನೈತಿಕ ಮೌಲ್ಯಗಳನ್ನು ಗೌರವಿಸಬೇಕು. ಆದರೆ ಹುಮನಾಬಾದ್ ಶಾಸಕರ ನಡೆ ಕ್ಷೇತ್ರದ ಜನತೆಗೆ ನಿರಾಸೆ ಉಂಟುಮಾಡುತ್ತಿದೆ. ಇಂತಹ ವರ್ತನೆಯಿಂದ 'ಶಾಸಕ' ಎಂಬ ಗೌರವದ ಪದಕ್ಕೆ ಕಳ ಬರುತ್ತಿದೆ ಎಂದು ಮಾಜಿ ಸ ಪಾಟೀಲ ಆರೋಪಿಸಿದರು. ಕ್ಷೇತ್ರದ ಅಭಿವೃದ್ಧಿ, ಜನಸಾಮಾನ್ಯರ ಸಮಸ್ಯೆಗಳ ಪರಿಹಾರಕ್ಕಿಂತ ವೈಯಕ್ತಿಕ ರಾಜಕಾರಣಕ್ಕೆ ಹೆಚ್ಚಿನ ಒತ್ತು ನೀಡಲಾಗುತ್ತಿದೆ.



ಇದರಿಂದ ಹುಮನಾಬಾದ್ ಜನತೆ ಬೇಸತ್ತಿದ್ದು, ಬದಲಾವಣೆಗಾಗಿ ಜನರು ಚಿಂತನೆ ನಡೆಸುತ್ತಿದ್ದಾರೆ ಎಂದು ಹೇಳಿದರು. ಕಾನೂನು ಸುವ್ಯವಸ್ಥೆಗೆ ಧಕ್ಕೆ ತರಬಾರದು ಕಾರ್ಯಕರ್ತರಲ್ಲಿ ಮನವಿ ಮಾಡಿದ ಪಾಟೀಲ: ಕಾಂಗ್ರೇಸ್ ಪಕ್ಷದ ಕಾರ್ಯಕರ್ತರು ಯಾವುದೇ ತರಹದ ಅಹಿತಕರ ಘಟನೆಗೆ ಕೈ ಹಾಕಬಾರದು. ಹುಮನಾಬಾದ್ ಕ್ಷೇತ್ರವನ್ನು ಶಾಂತತೆಯಿಂದ ಕಾಪಾಡಬೇಕಾಗಿದೆ. ಉದ್ದೇಶ ಪೂರ್ವಕವಾಗಿ ಶಾಸಕರು ಇಲ್ಲಿ ಅಶಾಂತಿ ಮೂಡಿಸುವ ಹುನ್ನಾರ ನಡೆಸುತ್ತಿದ್ದಾರೆ. ಕ್ಷೇತ್ರದ ಜನರು ಧೈರ್ಯದಿಂದ ಇರಬೇಕು. ನಿಮ್ಮ ಜೋತೆ ಬಸವರಾಜ ಪಾಟೀಲ ಪರಿವಾರ ಇದೆ ಎಂದು ಮಾಜಿ ಸಚಿವ ರಾಜಶೇಖರ ಪಾಟೀಲ ತಿಳಿಸಿದ್ದಾರೆ. ಈ ಸಂದರ್ಬದಲ್ಲಿ ವಿಧಾನ ಪರಿಷತ್ ಸದಸ್ಯರಾದ ಡಾ. ಚಂದ್ರಶೇಖರ ಪಾಟೀಲ, ಭೀಮರಾವ ಪಾಟೀಲ, ಮಾಜಿ ಎಂಎಲ್ ಸಿ ಅರವಿಂದ ಕುಮಾರ ಅರಳಿ, ಸೇರಿದಂತೆ ಇತರರಿದ್ದರು.

# ಡಿ.ಸಿ. ಕಚೇರಿಗೆ ಕರ್ನಾಟಕ ಲೋಕಾಯುಕ್ತರ ದಿಢೀರ ಭೇಟಿ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:**

ದೇಶಕ್ಕಾಗಿ ದುಡಿದ ಮಾಜಿ ಸೈನಿಕರಿಗೆ ಅವರ ಕೋರಿಕೆಯಂತೆ ವಿಳಂಬ ಮಾಡದೆ ಪ್ರಥಮಾದ್ಯತೆ ಮೇಲೆ ನಿವೇಶನ, ಜಮೀನು ಮಂಜೂರು ಮಾಡಬೇಕು ಎಂದು ಕರ್ನಾಟಕ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಸೂಚನೆ ನೀಡಿದರು.

ಮೂರು ದಿನಗಳ ಕಾಲ ಕಲ್ಯಾಣ ಕರ್ನಾಟಕ ಭಾಗದ ಕಲಬುರಗಿ, ಬೀದರ, ರಾಯಚೂರು, ಯಾದಗಿರಿ ಪ್ರವಾಸದಲ್ಲಿರುವ ಅವರು ಸೋಮವಾರ ಮಧ್ಯಾಹ್ನ ಕಲಬುರಗಿ ನಗರದ ಜಿಲ್ಲಾಧಿಕಾರಿಗಳ ಕಚೇರಿಗೆ ದಿಢೀರ್ ಭೇಟಿ ನೀಡಿ ವಿವಿಧ ಶಾಖೆಗಳ ಪರಿಶೀಲಿಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಜಮೀನು ಮಂಜೂರಾತಿಗೆ ಮಾಜಿ ಸೈನಿಕರಿಂದ ಸಲ್ಲಿಕೆಯಾದ 55 ಪ್ರಸ್ತಾವನೆಯಲ್ಲಿ ಇದೂವರೆಗೆ 7 ಪ್ರಕರಣಗಳಲ್ಲಿ ಮಾತ್ರ ಮಂಜೂರಾತಿ ದೊರೆತಿದೆ. ಉಳಿದರ ಕಥೆ ಏನು? ಎಂದು ಪ್ರಶ್ನಿಸಿದ ಅವರು, ವಿವಿಧ ಹಂತದಲ್ಲಿರುವ ಎಲ್ಲಾ ಪ್ರಸ್ತಾವನೆಗಳನ್ನು ಕೂಡಲೆ ವಿಲೇವಾರಿ ಮಾಡುವಂತೆ ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಅವರಿಗೆ ನಿರ್ದೇಶನ ನೀಡಿದರು.

ಕಲಬುರಗಿ, ಬೀದರ, ರಾಯಚೂರು, ಯಾದಗಿರಿ ಜಿಲ್ಲೆಗಳಲ್ಲಿ ಈ ರೀತಿಯ ಮಾಜಿ ಸೈನಿಕರ ಭೂ ಮಂಜೂರಾತಿಯ ಅನೇಕ ಪ್ರಕರಣಗಳಲ್ಲಿ ಬಾಕಿ ಇದ್ದು, ಲೋಕಾಯುಕ್ತ ಸಂಸ್ಥೆ ಇದನ್ನು ಗಂಭೀರವಾಗಿ ಪರಿಗಣಿಸಿದೆ. ಸ್ವಯಂ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಲಿದೆ ಎಂದರು.

ಇನ್ನು ಕೆರೆಗಳ ನಿರ್ವಹಣೆ ಮಾಡುತ್ತಿರುವ ಶಾಖೆಯ ಸಿಬ್ಬಂದಿಗಳಿಂದ ಜಿಲ್ಲೆಯಾದ್ಯಾಂತ 254 ಕೆರೆಗಳಿದ್ದು, ಸರ್ವೆ ಕಾರ್ಯ ಮುಗಿದಿದೆ. ಅದರಲ್ಲಿ 6 ಕೆರೆ ಅತಿಕ್ರಮಣ ಆಗಿರುವ ಕುರಿತು ವಿಚಾರಣೆಯಲ್ಲಿದೆ ಎಂಬ ಮಾಹಿತಿ ಅರಿತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಅವರು, ಹಾಗಾದರೆ ಉಳಿದ ಕೆರೆ ಅತಿಕ್ರಮಣದಿಂದ ಮುಕ್ತವಾಗಿವೆ ಎಂದು ಪ್ರಶ್ನಿಸಿ, ಈ ಕುರಿತು ಸಂಜೆ ನಡೆಯುವ ಸಭೆಯಲ್ಲಿ ಸುದೀರ್ಘವಾಗಿ ಚರ್ಚಿಸಲಾಗುವುದು. ಸಮಗ್ರ ಮಾಹಿತಿಯೊಂದಿಗೆ ಬನ್ನಿ ಎಂದರು.



ಇದಲ್ಲದೆ ಸಿಂಧುತ್ವ ಶಾಖೆ, ಕಂದಾಯ ಕೋರ್ಟ್ ಕೇಸ್, ಭೂ ಪರಿವರ್ತನೆ ಶಾಖೆಗೂ ಭೇಟಿ ನೀಡಿದ ನ್ಯಾಯಮೂರ್ತಿಗಳು ಕಳೆದ 2025ರ ಕ್ಯಾಲೆಂಡರ್ ವರ್ಷದಲ್ಲಿ ಜನವರಿ ದಿಂದ ಡಿಸೆಂಬರ್ ವರೆಗೆ ಸ್ವೀಕೃತ ಅರ್ಜಿ, ವಿಲೇವಾರಿ, ಬಾಕಿ ವಿವರ ಸಲ್ಲಿಸುವಂತೆ ಸಿಬ್ಬಂದಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಕೆ.ಕೆ.ಅರ್.ಡಿ.ಬಿ. ಕಾಮಗಾರಿ ವರ್ಷದ ಮಾಹಿತಿ ಕೊಡಿ: ಕಲ್ಯಾಣ ಕರ್ನಾಟಕ ಪ್ರದೇಶದ ಅಭಿವೃದ್ಧಿಗೆ ಕೆ.ಕೆ.ಆರ್.ಡಿ.ಬಿ ಮಂಡಳಿ ರಚಿಸಲಾಗಿ ಅದರ ಮುಖೇನ ಪ್ರದೇಶದ ಜಿಲ್ಲೆಗಳಿಗೆ ಹೆಚ್ಚಿನ ಅನುದಾನ ಸರ್ಕಾರ ನೀಡುತ್ತಿದೆ. ಆದರೆ ಈ ಅನುದಾನ ಸಮರ್ಪಕವಾಗಿ ಬಳಕೆಯಾಗುತ್ತಿಲ್ಲ, ಕಾಮಗಾರಿಗಳು ಗುಣಮಟ್ಟದಿಂದ ಕೂಡಿಲ್ಲ ಎಂದು ದೂರುಗಳು ಸ್ವೀಕೃತವಾಗಿವೆ. ಹೀಗಾಗಿ ಜನವರಿ–2025 ರಿಂದ ಇದೂವರೆಗೆ ಜನಪ್ರತಿನಿಧಿಗಳಿಂದ ಸ್ವೀಕೃತವಾದ ಪ್ರಸ್ತಾವನೆ, ಮಂಡಳಿಗೆ ಶಿಫಾರಸ್ಸು ಮಾಡಿರುವ, ಅಡಳಿತಾತ್ಮಕ ಮಂಜೂರಾತಿ ಹಾಗೂ ಕಾಮಗಾರಿಯ ಪ್ರಸಕ್ತ ಹಂತದ ಬಗ್ಗೆ ವಿವರವಾದ ವರದಿ ಸಲ್ಲಿಸುವಂತೆ ನ್ಯಾ.ಬಿ.ಎಸ್.ಪಾಟೀಲ ಎ.ಡಿ.ಸಿ. ಅವರಿಗೆ ಸೂಚಿಸಿದರು.

ವಾರದಲ್ಲಿ ಸಮಸ್ಯೆ ಬಗೆಹರಿಸಿ: ಚಿತ್ತಾಪುರ ತಾಲೂಕಿನ ವಾಡಿ ಗ್ರಾಮದ ಸರ್ವೇ ನಂ.180/1 ರಲ್ಲಿ 2.18 ಎಕರೆ ಜಮೀನು ಭೂಸ್ವಾಧೀನ ಮಾಡಿಕೊಂಡಿದ್ದು, ಭೂಮಿ ಕಳೆದುಕೊಂಡ ನಿರಾಶ್ರಿತರ ಹೆಸರು ಮೊಹಮ್ಮದ್ ಖಾಜಾ ಬದಲಾಗಿ ಮೊಹಮ್ಮದ್ ಜಾಫರ್ ಆಗಿದ್ದು, ಇದನ್ನು ಸರಿಪಡಿಸುವಂತೆ ಕಳೆದ 25 ವರ್ಷದಿಂದ ಕಚೇರಿಗೆ ಅಲೆದಾಡುತ್ತಿರುವೆ. ಡಿ.ಸಿ. ಕಚೇರಿಯಿಂದ ಆದೇಶ ಸಹ ಮಾಡಲಾಗಿದೆ ಆದರೆ ಅನುಷ್ಠಾನಕ್ಕೆ ಬಂದಿಲ್ಲ ಎಂದು ಇದೇ ಸಂದರ್ಭದಲ್ಲಿ ಸಾರ್ವಜನಿಕರೊಬ್ಬರು ನ್ಯಾಯಮೂರ್ತಿಗಳ ಗಮನಕ್ಕೆ ತಂದರು. ಹೆಸರಿ ಸರಿಪಡಿಸಲು ಇಷ್ಟು ವರ್ಷ ಬೇಕೆ? ಎಂದು ಅಸಮಾಧಾನ ವ್ಯಕ್ತಪಡಿಸಿ ಒಂದು ವಾರದೊಳಗೆ ಸಮಸ್ಯೆ ಬಗೆಹರಿಸಬೇಕು ಎಂದು ಅಧಿಕಾರಿಗಳಿಗೆ ನ್ಯಾ.ಬಿ.ಎಸ್.ಪಾಟೀಲ ಸೂಚಿಸಿದರು.

ಕರ್ನಾಟಕ ಲೋಕಾಯುಕ್ತ ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕ ಮನೀಷ್ ಖರ್ಬಿಕರ್, ಎಸ್.ಪಿ. ಸಿದ್ದರಾಜು, ಲೋಕಾಯುಕ್ತ ಸಂಸ್ಥೆಯ ನ್ಯಾಯಾಧೀಶರಾದ ಶ್ರೀನಾಥ್ ಕೆ., ವಿಜಯಾನಂದ., ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಸಹಾಯಕ ಆಯುಕ್ತ ಪ್ರಭುರೆಡ್ಡಿ, ತಹಶೀಲ್ದಾರ ಆನಂದಶೀಲ ಕೆ. ಇದ್ದರು.

# ಜನತೆಯ ಅಪೇಕ್ಷೆಯಂತೆ ಉತ್ಸವ ನಡೆಸುತ್ತಿದ್ದೇವೆ: ಡಾ.ಶರಣಪ್ರಕಾಶ ಪಾಟೀಲ



• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**

ರಾಯಚೂರು ಜಿಲ್ಲೆಯ ಜನತೆಯ ಬಹುದಿನಗಳ ಬೇಡಿಕೆಯಂತೆ ನಾವು ಈ ಬಾರಿ ರಾಯಚೂರು ಉತ್ಸವ ಹಮ್ಮಿಕೊಂಡಿದ್ದೇವೆ. ಜಿಲ್ಲೆಯ ಪ್ರತಿಯೊಂದು ಸಂಘ–ಸಂಸ್ಥೆಗಳು, ಎಲ್ಲ ಶಾಲಾ ಕಾಲೇಜುಗಳು, ಇನ್ನಿತರ ಎಲ್ಲರೂ ಈ ಉತ್ಸವದಲ್ಲಿ ಸಕ್ರಿಯ ಭಾಗಿಯಾಗಿ ಉತ್ಸವ ಯಶಗೊಳಸಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ ಪಾಟೀಲ ಕೋರಿದರು.

ರಾಯಚೂರು ಉತ್ಸವದ ಪ್ರಚಾರಾರ್ಥ ಜನವರಿ 4ರಂದು ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಹಮ್ಮಿಕೊಂಡಿದ್ದ ಕ್ರೀಡೋತ್ಸವಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಸಚಿವರಾದ ಎನ್ ಎಸ್ ಬೋಸರಾಜು ಅವರು ಮಾತನಾಡಿ, ಬಹಳ ವರ್ಷಗಳ ನಂತರ ನಾವು ರಾಯಚೂರು ಜನತೆಗೆ ರಾಯಚೂರು ಉತ್ಸವದ ಕೊಡುಗೆ ನೀಡುತ್ತಿದ್ದೇವೆ. ಪತ್ರಿಕೆಗಳು ಸಹ ವಿಶೇಷ ವರದಿ ಪ್ರಕಟಿಸಿ ಉತ್ಸವ ಆಗಬೇಕು ಎಂದು ಒತ್ತಾಯ ಮಾಡಿವೆ. ವಿದ್ಯುನ್ಮಾನ ಮಾಧ್ಯಮದವರು ಉತ್ಸವ ಮಾಡಿ ಎಂದು ಸಲಹೆ ಮಾಡುತ್ತಿದ್ದರು. ಈ ಹಿನ್ನೆಲೆಯಲ್ಲಿ ಜನತೆಯ ಬೇಡಿಕೆಯನುಸಾರ ಉತ್ಸವ ನಿಗದಿ ಮಾಡಿದ್ದೇವೆ ಎಂದು ತಿಳಿಸಿದರು. ಅಧ್ಯಕ್ಷತೆ ವಹಿಸಿದ್ದ ಶಾಸಕರಾದ ಡಾ.ಎಸ್ ಶಿವರಾಜ ಪಾಟೀಲ ಮಾತನಾಡಿ, ಸಾರ್ವಜನಿಕರ ಸಹಭಾಗಿತ್ವ ಇದ್ದಾಗ ಮಾತ್ರ ಉತ್ಸವ ಯಶಗೊಳ್ಳಲು ಸಾಧ್ಯ. ಹಾಗಾಗಿ ಉತ್ಸವದ ಬಗ್ಗೆ ವಿಶೇಷ ಪ್ರಚಾರ ನಡೆಯಬೇಕು ಎಂದರು. ಉತ್ಸವ ನಿಮಿತ್ತ ಹಮ್ಮಿಕೊಂಡ ಈ ಕ್ರೀಡಾ ಉತ್ಸವದಲ್ಲಿ ಸ್ಥಳೀಯ ಕ್ರೀಡೆಗಳಿಗೆ ಆದ್ಯತೆ ನೀಡಬೇಕು ಎಂದು ಶಾಸಕರು ಸಲಹೆ ಮಾಡಿದರು.

ಸಮಾರಂಭದಲ್ಲಿ ಶಾಸಕರಾದ ಹಂಪನಗೌಡ ಬಾದರ್ಲಿ, ಬಸನಗೌಡ ದದ್ದಲ್, ಎ. ವಸಂತಕುಮಾರ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರಣಾಂಕ್ಷುಗಿರಿ, ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಅಪರ ಜಿಲ್ಲಾಧಿಕಾರಿ ಶಿವಾನಂದ, ಮುಖಂಡರಾದ ಪವನ್ ಕಿಶೋರ ಪಾಟೀಲ, ಡಾ.ರಝಾಕ್ ಉಸ್ತಾದ್, ಪಾಲಿಕೆಯ ಉಪ ಆಯುಕ್ತರಾದ ಸಂತೋಷರಾಣಿ, ತಹಸೀಲ್ದಾರರಾದ ಸುರೇಶ ವರ್ಮಾ, ಅಮರೇಶ ಬಿರಾದಾರ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಅಧಿಕಾರಿ ವೀರೇಶ ನಾಯಕ ಹಾಗೂ ಇತರರು ಇದ್ದರು. ಪಾಲಿಕೆಯ ಸಮಿತಿ ಕಾರ್ಯದರ್ಶಿ ಕೃಷ್ಣ ಶಾವಂತಗೇರಿ ಸ್ವಾಗತಿಸಿದರು.

ಮೊದಲನೇ ಪಂದ್ಯಕ್ಕೆ ಚಾಲನೆ: ಅಧಿಕಾರಿಗಳು ಮತ್ತು ಸಿಬ್ಬಂದಿ ಒಳಗೊಂಡ ಮಹಾನಗರ ಪಾಲಿಕೆಯ ತಂಡ ಹಾಗೂ ಶಿಕ್ಷಣ ಇಲಾಖೆಯ ತಂಡದ ಮಧ್ಯೆ ಮೊದಲನೇ ಪಂದ್ಯಾರಂಭಕ್ಕೆ ಸಚಿವರು ಮತ್ತು ಶಾಸಕರು ಜನವರಿ 04ರಂದು ಚಾಲನೆ ನೀಡಿದರು. ಕ್ರೀಡೋತ್ಸವದಲ್ಲಿ ಸಚಿವರು ಮತ್ತು ಶಾಸಕರು ಕ್ರಿಕೆಟ್ ಬ್ಯಾಟ್ ಬೀಸಿ ಮತ್ತು ಬಾಲ್ ಹಾಕಿ ಪಂದ್ಯಕ್ಕೆ ಚಾಲನೆ ನೀಡಿದ್ದು ವಿಶೇಷವಾಗಿತ್ತು.

# ನಿಷೇಧಿತ ಮಲಗುಂಡಿ ಸ್ವಚ್ಛತೆ ಕಾರ್ಯ: ಅಧಿಕಾರಿಗಳ ವಿರುದ್ಧ ಕ್ರಮಕ್ಕೆ ಒತ್ತಾಯ



• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**

ವೈದ್ಯಕೀಯ ವಿಜ್ಞಾನ ವೈದ್ಯಕೀಯ ರಿಮ್ಸ್ ನಿರ್ದೇಶಕರು ಹಾಗೂ ಆಡಳಿತಾಧಿಕಾರಿಗಳು ಹೊರಗುತ್ತಿಗೆ ಸಂಸ್ಥೆಯೊಂದಿಗೆ ಶಾಮೀಲಾಗಿ ಬಡ ಸಫಾಯಿ ಕರ್ಮಚಾರಿಗಳಿಂದ ಅಮಾನುಷ ಮತ್ತು ನಿಷೇಧಿತ ಮಲಗುಂಡಿ ಸ್ವಷ್ಟ ಕಾರ್ಯ ಮಾಡಿಸುತ್ತಿರುವ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಬಹುಜನ ದಲಿತ ಸಂರ್ಘಷ ಸಮಿತಿ ಮುಖಂಡ ಪ್ರಸಾದ ಭಂಡಾರಿ ಒತ್ತಾಯಿಸಿದ್ದಾರೆ.

ಅವರಿಂದು ನಗರದ ಸುದ್ದಿಗಾರರೊಂದಿಗೆ ಮಾತನಾಡುತ್ತಾ ರಿಮ್ಸ್ ನಿರ್ದೇಶಕರು ಹಾಗೂ ಆಡಳಿತ ಅಧಿಕಾರಿ ಹೊರಗುತ್ತಿಗೆ ಸಂಸ್ಥೆಯೊಂದಿಗೆ ಶಾಮೀಲಾಗಿ, ಬಡ ಸಫಾಯಿ ಕರ್ಮಚಾರಿಗಳಿಂದ ಅಮಾನುಷ ಹಾಗೂ ಕಾನೂನು ಬಾಹಿರವಾಗಿ ನಿಷೇಧಿತ ಮಲಗುಂಡಿ ಸ್ವಚ್ಛತೆ ಮಾಡಿಸುತ್ತಿರುವುದು ಅತ್ಯಂತ ಖಂಡನೀಯ ಎಂದರು.

ಮ್ಯಾನುವೆಲ್ ಸ್ಕ್ಯಾವೆಂಜರ್‌ಗಳ ನೇಮಕಾತಿ ನಿಷೇಧ ಮತ್ತು ಪುನರ್ವಸತಿ ಕಾಯ್ದೆ 20130 ಪ್ರಕಾರ ಇಂತಹ ಕೆಲಸ ಸಂಪೂರ್ಣವಾಗಿ ನಿಷೇಧಿತವಾಗಿದ್ದರೂ, ವೈದ್ಯಕೀಯ ಶಿಕ್ಷಣ ಭೋದಿಸುವ ಮತ್ತು ಆರೋಗ್ಯ ಸೇವೆಗಳನ್ನು ನೀಡುತ್ತಿರುವ ರಾಯಚೂರು ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿ ಈ ಕೆಲಸ ನಡೆದಿರುವುದು ಅತ್ಯಂತ ನಾಚಿಕೆಗೇಡಿನ ವಿಷಯವಾಗಿದೆ ಮತ್ತು ಈ ಅಮಾನುಷ ಕೆಲಸವನ್ನು ಪರಿಶಿಷ್ಟ ಜಾತಿಗೆ ಸೇರಿದ ಜನರಿಂದಲೆ ಮಾಡಿಸಲಾಗುತ್ತಿದ್ದು ಪರಿಶಿಷ್ಟ ಜಾತಿ ಸಮುದಾಯದ ಹಿತ ರಕ್ಷಣೆಯನ್ನು ಮಾಡಬೇಕಾದ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಈ

ಅಮಾನುಷ ಪದ್ಧತಿಯನ್ನು ತಡೆಯದೆ ಮೌನ ವಹಿಸಿರುವುದು ಗಂಭೀರ ನಿರ್ಲಕ್ಷ್ಯವಾಗಿದೆ ಎಂದರು.

ಮ್ಯಾನುವೆಲ್ ಸ್ಕ್ಯಾವೆಂಜಗ್ ಪದ್ಧತಿಗೆ ಅವಕಾಶ ರಿಮ್ಸ್ ವಿರ್ದೇಶಕರು ಹಾಗೂ ಆಡಳಿತಾಧಿಕಾರಿಗಳ ವಿರುದ್ಧ ತಕ್ಷಣ ಕಾನೂನು ಪ್ರಕರಣ ದಾಖಲಿಸಬೇಕು.

ಈ ಅಮಾನುಷ ಪ್ರಕರಣಗಳು ನಡೆಯದಂತೆ ಜಾಗೃತಿ ಮೂಡಿಸಲು ವಿಫಲರಾಗಿದ್ದಲ್ಲದೆ ಗಮಕ್ಕೆ ತಂದು ಮೂರು ದಿನಗಳಾದರೂ ಕಾನೂನು ಕ್ರಮ ಕೈಗೊಳ್ಳಲು ಮುಂದಾಗದಿರುವ ಜಿಲ್ಲಾ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರನ್ನು ಸೇವೆಯಿಂದ ಅಮಾನತುಗೊಳಿಸಬೇಕು. ಪ್ರಸ್ತುತ ರಿಮ್ಸ್ ನಲ್ಲಿ ಕಾರ್ಯನಿರ್ವಹಿಸುತ್ತಿರುವ ಹೊರಗುತ್ತಿಗೆ ಸಂಸ್ಥೆಯ ಗುತ್ತಿಗೆಯನ್ನು ತಕ್ಷಣ ರದ್ದುಪಡಿಸಿ ಕಪ್ಪು ಪಟ್ಟಿಗೆ ಸೇರಿಸಬೇಕು. ಸಫಾಯಿ ಕರ್ಮಚಾರಿಗಳಿಗೆ ಕಾಯ್ದೆಯ ಪ್ರಕಾರ ಪುನರ್ವಸತಿ, ಸುರಕ್ಷತೆ ಮತ್ತು ಗೌರವಯುತ ಉದ್ಯೋಗವನ್ನು ಖಚಿತಪಡಿಸಬೇಕು ಈ ಬೇಡಿಕೆಗಳು ಈಡೇರದಿದ್ದಲ್ಲಿ, ಮುಂದಿನ ದಿನಗಳಲ್ಲಿ ಹೋರಾಟವನ್ನು ಇನ್ನಷ್ಟು ತೀವ್ರಗೊಳಿಸಲಾಗುವುದು ಎಂದು ಅವರು ಎಚ್ಚರಿಕೆ ನೀಡಿದರು. ಈ ಸಂದರ್ಭದಲ್ಲಿ ನರಸಿಂಹ ಗಧಾರ, ಸುಧಾಕರ ನೆಲಹಾಳ, ಸಾಗರ ಉರಕುಂದಪ್ಪ ಉಪಸ್ಥಿತರಿದ್ದರು.

# ಹೇಮನೂರ ಮೌನ ತಪಸ್ವಿ: ಬಸವರಾಜ ಪಾಟೀಲ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:**



ನರಸಿಂಗರಾವ ಹೇಮನೂರ ಅವರು ಸಾಹಿತ್ಯ ಕ್ಷೇತ್ರದಲ್ಲಿ ಮೌನ ತಪಸ್ವಿಗಳು ಎಂದು ಮಾಜಿ ಸಂಸದ ಬಸವರಾಜ ಪಾಟೀಲ ಸೇಡಂ ಹೇಳಿದರು.

ನಗರದ ವಿಶ್ವೇಶ್ವರಯ್ಯ ಭವನದಲ್ಲಿ ಉತ್ತರ ಕರ್ನಾಟಕ ವಿಶ್ವಕರ್ಮ ಯುವ ಬರಹಗಾರರ ಮತ್ತು ಸಂಶೋಧಕರ ವೇದಿಕೆ, ಕಮಲಾಪೂರ ವಿಶ್ವಮಯ ಸಾಹಿತ್ಯ ಪ್ರಚಾರ ಸಮಿತಿ ಹುಬ್ಬಳ್ಳಿ ಹಾಗೂ ಹೇಮನೂರ ಪರಿವಾರ ಅಭಿಮಾನಿಗಳ ಬಳಗದ ಸಂಯುಕ್ತ ಆಶ್ರಯದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಹಿರಿಯ ಸಾಹಿತಿ ನರಸಿಂಗರಾವ ಹೇಮನೂರ ಅವರ 'ಮಂದಾರ' ಸಮಗ್ರ ಸಾಹಿತ್ಯ ಸಂಪುಟ ಲೋಕಾರ್ಪಣೆ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಪೂಜ್ಯ ಅಜೇಂದ್ರ ಮಹಾಸ್ವಾಮಿಗಳು, ಅಳ್ಳೊಳ್ಳಿಯ ನಾಗಪಯ್ಯ ಮಹಾಸ್ವಾಮಿ, ಪೂಜ್ಯ ಸುರೇಂದ್ರ ಮಹಾಸ್ವಾಮಿಗಳು ಸಮಾರಂಭದ ದಿವ್ಯ ಸಾನಿಧ್ಯ ವಹಿಸಿದ್ದರು. ಸಿರಸಂಗಿಯ ವಿಶ್ವಕರ್ಮ ಸಮಾಜ ವಿಕಾಸ ಸಂಸ್ಥೆಯ ಪಿ. ಬಿ.ಬಡಿಗೇರ ಕೃತಿ ಲೋಕಾರ್ಪಣೆ ಮಾಡಿ, ಸಮಾಜದಲ್ಲಿ ಪುಸ್ತಕ ಸಂಸ್ಕೃತಿ ಬೆಳೆಯಬೇಕೆಂಬ ಅಭಿಪ್ರಾಯಪಟ್ಟರು. ಕನ್ನಡ ಪ್ರಾಧ್ಯಾಪಕ ಡಾ. ವೀರೇಶ್ ಬಡಿಗೇರ ಅವರು ಕೃತಿ ಪರಿಚಯ ಮಾಡಿದರು.

ಶ್ರೀಮತಿ ಸಾವಿತ್ರಮ್ಮ ನರಸಿಂಗರಾವ ಹೇಮನೂರ ದಂಪತಿಗಳು, ಸೇಡಂನ ಕವಿ ಕೆರಳ್ಳಿ ಗುರುನಾಥರೆಡ್ಡಿ ಪ್ರತಿಷ್ಠಾನದ ಅಧ್ಯಕ್ಷ ಸಿದ್ದಪ್ಪ ತಳ್ಳಳ್ಳಿ, ಕನ್ನಡ ಪುಸ್ತಕ ಪ್ರಾಧಿಕಾರ ಸದಸ್ಯ ಬಿ.ಎಚ್.ನಿರಗುಡಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ ಮಾಜಿ ಸದಸ್ಯ ಭೀಮಣ್ಣ ಬೋನಾಳ, ಸಾಹಿತಿ ರಾಜೇಂದ್ರ ಬಡಿಗೇರ, ವೀರಭದ್ರಪ್ಪ ಬೆಂಗಳಿ ಇತರರು ವೇದಿಕೆಯಲ್ಲಿದ್ದರು. ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ವಿಜಕುಮಾರ ಪಾಟೀಲ ತೇಗಲತಿಪ್ಪಿ ಅಧ್ಯಕ್ಷತೆ ವಹಿಸಿದ್ದರು. ಸಂಪಾದಕರಾದ ಭೀಮಸೇನ ಬಡಿಗೇರ, ಪ್ರಾಸ್ತಾವಿಕ ಮಾತನಾಡಿದರು. ಸಂಚಾಲಕ ಜನಾರ್ಧನ ಹೇಮನೂರ ಇದ್ದರು.

ಮಧ್ಯಾಹ್ನದ ಗೋಷ್ಠಿಯಲ್ಲಿ ಹಾಲಕ್ಷ್ಮಿಕಾಂತ ಸಂಚಾರ ಹೇಮನೂರ ಕಾವ್ಯ ಕುರಿತು ಹಾಗೂ ಮಹಿಪಾಲರೆಡ್ಡಿ ಮುನ್ನೂರ ಅವರು ಹೇಮನೂರ ವ್ಯಕ್ತಿತ್ವದ ಕುರಿತು ಮಾತನಾಡಿದರು.

ಅಧ್ಯಕ್ಷತೆಯನ್ನು ಪ್ರಭಾಕರ ಜೋಶಿ ವಹಿಸಿದ್ದರು. ನಂತರ ಹಿರಿಯ ಸಾಹಿತಿ ಲಿಂಗಾರೆಡ್ಡಿ ಶೇರಿ ಅಧ್ಯಕ್ಷತೆಯಲ್ಲಿ ಸಮಾರೋಪ ಸಮಾರಂಭ ನಡೆಯಿತು. ಸಾಹಿತಿ ದತ್ತಾತ್ರೇಯ ವಿಶ್ವಕರ್ಮ ಸಮಾರೋಪ ನುಡಿಗಳನ್ನು ಆಡಿದರು.

'ಮಂದಾರ' ಗ್ರಂಥಕ್ಕೆ ಲೇಖನಗಳನ್ನು ಬರೆದ ಲೇಖಕರಿಗೆ ಸನ್ಮಾನಿಸಲಾಯಿತು.

# ಜಯಂತಿಗಳ ಪೂರ್ವಭಾವಿ ಸಭೆ

**ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**

ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜನವರಿ 7ರಂದು ಬೆಳಗ್ಗೆ 11 ಗಂಟೆಗೆ ಶಿವಯೋಗಿ ಸಿದ್ಧರಾಮ ಜಯಂತಿ ಆಚರಣೆಯ ಪೂರ್ವಭಾವಿ ಸಭೆ, ಅಂದು ಬೆಳಗ್ಗೆ 11.30ಕ್ಕೆ ಮಹಾಯೋಗಿ ವೇಮನ ಜಯಂತಿ ಆಚರಣೆಯ ಪೂರ್ವಭಾವಿ ಸಿದ್ಧತಾ ಸಭೆ ಮತ್ತು ಮಧ್ಯಾಹ್ನ 12 ಗಂಟೆಗೆ ಅಂಬಿಗರ ಚೌಡಯ್ಯ ಜಯಂತಿ ನಿಮಿತ್ತ ಪೂರ್ವಭಾವಿ ಸಿದ್ಧತಾ ಸಭೆ ನಡೆಯಲಿದ್ದು ಆಯಾ ಜಯಂತಿ ಆಚರಣೆಯ ಸಮಿತಿಯ ಅಧ್ಯಕ್ಷರು ಮತ್ತು ಪದಾಧಿಕಾರಿಗಳು, ನಗರದ ಎಲ್ಲಾ ಸಂಘ ಸಂಸ್ಥೆಗಳ ಪ್ರಮುಖರು, ನಾಗರಿಕರು, ಅಧಿಕಾರಿಗಳು ಮತ್ತು ಸಿಬ್ಬಂದಿ ಪೂರ್ವಭಾವಿ ಸಭೆಗೆ ಹಾಜರಾಗಬೇಕು ಎಂದು ಅಪರ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಲಾಖೆಯಿಂದ ಅರ್ಜಿ ಆಹ್ವಾನ

**ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**

2025–26ನೇ ಸಾಲಿನ ಸಾಧನೆ ಯೋಜನೆಯಡಿ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯಿಂದ ಅನುಷ್ಠಾನಗೊಳ್ಳುತ್ತಿರುವ ವಿವಿಧ ಯೋಜನೆಗಳಿಗೆ ಸೇವಾ–ಸಿಂಧು ತಂತ್ರಾಂಶದಡಿ (ಪೋರ್ಟಲ್) ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಜನವರಿ 31 ಕೊನೆಯ ದಿನ ಆಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಆಯಾ ತಾಲ್ಲೂಕಿನ ತಾಲ್ಲೂಕು ಪಂಚಾಯಿತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಗ್ರಾಮ್ಮೀಣ, ನಗರ ವಿವಿದೋದ್ದೇಶ ಪುನರ್ವಸತಿ (ಎಂ.ಆರ್.ಡಬ್ಲೂ ) ಕಾರ್ಯಕರ್ತರನ್ನು ಅಥವಾ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿ, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ರಾಯಚೂರು ಅವರ ದೂರವಾಣಿ ಸಂಖ್ಯೆ:–08532–200992ಗೆ ಕಚೇರಿಯ ಕೆಲಸದ ಸಮಯದಲ್ಲಿ ಸಂಪರ್ಕಿಸಲು ತಿಳಿಸಲಾಗಿದೆ ಎಂದು ಜಿಲ್ಲಾ ಅಂಗವಿಕರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶ್ರೇಷ್ಠ ಕೃಷಿಕ: ಮಹಿಳೆ ಪ್ರಶಸ್ತಿಗೆ ಅರ್ಜಿ ಆಹ್ವಾನ

**ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**

ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯವು 2026ರ ಜನವರಿ ತಿಂಗಳಿನಲ್ಲಿ ರಾಯಚೂರು ಮುಖ್ಯ ಆವರಣದಲ್ಲಿ "ಕೃಷಿ ಮೇಳ" ಆಯೋಜಿಸುತ್ತಿದೆ. ಕೃಷಿಗೆ ಸಂಬಂಧಿಸಿದ ಹೊಸ ತಂತ್ರಜ್ಞಾನಗಳ ಬಗ್ಗೆ ರೈತ ಬಾಂಧವರಿಗೆ ಮಾಹಿತಿ ಒದಗಿಸುವುದು ಹಾಗೂ ಅವುಗಳನ್ನು ಅಳವಡಿಸಲು ಪ್ರೇರೇಪಿಸುವ ಉದ್ದೇಶ ಈ ಮೇಳದ್ದಾಗಿದೆ. ಈ ಮೇಳದಲ್ಲಿ ಕಲ್ಯಾಣ ಕರ್ನಾಟಕ ಭಾಗದ ಪ್ರತಿ ಜಿಲ್ಲಾವಾರು ಶ್ರೇಷ್ಠ ಕೃಷಿಕ ಹಾಗೂ ಕೃಷಿ ಮಹಿಳೆಯನ್ನು ಗುರುತಿಸಿ ಪ್ರಮಾಣ ಪತ್ರವನ್ನು ನೀಡಿ ಸನ್ಮಾನಿಸಲಾಗುವುದು. ಇದರ ಪ್ರಯುಕ್ತ ಅರ್ಜಿ ನಮೂನೆಯನ್ನು ಆಯಾ ಜಿಲ್ಲೆಗಳ ಕೃಷಿ ವಿಜ್ಞಾನ ಕೇಂದ್ರ, ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರ ಹಾಗೂ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ರಾಯಚೂರುನ ವೆಬ್ ಸೈಟ್ ಃಣಣಠಿ://ಣಭಿಡಿಚಿ–ಭಿಣಾಡಿ.ಇಚಿಡಿಟಿಚಿಣಚಿಇಚಿ.ರಂಠ. ಃಟಿ ನಲ್ಲಿ ದಿನಾಂಕ: 01.01.2026 ರಿಂದ ಪಡೆಯಬಹುದು. ಹೆಚ್ಚಿನ ಮಾಹಿತಿಗಾಗಿ ಹಿರಿಯ ವಿಜ್ಞಾನಿ & ಮುಖ್ಯಸ್ಥರು, ಕೃಷಿ ವಿಜ್ಞಾನ ಕೇಂದ್ರ, ರಾಯಚೂರು, ಬೀದರ, ಕಲಬುರಗಿ, ರದ್ದೇವಾಡಗಿ, ಗಂಗಾವತಿ, ಕವಡಿಮಟ್ಟಿ, ಹಗರಿ ಮತ್ತು ಮುಖ್ಯಸ್ಥರು, ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರ, ಭೀಮರಾಯನಗುಡಿ, ಲಿಂಗಸೂಗೂರು, ಕೊಪ್ಪಳ, ನಾಲವಾರ, ದೇವದುರ್ಗ ಮತ್ತು ಹೂವಿನಹಡಗಲಿ ಇವರನ್ನು ಸಂಪರ್ಕಿಸಲು ಕೋರಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ 9480696314, 9480696315, 9480696316, 9480696317, 9480696318, 9480696319, 9480696334, 9480696335, 9480696336ಗಳಿಗೆ ಸಂಪರ್ಕಿಸಬಹುದಾಗಿದೆ. ಭರ್ತಿ ಮಾಡಿದ ಅರ್ಜಿಗಳನ್ನು ಹಿಂತಿರುಗಿಸಲು ಜನವರಿ 16 ಕೊನೆಯ ದಿನವಾಗಿರುತ್ತದೆ. ಅರ್ಜಿಗಳನ್ನು ಆಯಾ ಜಿಲ್ಲೆಗಳ ಕೃಷಿ ವಿಜ್ಞಾನ ಕೇಂದ್ರ ಹಾಗೂ ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರಗಳ ಕಚೇರಿಗೆ ಸಲ್ಲಿಸಲು ತಿಳಿಸಲಾಗಿದೆ ಎಂದು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ವಿಸ್ತರಣಾ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೆಡಿಪಿ: ಶಾಸಕರ ವಿರುದ್ಧ ಕಾನೂನು ಕ್ರಮಕ್ಕೆ ಒತ್ತಾಯ

• **ಮಲ್ಲಮ್ಮ ನುಡಿ ವಾರ್ತೆ ಬೀದರ್:**

ಬೀದರ್ ಜಿಲ್ಲಾ ಪಂಚಾಯತ್ ಕಚೇರಿಯಲ್ಲಿ ನಡೆದ ಕೆಡಿಪಿ ಸಭೆಯ ವೇಳೆ ಅಸಭ್ಯವಾಗಿ ಕೈಕೈ ಮಿಲಾಯಿಸಿಕೊಂಡು ಸಭೆಯ ಶಿಸ್ತು ಭಂಗಪಡಿಸಿದ ಆರೋಪದ ಮೇಲೆ, ಸಂಬಂಧಪಟ್ಟ ಶಾಸಕರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕೆಂದು ವಿಶ್ವಕ್ರಾಂತಿ ದಿವ್ಯ ಪೀಠ (ರಿ), ಬೀದರ್ ವತಿಯಿಂದ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ದೂರು ಸಲ್ಲಿಸಲಾಗಿದೆ.

ದೂರುದಾರರ ಪ್ರಕಾರ, ಹುಮನಾಬಾದ ಕ್ಷೇತ್ರದ ಶಾಸಕ ಸಿದ್ದು ಪಾಟೀಲ ಹಾಗೂ ವಿಧಾನ ಪರಿಷತ್ ಸದಸ್ಯರಾದ ಭೀಮರಾವ ಪಾಟೀಲ ಮತ್ತು ಚಂದ್ರಶೇಖರ ಪಾಟೀಲ ಅವರು ಜನಪ್ರತಿನಿಧಿಗಳು, ಅಧಿಕಾರಿಗಳು ಮತ್ತು ಸಾರ್ವಜನಿಕರ ಸಮ್ಮುಖದಲ್ಲೇ ಪರಸ್ಪರ ಅವಮಾನಕರವಾಗಿ ವರ್ತಿಸಿದ್ದಾರೆ. ಇದರಿಂದ ಸಭೆಯ ಗೌರವ ಹಾಳಾಗಿದ್ದು, ಸಾರ್ವಜನಿಕ ಸೇವಾ ವ್ಯವಸ್ಥೆಗೆ ಕೆಟ್ಟ ಮಾದರಿ ನಿರ್ಮಾಣವಾಗಿದೆ ಎಂದು ದೂರಲಾಗಿದೆ.

ಈ ಘಟನೆ ಜನಸಾಮಾನ್ಯರಲ್ಲಿ ಅಸಮಾಧಾನ ಮತ್ತು ಆಕ್ರೋಶಕ್ಕೆ ಕಾರಣವಾಗಿದ್ದು, ಸಾರ್ವಜನಿಕ ಶಾಂತಿ ಹಾಗೂ ಸುವ್ಯವಸ್ಥೆಗೆ ಧಕ್ಕೆ ತರುವಂತಹ ವರ್ತನೆಯಾಗಿದೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ. ಸಭಾಂಗಣದ ಸಿಸಿಟಿವಿ ದೃಶ್ಯಾವಳಿ ಅಥವಾ ವೀಡಿಯೊ ದಾಖಲೆಗಳನ್ನು ಪರಿಶೀಲಿಸಿ, ಸಂಬಂಧಪಟ್ಟ ಕಾನೂನು ವಿಧಿಗಳ ಅಡಿಯಲ್ಲಿ ಪ್ರಕರಣ ದಾಖಲಿಸುವಂತೆ ಮನವಿ ಮಾಡಲಾಗಿದೆ.

ಸಾಮಾಜಿಕ ಚಿಂತಕ ಜಗಧೀಶ್ವರ ಬಿರಾದಾರ ಹಾಗೂ ಸಂಘಟನೆಯ ಅಧ್ಯಕ್ಷ ಓಂಪ್ರಕಾಶ ರೊಟ್ಟೆ ಅವರು ನ್ಯಾಯ ದೊರಕುವ ವಿಶ್ವಾಸದೊಂದಿಗೆ ಈ ದೂರು ಸಲ್ಲಿಸಿರುವುದಾಗಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಹಾಬಲೇಶ್ವರ ದೇವರ ಪೂರ್ವ ಪರಂಪರೆ ಯಥಾಸ್ಥಿತಿಗೆ ತರಲು ಆಗ್ರಹ

• **ಮಲ್ಲಮ್ಮ ನುಡಿ ವಾರ್ತೆ ಗೋಕರ್ಣ:**






ದಕ್ಷಿಣದ ಕಾಶಿ ಎಂದೇ ಖ್ಯಾತಿಯಾಗಿರುವ ಶ್ರೀ ಕ್ಷೇತ್ರ ಗೋಕರ್ಣದಲ್ಲಿ ಶ್ರೀ ಮಹಾಬಲೇಶ್ವರನ ಆತ್ಮಲಿಂಗವಿದೆ. ಹೀಗಾಗಿ ಪ್ರತಿದಿನ ಸಾವಿರಾರು ಭಕ್ತರು ಇಲ್ಲಿಗೆ ಆಗಮಿಸುತ್ತಾರೆ. ಈ ಹಿಂದೆ ಪೂಜೆ ಸಲ್ಲಿಸುತ್ತ ಬಂದವರಲ್ಲಿ ದಶಕಗಳ ಹಿಂದೆ ವಿವಿಧ ಗೊಂದಲಗಳು ಉಂಟಾಗಿ ಈಗ ಒಂದು ವ್ಯವಸ್ಥಿತ ಮಟ್ಟಕ್ಕೆ ಬರುತ್ತಿದೆ.

ಹೀಗಾಗಿ ಪೂರ್ವ ಪರಂಪರೆಯನ್ನು ಯಥಾಸ್ಥಿತಿಗೆ ತರಲು ಸಮಸ್ತ ಉಪಾಧಿವಂತರಿಂದ ಸರ್ವೋಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಮೂರ್ತಿಗಳು ಹಾಗೂ ಶ್ರೀ ಸಂಸ್ಥಾನ ಮಹಾಬಲೇಶ್ವರ ದೇವರ ಮೇಲುಸ್ತುವಾರಿ ಸಮಿತಿಯ ಅಧ್ಯಕ್ಷರಾದ ಬಿ.ಎನ್.ಶ್ರೀಕೃಷ್ಣ ಅವರಿಗೆ ಶ್ರೀ ಸಂಸ್ಥಾನ ಮಹಾಬಲೇಶ್ವರ ದೇವ ಗೋಕರ್ಣದ ಉಪಾಧಿವಂತ ಅರ್ಚಕರಾದ ರಾಜಗೋಪಾಲ ಅಡಿ ಮತ್ತು ಸಮಸ್ತ ಉಪಾಧಿವಂತರ ಮೂಲಕ ಮನವಿ ಮಾಡಿದ್ದಾರೆ.

ದೈವಿಕ ಉಪಾಧಿವಂತ ಅರ್ಚಕರ ಮೂಲಕ ಗೋಕರ್ಣದ ದೇವಾಲಯಕ್ಕೆ ಬರುವ ಭಕ್ತಾಧಿಗಳಿಗೆ ಪೂರ್ವ ಪರಂಪರೆಯಂತೆ ಬೆಳಿಗ್ಗೆ 6 ಗಂಟೆಯಿಂದ ಮಧ್ಯಾಹ್ನ 12.30 ರವರೆಗೆ ಸಂಜೆ 5 ಗಂಟೆಯಿಂದ ರಾತ್ರಿ 8.15 ರವರೆಗೆ ಪೂಜೆ ಮಾಡುವ ಅವಕಾಶ ಪುನಃ ಊರ್ಜಿತಗೊಳಿಸಿ ಭಕ್ತರಿಗೆ ಅನುಕೂಲ ಮಾಡಿಕೊಡುವಂತೆ ವಿನಂತಿಸಿದ್ದಾರೆ.

ಈ ಸಮಯವನ್ನು ನೀಡಿದ್ದಲ್ಲಿ ಮಾತ್ರ ಯಾವುದೇ ಭಕ್ತರಿಗೆ ಪೂಜಾ ಕೈಂಕರ್ಯವನ್ನು ನಡೆಸುವ ಸಂದರ್ಭದಲ್ಲಿ ಒತ್ತಡಗಳು, ಗೊಂದಲಗಳು ನಡೆಯದೇ ಸುಗಮವಾಗಿ ಪೂಜೆಯನ್ನು ಅವರವರ ಇಷ್ಟಾರ್ಥದಂತೆ ಪೂರೈಸಿಕೊಡಲು ಅನುಕೂಲವಾಗುತ್ತದೆ.

ಇತ್ತೀಚಿಗೆ ಭಕ್ತಾಧಿಗಳು ಉಪಾಧಿವಂತ ಅರ್ಚಕರ ಮೂಲಕ ನಡೆಸಿ ಪೂಜಾ ಕೈಂಕರ್ಯಗಳ ಪೂಜಾ ಕೆಲವೇ ಘಂಟೆಗಳಲ್ಲಿ ಮೊಟಕುಗೊಳಿಸಿರುವುದರಿಂದ ಸರತಿ ಸಾಲಿನಲ್ಲಿ ನಿಂತು ಭಕ್ತರು ಆಗಮಿಸುವುದರಿಂದ ಗೊಂದಲ ಉಂಟಾಗುವಂತಾಗಿದೆ. ಆಡಳಿತಾತ್ಮಕ ವ್ಯವಸ್ಥೆಯ ವೈಖರಿಯನ್ನು ಭಕ್ತರು ಪ್ರಶ್ನಿಸುವಂತಾಗಿದೆ. ಹೀಗೆ ವಿವಿಧ ಬೇಡಿಕೆಗಳನ್ನು ಇಟ್ಟು ಮನವಿ ಸಲ್ಲಿಸಲಾಗಿದೆ.



> **ಕಳೆದ ಎರಡು ತಿಂಗಳಿಗೆ ಹೆಚ್ಚು ಕಾಲ ಉಪಾಧಿವಂತರಿಗೆ ಶ್ರೀದೇವರ ಕಾರ್ಯಾಲಯದಿಂದ ಬರತಕ್ಕ ಹಣವು ಬರದೇ ಉಪಾಧಿವಂತ ನೂರಾರು ಕುಟುಂಬಗಳು ಅತೀವ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದೆ.**
>
> **ಯಾವುದೇ ಸರಕಾರಿ ಸಹಾಯವೂ ಇಲ್ಲದ ನಾವುಗಳು ವೈದಿಕ ಪರಂಪರೆಯ ರಕ್ಷಣೆಗಾಗಿ ಈ ಮಟ್ಟಿಗೆ ಧನ್ಯತೆಗೆ ಒಳಗಾಗಿರಬೇಕಾಗಿರುವುದು ದುರದೃಷ್ಟಕರ. ತಾವು ದಯಮಾಡಿ ಉಪಾಧಿವಂತರ ಹಣವನ್ನು ನೀಡಿ, ಉಪಾಧಿವಂತರ ಜೀವನ ಹಾಗೂ ಗೋಕರ್ಣದ ವೈದಿಕ ಉಪಾಧಿವಂತ ಪರಂಪರೆಯನ್ನು ರಕ್ಷಿಸಬೇಕಾಗಿದೆ.**
>
> 
>
> **ವೇ. ರಾಜಗೋಪಾಲ ಅಡಿ ಅರ್ಚಕರು**

# ಭೂಮಿ ಅತಿಕ್ರಮಣ, ನಕಲಿ ದಾಖಲೆ : ಅಂಬೋಜಿ ರಾವ್ ಕುಟುಂಬಸ್ಥರ ಗಡಿಪಾರಿಗೆ ಒತ್ತಾಯ



**ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**

ಜಮೀನು ಅತಿಕ್ರಮಣ ಹಾಗೂ ನಕಲು ದಾಖಲೆ ಸೃಷ್ಟಿಸಿ ಜನಗಳಿಗೆ ಮೋಸ ಮಾಡುತ್ತಿರುವ ಅಂಬೋಜಿ ರಾವ್ ಹಾಗೂ ಇವರ ಕುಟುಂಬಸ್ಥರನ್ನು ಗಡಿಪಾರು ಮಾಡಬೇಕೆಂದು ಭೀಮ್ ಆರ್ಮಿ ಜಿಲ್ಲಾ ಅಧ್ಯಕ್ಷ ಪ್ರವೀಣ್ ಕುಮಾರ ಒತ್ತಾಯಿಸಿದರು. ಅವರಿಂದು ನಗರದ ಸುದ್ದಿಗಾರರೊಂದಿಗೆ ಮಾತನಾಡಿ, ಚಂದರಬಾಯಿ ಗಂಡ ಗೌಳಿ ಲಕ್ಷ್ಮಣರಾವ್ ಅವರು 1423/*/* ವಿಸ್ತರಣೆ 00.27 ಗುಂಟೆ ರಾಯಚೂರು ಸೀಮಂತರದಲ್ಲಿ ಈ ಜಮೀನಿನ ಮಾಲೀಕರಾಗಿದ್ದಾರೆ. ಈ ಜಮೀನಿನ ನಕಲಿ ದಾಖಲೆ ಸೃಷ್ಟಿ ಮಾಡಿದ ವ್ಯಕ್ತಿ ಅಂಬೋಜಿ ರಾವ್ ತಂದೆ ಹೀರಲಾಜ್ ಮತ್ತು ಸ್ವಾತಿ ಗಂಡ ಅಂಬೋಜಿ ರಾವ್ ಇವರು ತಂದೆ ಹೀರಲಾಲ್ ಇವರೆಲ್ಲರೂ ಸೇರಿ–ಕೊಂಡು ನಕಲು ಮರಣ ಪ್ರಮಾಣ ಪತ್ರಗಳನ್ನು ಸೃಷ್ಟಿ ಮಾಡಿರುತ್ತಾರೆ. ಮತ್ತು ನಕಲು ಆಧಾರ ಕಾರ್ಡ್ ಸಹ ಸೃಷ್ಟಿ ಮಾಡಿದ್ದಾರೆ ಎಂದು ಆರೋಪಿಸಿದರು. ತಹಸೀಲ್ದಾರ್ ಹಾಗೂ ಹೀಮಮಾಪಾಷ ಮತ್ತು ರಾಯಚೂರು ಜಿಲ್ಲಾ ಅಧಿಕಾರ ಮತ್ತು ಕುಲಕರ್ಣಿ, ಅಧಿಕಾರಿಗಳು ಅಂಬೋಜಿ ರಾವ್ ತಂದೆ ಹೀರಲಾಲ್ ಹಾಗೂ ಪ್ರಾತಿ ಹೆಸರಿನಲ್ಲಿ ಎಲ್ಲರೂ ಸೇರಿಕೊಂಡು ನಕಲು ದಾಖಲೆ ಸೃಷ್ಟಿಸಿ ವಂಚನೆ ಮಾಡಲಾಗಿದೆ. ಈ ಜಮೀನಿನ ಮೂಲ ಪಟ್ಟಿದಾರರಾದ ಚಂದು ಬಾಯಿ ಗಂಡ ಗೌಳಿ ಲಕ್ಷ್ಮಣ ರಾವ್ ಅವರಿಗೆ ಸುಮಾರು ವರ್ಷಗಳ ಕಾಲ ಅವರ ಹೆಸರಿನಲ್ಲಿ ಇಮೀನು ಇರುತ್ತದೆ. ಚಂದ್ರ ಬಾಯಿ ಅವರು ಮರಣ ಹೊಂದಿರುವುದನ್ನು ಅರಿತುಕೊಂಡು ಆಕೆಯ ಮರಣ ಪ್ರಮಾಣ ಪತ್ರವನ್ನು ಪಡೆದುಕೊಂಡು ಈ ಜಮೀನನ್ನು ಅಂಬೋಜಿ ರಾವ್ ಹೀರಲಾಲ್ ತನ್ನ ಹೆಸರು ಸೇರಿಸಿಕೊಳ್ಳಲು ಅಧಿಕಾರಿಗಳನ್ನು ಬಳಸಿಕೊಂಡಿದ್ದಾರೆ. ಕಂದಾಯ ಇಲಾಖೆಯ ಮತ್ತು ಮಹಾನಗರ ಪಾಲಿಕೆ ಇಲಾಖೆಯ ಸಿಬ್ಬಂದಿಗಳನ್ನು ಪರಿಚಯ ಮಾಡಿಕೊಂಡಿರುವ ಅಂಬೋಜಿ ರಾವ್ ಅನೇಕ ಸರ್ಕಾರಿ ದಾಖಲೆಗಳನ್ನು ದುರುಪಯೋಗ ಮಾಡಿಕೊಂಡು, ಆನೇಕ ಭೂಮಿಕಬ್ಬಳಿಕೆ ಹಾಗೂ ಬೇರೆಯವರ ಹೆಸರಿನಲ್ಲಿರುವ ಪಹಣಿಯನ್ನು ತನ್ನ ತಂದೆಯ ಹೆಸರನ್ನು ಬದಲಾಯಿಸಿ ತಂದೆಯ ಹೆಸರನ್ನು ಸೇರ್ಪಡೆ ಮಾಡುವುದು ಇವರ ಕುಟುಂಭದ ಕುಲಕಸಬನ್ನಾಗಿ ಮಾಡಿಕೊಂಡಿರುತ್ತಾರೆಂದು ಆರೋಪಿಸಿದರು. ಇನ್ನೊಂದು ವಿಶೇಷ ಪ್ರಮುಖ ವಿಷಯವಾಗಿದೆ ಹೀರಲಾಲ್ ಮಗನಾದ ಅಂಬೋಜಿ ರಾವ್ ನಕಲು ವಂಶಾವಳಿ 1) ಹೀರಲಾಲ್ ಹೆಂಡತಿ ಶ್ರೀ ಮತಿ ಬಾಯಿ ಮತ್ತು ಮಗನಾದ ಅಂಬೋಜಿ ರಾನ್ ಅವರ ಹೆಂಡತಿ ಸ್ವಾತಿ ನಕಲು ವಂಶಾವಳಿ ಸೃಷ್ಟಿ ಮಾಡುತ್ತಾನೆ. ಪತ್ರವನ್ನು ಕಂದಾಯ ಇಲಾಖೆಗೆ ಮತ್ತು ನ್ಯಾಯಾಲಯದಲ್ಲಿ ರುಜು ಪಡಿಸುತ್ತಾನೆ ಕಾನೂನು ಕಣ್ಣು ತಪ್ಪಿಸಿ ಇಲ್ಲದ ದಾಖಲೆಗಳನ್ನು ಸೃಷ್ಟಿ ಮಾಡಿದ್ದಾನೆ. ಒಂದು ವಾರದೊಳಗೆ ಕೈಗೊಳ್ಳದಿದ್ದಲ್ಲಿ ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಉಗ್ರ ಸತ್ಯಾಗ್ರಹದ ಪ್ರತಿಭಟನೆ ಹೋರಾಟವನ್ನು ನಡೆಸಲಾಗುವುದೆಂದು ಎಚ್ಚರಿಕೆ ನೀಡಿದರು. ಈ ಸಂದರ್ಭದಲ್ಲಿ ಜಯರಾಜು ನಾಗಲಾಪುರ, ಮಂಜುಶಿವು ಗೌತಮ್, ಜಿಲಾನಿ, ನಿಲೇಶ್ ಉಪಸ್ಥಿತರಿದರು.

# ನನ್ನ ವಿರುದ್ದದ ಅರೋಪ ಸುಳ್ಳು, ಸತ್ಯಕ್ಕೆ ದೂರ: ಅಂಬಾಜಿರಾವ್

• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**



ಭೀಮ್ ಅರ್ಮಿಯಾ ಜಿಲ್ಲಾಧ್ಯಕ್ಷರಾದ ಪ್ರವೀಣ ಕುಮಾರ ನನ್ನ ವಿರುದ್ದ ಮಾಡಿದ ಅರೋಪ ಸುಳ್ಳು, ಹಾಗೂ ಸತ್ಯಕ್ಕೆ ದೂರ ಎಂದು ಸಮಾಜ ಸೇವಕ ಅಂಬಾಜಿರಾವ್ ಅವರು ಹೇಳಿದರು.

ಅವರಿಂದು ನಗರದ ಸುದ್ದಿಗಾರರೊಂದಿಗೆ ಮಾತನಾಡಿ, ಪ್ರವೀಣ್ ಕುಮಾರ ಅವರಿಗೆ ಮತ್ತು ಈ ಅಸ್ತಿಗೆ ಯಾವುದೇ ಸಂಬಂಧವಿರುವುದಿಲ್ಲ. ಇಂತಹ ಅರ್ಹತೆ ಇಲ್ಲದ ವ್ಯಕ್ತಿ ನನ್ನ ವಿರುದ್ಧ ಸಾರ್ವಜನಿಕರಿಗೆ ಸುಳ್ಳು ಅಪಪ್ರಚಾರ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ಸುದ್ದಿಗೋಷ್ಠಿ ಮತ್ತು ದೂರು ನೀಡಬೇಕಾದರೆ, ನೊಂದವರು ಇರಬೇಕು ರಾಯಚೂರು ನಗರದ ಯರಮರಸ್ ವ್ಯಾಪ್ತಿಯಲ್ಲಿ ಬರುವ 114/1, 5ಎಕರೆ ಈ ಜಮೀನು ಪ್ರವೀಣಕುಮಾರಿಗಾಗಲಿ ಅವರ ಕುಟುಂಬದವರಿಗಾಗಲಿ ಸಂಬಂಧ ಇರುವುದಿಲ್ಲವೆಂದರು. ಸರಕಾರಿ ಭೂಮಿ ಇದ್ದರೆ ಮಾಡಲಿ, ಪಟ್ಟಾ ಭೂಮಿಗೆ ಮಾಡಲು ಅರ್ಹತೆ ಇರುವುದಿಲ್ಲವೆಂದರು.

ಇಂತಹ ಭೂ ವಂಚಕನಿದ್ದ. ಎಷ್ಟೇ ಇಂತಹ ದುಷ್ಟ ಕೃತ್ಯಗಳಿಂದ ನಾನು ಭಯ ಪಡುವುದಿಲ್ಲ, ನಾನು ಸಾರ್ವಜನಿಕರ ಪರ ಇನ್ನೂ ಹೆಚ್ಚಾಗಿ ಕೆಲಸ ಮಾಡುವೆ ಎಂದರು. ಕಳೆದ ವರ್ಷದಲ್ಲಿ ನಾನು ರಾಯಚೂರ ನಗರದಲ್ಲಿ ಇನ್ನೊರಿಗೆ ಸೇರಿದ ಭೂಮಿಯ ನಕಲಿ ದಾಖಲೆಗಳು ಸೃಷ್ಟಿಸಿ ಮಾರಾಟ ಮಾಡುತ್ತಿರುವ ಗ್ಯಾಂಗ್ ಗಳಾದ ಅಕ್ಷಯ ಕುಮಾರ ಬಂಡಾರಿ ಅಲಿಯಾಸ ಪ್ರಮೋದ್ ಬಂಡಾರಿ ತಂದೆ ಮಲ್ಲಿಕಾರ್ಜುನ ಬಂಡಾರಿ, ಎಂ.ಡಿ ಜಾವೀದ್ ತಂದೆ ಎಂ.ಡಿ. ಷಹಾ, ಎಹಸನ್ ಅಹ್ಮದ್ ಹಸೀನ್ ಇನ್ನಿತರರ ವಿರುದ್ಧ ಆಸ್ತಿ ಕಂಬಳಿಕೆ ಆರೋಪ ಮಾಡಿದೆ. ನಗರದಲ್ಲಿ ವಾಸಿಸುತ್ತಿರುವ ಜನರಿಗೆ ತಮ್ಮ ತಮ್ಮ ಆಸ್ತಿಗಳನ್ನು ಪರಿಶೀಲಿಸಿಕೊಳ್ಳಲು ಮತ್ತು ಸಾರ್ವಜನಿಕ ಆಸ್ತಿಯನ್ನು ವಂಚನೆಯಿಂದ ತಪ್ಪಿಸುವುದಕ್ಕಾಗಿ ಬೀದಿ ಮತ್ತು ನ್ಯಾಯಾಂಗ ವ್ಯವಸ್ಥೆಯ ಮುಖಾಂತರ ಹೋರಾಟ ಮಾಡಿದ ವಿಷಯ ಎಲ್ಲರಿಗೆ ತಿಳಿದ ವಿಷಯವಾಗಿದೆ. ಈ ಭೂ ವಂಚಕರು ನನಗೆ ಹಣದ ಆಮಿಷ ವೊಡ್ಡಿದ್ದರು, ಆದರೇ ನಾನು ಇಷ್ಟು ವರ್ಷ ಹೋರಾಟದ ಮುಖಾಂತರ ಮಾಡಿದ ಹೆಸರನ್ನು ಹಾಳು ಮಾಡಿಕೊಳ್ಳಲು ಇಷ್ಟ ವಿಲ್ಲದ ಕಾರಣ ನಾನು ಹಣದ ಆಮಿಷಕ್ಕೆ ಒಳಗಾಗಲಿಲ್ಲ ವೆಂದರು. ನಾನು ವಂಚನೆ ಮಾಡುತ್ತಿರುವವರ ವಿರುದ್ಧ ಹೋರಾಟ ನೋಡಿ, ನಗರದ ಸಾಕಷ್ಟು ಸಾರ್ವಜನಿಕರು ಫೋನ್ ಮುಖಾಂತರ ಸಂಪರ್ಕ ಮಾಡಿ ನನಗೆ ಧನ್ಯವಾದಗಳು ಸಲ್ಲಿಸಿದರು ಮತ್ತು ಮುಂದೆಯೂ ಸಾರ್ವಜನಿಕರ ಒಳ್ಳೆ ಉದ್ದೇಶಕ್ಕಾಗಿ ನೀವು ಇದೆ ರೀತಿ ಕೆಲಸ ಮಾಡಬೇಕೆಂದು ಸಲಹೆ ನೀಡಿದರು. ಭೂ ವಂಚಕರ ಹಣದ ಅಮೀಷವನ್ನು ತಿರಸ್ಕರಿಸಿದ ಕಾರಣ ಮತ್ತು ನನ್ನ ಹೆಸರನ್ನು ಸಮಾಜದಲ್ಲಿ ಹಾಳುಮಾಡುವುದಕ್ಕೊಸ್ಕರ ನನ್ನ ಮತ್ತು ನನ್ನ ಹೆಂಡತಿಯ ಆಧಾರ ಕಾರ್ಡ ಮತ್ತು ವಂಶಾವಳಿ, ಮತ್ತು ಮರಣ ಪ್ರಮಾಣ ಪತ್ರ ದುರ್ಬಳಕೆ ಮಾಡಿಕೊಂಡು ನಕಲಿ ದಾಖಲಗಳನ್ನು ಸೃಷ್ಟಿಸಿದರು. ನಂತರ ನನಗೆ ರಾಯಚೂರು ಆಯುಕ್ತರ ಕಛೇರಿಯಿಂದ ನೋಟಿಸ್ ಬಂದ ಮೇಲೆ ನಾನು ಆಯುಕ್ತರ ಕಛೇರಿಯಲ್ಲಿ ಸ್ವತಃ ಲಿಖಿತ ರೂಪದಲ್ಲಿ ಪತ್ರವನ್ನು ಬರೆದು ಮೊಸ ಹೊದವರ ಹೆಸರಿನ ಮೇಲೆಯೇ ಅವರ ಅಸ್ತಿಯನ್ನು ಮಾಡಬೇಕೆಂದು ಬರೆದುಕೊಟ್ಟಿರುತ್ತೇನೆ. ಮತ್ತು ನನ್ನ ಹೆಸರನ್ನು ದುರ್ಬಳಕೆ ಮಾಡಿದವರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕೆಂದು ಒತ್ತಾಯಿಸಿದರು. ಈ ಸಂದರ್ಭದಲ್ಲಿ ಮಸೂದ್ ಅಲಿ, ಚಂದ್ರು ಸಗಮಕುಂಟಾ, ಕೀಶನ್ ಕುಮಾರ ಉಪಸ್ಥರಿದರು.

## ಪುಸ್ತಕ ಆಯ್ಕೆಗಾಗಿ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

2025 ರಲ್ಲಿ ಪ್ರಥಮ ಬಾರಿಗೆ ಮುದ್ರಣವಾಗಿ ಪ್ರಕಟವಾದ ಪುಸ್ತಕಗಳನ್ನು ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಯಿಂದ ಪುಸ್ತಕ ಆಯ್ಕೆಗಾಗಿ ಸಲ್ಲಿಸುವ ಕನ್ನಡ ಮತ್ತು ಆಂಗ್ಲ ಭಾಷೆಯ ಪುಸ್ತಕಗಳನ್ನು ಆಹ್ವಾನಿಸಿದ್ದು, ಆಸಕ್ತ ಲೇಖಕರು, ಲೇಖಕ–ಪ್ರಕಾಶಕರು, ಪ್ರಕಾಶಕರು ಮತ್ತು ಮಾರಾಟಗಾರರು ಪುಸ್ತಕಗಳನ್ನು ಸಲ್ಲಿಸಬಹುದಾಗಿದೆ.

ಪುಸ್ತಕಗಳನ್ನು ರಾಜ್ಯ ಕೇಂದ್ರ ಗ್ರಂಥಾಲಯ, ಕಬ್ಬನ್ ಉದ್ಯಾನವನ, ಬೆಂಗಳೂರು ಇಲ್ಲಿ ಜ.31 ರ ಸಂಜೆ 5.30 ರೊಳಗಾಗಿ ನೋಂದಣಿ ಮಾಡಿಸಬಹುದಾಗಿದೆ. ಈ ಪುಸ್ತಕಗಳನ್ನು ಮಾತ್ರ ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಯಿಂದ ಆಯ್ಕೆಗಾಗಿ ಪರಿಗಣಿಸಲಾಗುವುದು. ಅಂತಿಮ ದಿನಾಂಕದ ನಂತರ ನೋಂದಣಿಯಾಗುವ ಪುಸ್ತಕಗಳನ್ನು ಆಯ್ಕೆಗೆ ಪರಿಗಣಿಸಲಾಗುವುದಿಲ್ಲ.ಹೊರ ರಾಜ್ಯಗಳಲ್ಲಿ 2025 ರಲ್ಲಿ ಪ್ರಥಮ ಮುದ್ರಣಗೊಂಡು ಪ್ರಕಟವಾಗುವ ಆಂಗ್ಲ, ಹಿಂದಿ ಅಥವಾ ಯಾವುದೇ ಭಾಷೆಯ ಪುಸ್ತಕಗಳನ್ನೂ ಸಹ ಆಹ್ವಾನಿಸಿದೆ. ಆಯಾ ರಾಜ್ಯ ಕೇಂದ್ರ ಗ್ರಂಥಾಲಯಗಳಲ್ಲಿ ಅಥವಾ ಕೇಂದ್ರ/ಆಯಾ ರಾಜ್ಯ ಸರ್ಕಾರಗಳಿಂದ ಅಧಿಸೂಚಿಸಲ್ಪಟ್ಟ ಅಧಿಕೃತ ಪುಸ್ತಕ ನೋಂದಣಿ ಕೇಂದ್ರಗಳಲ್ಲಿ ಕಡ್ಡಾಯವಾಗಿ ನೋಂದಣಿ ಮಾಡಿಸತಕ್ಕದ್ದು.

ನೋಂದಣಿ ಪ್ರಮಾಣ ಪತ್ರದ ನಕಲು ಪತ್ರದ ಪ್ರತಿಯೊಂದಿಗೆ ಮತ್ತು ಆಯಾ ಪುಸ್ತಕದ ಒಂದು ಪ್ರತಿಯನ್ನು ಜ.31 ರ ಸಂಜೆ 5.30 ರೊಳಗಾಗಿ ಆಯ್ಕೆಗಾಗಿ ರಾಜ್ಯ ಕೇಂದ್ರ ಗ್ರಂಥಾಲಯಕ್ಕೆ ಸಲ್ಲಿಸತಕ್ಕದ್ದು. ತಡವಾಗಿ ಸಲ್ಲಿಸುವ ಪುಸ್ತಕಗಳನ್ನು ಸ್ವೀಕರಿಸಲಾಗುವುದಿಲ್ಲ.

ನೋಂದಣಿಗಾಗಿ ನಿಗದಿತ ಅರ್ಜಿ ನಮೂನೆ ಹಾಗೂ ಮಾಹಿತಿಗಾಗಿ ಇಲಾಖಾ ಅಂತರ್ಜಾಲ dpl.karnataka.gov.in ಮತ್ತು ರಾಜ್ಯದ ಎಲ್ಲಾ ಜಿಲ್ಲಾ/ನಗರ ಕೇಂದ್ರ ಗ್ರಂಥಾಲಯಗಳ ಉಪನಿರ್ದೇಶಕರು/ಮುಖ್ಯ ಗ್ರಂಥಾಲಯಾಧಿಕಾರಿಗಳ ಕಚೇರಿಗಳಲ್ಲಿ ಪಡೆಯಬಹುದು.

ಹೆಚ್ಚಿನ ಮಾಹಿತಿಗಾಗಿ ಆಯುಕ್ತರ ಕಚೇರಿ ದೂ.080–22864990, 22867358 ಮತ್ತು ರಾಜ್ಯ ಕೇಂದ್ರ ಗ್ರಂಥಾಲಯದ ದೂ.080–22212128 ಗೆ ಕರೆಮಾಡಿ ಸಂಪರ್ಕಿಸಬಹುದು ಎಂದು ಬಳ್ಳಾರಿ ನಗರ ಕೇಂದ್ರ ಗ್ರಂಥಾಲಯದ ಮುಖ್ಯಗ್ರಂಥಾಲಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವ್ಯಕ್ತಿ ಕಾಣೆ ಪತ್ತೆಗೆ ಮನವಿ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ನಗರದ ಸಿರುಗುಪ್ಪ ರಸ್ತೆಯ ಅವ್ವಂಬಾವಿಯ 33ನೇ ವಾರ್ಡ್ ಅಂಬಾದೇವಿ ದೇವಸ್ಥಾನದ ಹತ್ತಿರದ ಜಿಲಾನಿ ಲೇಔಟ್ ನ ನಿವಾಸಿಯಾದ ವೆಂಕಟೇಶ್ ಎನ್ನುವ 50 ವರ್ಷದ ವ್ಯಕ್ತಿಯು 2025ರ ಡಿ.30 ರಂದು ಕಾಣೆಯಾಗಿರುವ ಕುರಿತು ಎ.ಪಿ.ಎಂ.ಸಿ ಯಾರ್ಡ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ವ್ಯಕ್ತಿಯ ಪತ್ತೆಗೆ ಸಹಕರಿಸಬೇಕು ಎಂದು ಪೊಲೀಸ್ ಸಬ್ ಇನ್ಸ್ ಪೆಕ್ಟರ್ ಮನವಿ ಮಾಡಿದ್ದಾರೆ.

**ವ್ಯಕ್ತಿಯ ಚಹರೆ:**

ಅಂದಾಜು 5.5 ಅಡಿ ಎತ್ತರ, ದುಂಡು ಮುಖ, ಗೋಧಿ ಮೈ ಬಣ್ಣ, ಸಾಧಾರಣ ಮೈಕಟ್ಟು ಹೊಂದಿದ್ದು, ಕಾಣೆಯಾದ ಸಂದರ್ಭದಲ್ಲಿ ಹಳದಿ ಬಣ್ಣದ ಅರ್ಧ ತೋಳಿನ ಅಂಗಿ, ಕಪ್ಪು ಬಣ್ಣದ ಪ್ಯಾಂಟ್ ಮತ್ತು ಹಳದಿ ಬಣ್ಣದ ಜಾಕೆಟ್ ಧರಿಸಿರುತ್ತಾನೆ. ಕನ್ನಡ, ತೆಲುಗು ಮತ್ತು ಹಿಂದಿ ಭಾಷೆ ಮಾತನಾಡುತ್ತಾನೆ.ಈ ಮೇಲ್ಕಂಡ ಚಹರೆ ಗುರುತುಗಳುಳ್ಳ ವ್ಯಕ್ತಿಯ ಬಗ್ಗೆ ಮಾಹಿತಿ ದೊರೆತಲ್ಲಿ ಬಳ್ಳಾರಿ ಕಂಟ್ರೋಲ್ ರೂಂ ದೂ.08392–258100 ಅಥವಾ ಎಪಿಎಂಸಿ ಯಾರ್ಡ್ ಪೊಲೀಸ್ ಠಾಣೆಯ ದೂ.08392–250033 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಿದ್ಧರಾಮೇಶ್ವರ ಜಯಂತಿ ಅರ್ಥಪೂರ್ಣ ಆಚರಣೆಗೆ ಸಕಲ ಸಿದ್ಧತೆ ಕೈಗೊಳ್ಳಿ: ಎಡಿಸಿ



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಜಿಲ್ಲಾಡಳಿತದಿಂದ ಜ.14 ರಂದು ಶಿವಯೋಗಿಸಿದ್ಧರಾಮೇಶ್ವರಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಎನ್ ಅವರು ಹೇಳಿದರು.

ನಗರದ ಜಿಲ್ಲಾಡಳಿತ ಆವರಣದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶಿವಯೋಗಿ ಸಿದ್ಧರಾಮೇಶ್ವರ ಜಯಂತಿ ಆಚರಣೆ ಕುರಿತು ಸೋಮವಾರ ಏರ್ಪಡಿಸಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.ಪ್ರತಿ ವರ್ಷದಂತೆ ಈ ಬಾರಿ ಜಯಂತಿಯನ್ನು ಅರ್ಥಪೂರ್ಣವಾಗಿ ನಡೆಸಲಾಗುತ್ತದೆ. ಜಯಂತಿಯಂದು ಮೆರವಣಿಗೆಗೆ ಪೊಲೀಸ್ ಇಲಾಖೆಯಿಂದ ಅನುಮತಿ ಪಡೆದು ಇದಕ್ಕೆ ಬೇಕಾದ ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು. ಮೆರವಣಿಗೆ ನಂತರ ವೇದಿಕೆ ಕಾರ್ಯಕ್ರಮ ಇರಲಿದ್ದು, ಶಿಷ್ಟಾಚಾರದನ್ವಯ ಆಹ್ವಾನ ಪತ್ರಿಕೆ ಮುದ್ರಿಸಿ ಗಣ್ಯರನ್ನು ಆಹ್ವಾನಿಸಬೇಕು. ಜಯಂತಿ ಕಾರ್ಯಕ್ರಮದಂದು ಕುಡಿಯುವ ನೀರಿನ ವ್ಯವಸ್ಥೆ ಹಾಗೂ ಲಘು ಉಪಹಾರ ವ್ಯವಸ್ಥೆ ಕೈಗೊಳ್ಳಬೇಕು ಎಂದು ಹೇಳಿದರು.

ಕಾನೂನು ಸುವ್ಯವಸ್ಥೆ ದೃಷ್ಟಿಯಿಂದ ನಗರದಲ್ಲಿ ಜಯಂತಿ ಕುರಿತು ಬ್ಯಾನರ್ ಅಳವಡಿಸಲು ಕಡ್ಡಾಯವಾಗಿ ಮಹಾನಗರ ಪಾಲಿಕೆಯಿಂದ ಅನುಮತಿ ತೆಗೆದುಕೊಳ್ಳಬೇಕು. ಅನುಮತಿ ಇಲ್ಲದೇ ಬ್ಯಾನರ್ ಅಳವಡಿಕೆ ಅವಕಾಶವಿಲ್ಲ ಎಂದ ಅವರು ಸಮಾಜದ ಮುಖಂಡರು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.ಕಾರ್ಯಕ್ರಮದಲ್ಲಿ ಮಹನೀಯರ ಕುರಿತು ವಿಶೇಷ ಉಪನ್ಯಾಸ, ಆಯಾ ಸಮುದಾಯದಲ್ಲಿ ಶೈಕ್ಷಣಿಕ ಕ್ಷೇತ್ರದಲ್ಲಿ ಸಾಧನೆಗೈದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಗುವುದು. ಜಯಂತಿಯನ್ನು ತಾಲ್ಲೂಕು, ಗ್ರಾಮ ಪಂಚಾಯತಿ ಹಾಗೂ ಶಾಲಾ–ಕಾಲೇಜುಗಳಲ್ಲಿ ಆಚರಿಸಲಾಗುವುದು ಎಂದರು.

ಸರ್ಕಾರದ ಆದೇಶದಂತೆ ಸಭೆ ಸಮಾರಂಭಗಳಲ್ಲಿ ಪುಸ್ತಕ ನೀಡಲು ಮಾತ್ರ ಅವಕಾಶವಿದ್ದು, ಬೇರೆ ಯಾವುದೇ ತರದ ಹೂಗುಚ್ಛ, ಫಲಬುಟ್ಟಿ ಇನ್ನಿತರೆ ವಸ್ತುಗಳು ನೀಡುವಂತಿಲ್ಲ.

ಸಭೆಯಲ್ಲಿ ಸಮಾಜದ ಮುಖಂಡರುಗಳು ತಮ್ಮ ಸಲಹೆಗಳನ್ನು ನೀಡಿದರು.

ಈ ಸಂಧರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ನಾಗರಾಜ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು, ಸಮುದಾಯದ ಮುಖಂಡರು ಹಾಗೂ ವಿವಿಧ ಸಂಘ–ಸಂಸ್ಥೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಅಬಕಾರಿ ಸನ್ನದುಗಳ ಇ-ಹರಾಜು ತರಬೇತಿ: ಅಪರ ಜಿಲ್ಲಾಧಿಕಾರಿ ಶಿವಾನಂದ




ಮಲ್ಲಮ್ಮ ನುಡಿ ವಾರ್ತೆ ರಾಯಚೂರು:

ಅಬಕಾರಿ ಸನ್ನದುಗಳ ಇ–ಹರಾಜು ಪ್ರಕ್ರಿಯೆ ಕುರಿತು ಸಾರ್ವಜನಿಕರಿಗೆ ಮತ್ತು ಸನ್ನದುದಾರರಿಗೆ ತರಬೇತಿ ಕಾರ್ಯಕ್ರಮವು ಜನವರಿ 5ರಂದು ನಡೆಯಿತು.

ನಗರದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಶ್ರೀ ಬಸವೇಶ್ವರ ಆಡಿಟೋರಿಯಂ ಹಾಲನಲ್ಲಿ ಅಬಕಾರಿ ಇಲಾಖೆಯಿಂದ ನಡೆದ ತರಬೇತಿಯನ್ನು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಉದ್ಘಾಟಿಸಿದರು.

ಈ ವೇಳೆ ಮಾತನಾಡಿದ ಅಪರ ಜಿಲ್ಲಾಧಿಕಾರಿಗಳು, ಅಬಕಾರಿ ಇಲಾಖೆಯ ಮಹಾತ್ವಾಕಾಂಕ್ಷೆಯ ಕಾರ್ಯಕ್ರಮವಾದ ಮತ್ತು ರಾಜ್ಯದಲ್ಲಿ ಸ್ಥಗಿತಗೊಂಡಿರುವ ಒಟ್ಟು 477 ಸಿಎಲ್–2ಎ ಮತ್ತು 92 ಸಿಎಲ್–9ಎ ಸನ್ನದುಗಳನ್ನು ಘನ ಸರ್ಕಾರವು ಈ ಹರಾಜು ಮೂಲಕ ವಿಲೇವಾರಿ ಮಾಡಲು ಉದ್ದೇಶಿಸಿ ಅಧಿಸೂಚನೆ ಹೊರಡಿಸಿದೆ. ಈ ಸಂಬಂಧ ಇಂತಿಷ್ಟು ಎಂದು ಸನ್ನದುಗಳ ಹಂಚಿಕೆ ಮಾಡಲಾಗಿದೆ. ಈ ಸನ್ನದುಗಳನ್ನು ಹೇಗೆ ಯಾವ ರೀತಿಯಲ್ಲಿ ಈ ಹರಾಜು ಪ್ರಕ್ರಿಯೆ ಮೂಲಕ ವಿಲೇವಾರಿ ಮಾಡಲಾಗುತ್ತದೆ ಎಂಬುದರ ಬಗ್ಗೆ ತಿಳಿಸಲು ಮತ್ತು ಪಾರದರ್ಶಕತೆ ಕಾಯ್ದುಕೊಳ್ಳಲು ರಾಯಚೂರು ಹಾಗೂ ಕೊಪ್ಪಳ ಅಬಕಾರಿ ಉಪ ಆಯುಕ್ತರ ಕಚೇರಿಯಿಂದ ಹಮ್ಮಿಕೊಂಡ ಈ ತರಬೇತಿ ಮಹತ್ವದ್ದಾಗಿದ್ದು, ಸಾರ್ವಜನಿಕರು ಮತ್ತು ಸನ್ನದುದಾರರು ಇದರ ಸದುಪಯೋಗ ಪಡೆಯಬೇಕು ಎಂದು ಸಲಹೆ ಮಾಡಿದರು.

ಈ ವೇಳೆ ಕೊಪ್ಪಳ ಜಿಲ್ಲೆಯ ಅಬಕಾರಿ ಉಪ ಆಯುಕ್ತರಾದ ಕೆ. ಪ್ರಶಾಂತಕುಮಾರ ಅವರು ಪ್ರಾಸ್ತಾವಿಕ ಮಾತನಾಡಿ,

ರಾಯಚೂರು ಜಿಲ್ಲೆಗೆ ಒಟ್ಟು 08 ಸಿಎಲ್–2ಎ ಮತ್ತು 1 ಸಿಎಲ್–9ಎ ಸನ್ನದುಗಳ ಹಂಚಿಕೆ ಮಾಡಲಾಗಿದೆ. ಕೇಂದ್ರ ಸರ್ಕಾರದ ಸಂಸ್ಥೆಯಾದ ಎಂಎಸ್‌ಟಿಸಿ ಸಂಸ್ಥೆಯ ತಂತ್ರಜ್ಞ–ರಿಂದ ಇ–ಹರಾಜು ಪ್ರಕ್ರಿಯೆ ಬಗ್ಗೆ ತಿಳಿಸಲು ಕ್ರಮ ವಹಿಸಲಾಗಿದೆ ಎಂದು ಮಾಹಿತಿ ನೀಡಿದರು.

ಇ-ಹರಾಜು ಪ್ರಕ್ರಿಯೆ, ತಿದ್ದುಪಡಿಯಾದ ಕಾನೂನುಗಳು ಸೇರಿದಂತೆ ನಾನಾ ವಿಷಯಗಳ ಬಗ್ಗೆ ತಿಳಿಸಿದರು.

ಸಂಪನ್ಮೂಲ ವ್ಯಕ್ತಿಗಳಾದ ಸತೀಶಕುಮಾರ ಅವರು ಮಾತನಾಡಿ,

ಇ–ಹರಾಜು ಪ್ರಕ್ರಿಯೆಗೆ ಸಂಬಂಧಿಸಿದ ವೆಬ್ ಪೋರ್ಟಲ್ ಮಾಹಿತಿ ಹಾಗೂ ಇ–ಹರಾಜು ಪ್ರಕ್ರಿಯೆಯಲ್ಲಿನ ಪಾರದರ್ಶಕತೆಯ ಅಂಶಗಳ ಬಗ್ಗೆ ಮಾಹಿತಿ ನೀಡಿದರು.ತರಬೇತಿಯಲ್ಲಿ ರಾಯಚೂರು ಜಿಲ್ಲೆಯ ಅಬಕಾರಿ ಉಪ ಆಯುಕ್ತರಾದ ಸಿ.ಕೆ.ಮಹೇಂದ್ರ, ಸಹಾಯಕ ಉಪ ಆಯುಕ್ತರಾದ ಕೆ ರವಿ ಸೇರಿದಂತೆ,

ಅಬಕಾರಿ ಇಲಾಖೆಯ ರಾಯಚೂರು ಮತ್ತು ಕೊಪ್ಪಳ ಜಿಲ್ಲೆಯ ಇನ್ನಿತರ ಅಧಿಕಾರಿಗಳು ಮತ್ತು ಸಿಬ್ಬಂದಿ ಹಾಗೂ ಸಾರ್ವಜನಿಕರು ಇದ್ದರು.

## ಸಿರುಗುಪ್ಪ: ಜ.07 ವಿದ್ಯುತ್ ವ್ಯತ್ಯಯ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಸಿರುಗುಪ್ಪ ಜೆಸ್ಕಾಂ ಕಾರ್ಯ ಮತ್ತು ಪಾಲನಾ ಉಪ ವಿಭಾಗ ವ್ಯಾಪ್ತಿಯ 110/33/11 ಕೆವಿಯ ಸಿರುಗುಪ್ಪ ವಿದ್ಯುತ್ ವಿತರಣಾ ಕೇಂದ್ರದಲ್ಲಿ 4ನೇ ತ್ರೈಮಾಸಿಕ ನಿರ್ವಹಣೆ ಕಾಮಗಾರಿ ಕೈಗೊಳ್ಳುತ್ತಿರುವುದರಿಂದ ಜ.07 ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 06 ಗಂಟೆಯವರೆಗೆ ಸಿರುಗುಪ್ಪ ವಿದ್ಯುತ್ ವಿತರಣಾ ಕೇಂದ್ರ ಮತ್ತು 33/11 ಕೆವಿ ಹಚ್ಚೊಳ್ಳಿ ವಿದ್ಯುತ್ ವಿತರಣಾ ಕೇಂದ್ರದಿಂದ ವಿದ್ಯುತ್ ಸರಬರಾಜು ಆಗುವ ಸಿರುಗುಪ್ಪ ನಗರ, ಬಾಗೇವಾಡಿ, ರಾರಾವಿ, ಎಂ.ಸುಗೂರು, ಬೀರಳ್ಳಿ, ಹಚ್ಚೊಳ್ಳಿ, ಕುಡದರಹಾಳು, ರಾವಿಹಾಳ್, ಬಗ್ಗೂರು, ದೇಶನೂರು, ಕೆ.ಸುಗೂರು, ಕೆಂಚನಗುಡ್ಡ, ಕುರುವಳ್ಳಿ, ದೇವಲಾಪುರ ಗ್ರಾಮ ಮತ್ತು ಸುತ್ತಮುತ್ತಲಿನ ಹಳ್ಳಿಗಳು ಹಾಗೂ ಸಿರುಗುಪ್ಪ ನಗರ ಪ್ರದೇಶಕ್ಕೆ ಸಂಬಂಧಪಟ್ಟ ಎಲ್ಲಾ ಕೈಗಾರಿಕಾ ಸ್ಥಾವರಗಳು ಸೇರಿದಂತೆ ವಿವಿಧೆಡೆ ವಿದ್ಯುತ್ ವ್ಯತ್ಯಯವಾಗಲಿದೆ.

ಸಾರ್ವಜನಿಕರು ಮತ್ತು ವಿದ್ಯುತ್ ಗ್ರಾಹಕರು ಸಹಕರಿಸಬೇಕು ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆರೋಗ್ಯವಿಲ್ಲದ ಎಂತಹ ಅಭಿವೃದ್ಧಿಯಾದರೂ ಶೂನ್ಯ: ಡಾ. ಶಿವನಗೌಡ




ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ :

ವೈದ್ಯನಾಗಿ ಹೇಳುತ್ತಿದ್ದೇನೆ ಕೊಪ್ಪಳದಲ್ಲಿ ವೈದ್ಯಕೀಯ ವಿಜ್ಞಾನಕ್ಕೆ ಸವಾಲಾದ ನಿಗೂಢ ಕಾಯಿಲೆಗಳು ಜನರನ್ನು ಬಾಧಿಸುತ್ತಿವೆ, ಇದರಿಂದ ಪಾರಾಗುವುದು ಯಾರಿಂದಲೂ ಸಾಧ್ಯವಿಲ್ಲ ಎಂದು ನ್ಯಾಷನಲ್ ಇಂಟಿಗ್ರೇಟೆಡ್ ಮೆಡಿಕಲ್ ಅಸೋಸಿಯೇಶನ್ (ಎನ್.ಐ.ಎಂ.ಎ) ಅಧ್ಯಕ್ಷರಾದ ಡಾ. ಶಿವನಗೌಡ ಪಾಟೀಲ ಎಚ್ಚರಿಸಿದರು. ಅವರು ನಗರಸಭೆ ಮುಂದುಗಡೆ ಜಿಲ್ಲಾ ಬಚಾವೋ ಆಂದೋಲನ ಸಮಿತಿ ಹಾಗೂ ಪರಿಸರ ಹಿತರಕ್ಷಣಾ ವೇದಿಕೆಯ ಜಂಟಿ ಕ್ರಿಯಾ ವೇದಿಕೆ ನಡೆಸುತ್ತಿರುವ 66ನೇ ದಿನದ ಧರಣಿ ಹೋರಾಟ ಬೆಂಬಲಿಸಿ ಮಾತನಾಡಿದರು. ಇಲ್ಲಿ ಸ್ಥಾಪನೆಯಾಗಿರುವ ಕಾರ್ಖಾನೆಗಳಿಗೆ ಸ್ಥಳೀಯ ಜನರ ಆರೋಗ್ಯ, ಜೀವ ಇದಾವುದೂ ಮುಖ್ಯವೆನಿಸಿಲ್ಲ. ಇಲ್ಲಿ ಕಾಲಕಾಲದಿಂದ ಬದುಕು ಕಟ್ಟಿಕೊಂಡ ಜನರ ಜೀವ ಹೋದರೂ ನಮಗೇನು ಸಂಬಂಧ ಎನ್ನುವಂತೆ ಕಾರ್ಖಾನೆಗಳು ನಡೆದುಕೊಳ್ಳುತ್ತಿವೆ. ಕಂಪನಿಗಳು ಇಲ್ಲಿನ ಆರೋಗ್ಯ ಸಮಸ್ಯೆಯನ್ನೇ ಮುಂದಿಟ್ಟುಕೊಂಡು ಬಲ್ದೋಟ ಕಾರ್ಖಾನೆಯ ಬೃಹತ್ ಬಂಡವಾಳ ವಿರೋಧಿಸುವುದು ಎಷ್ಟು ಸರಿ ಎಂದು ಕೇಳುವ ಪ್ರಶ್ನೆಯೇ ಹಾಸ್ಯಾಸ್ಪದ ಮತ್ತು ಆಘಾತಕಾರಿಯಾಗಿದೆ. ಇಲ್ಲಿನ ಲಕ್ಷಗಟ್ಟಲೆ ಜನರ ಆರೋಗ್ಯ ಕೆಡಿಸಿ ದೇಶದ ಅಭಿವೃದ್ಧಿ, ರಾಜ್ಯದ ಅಭಿವೃದ್ಧಿ, ಜಿಎಸ್ಟಿ ಸಂಗ್ರಹ ಹೆಚ್ಚಾಗುತ್ತದೆ ಎಂದು ಸೋಸಿಯಲ್ ಮೀಡಿಯಾ ಮೂಲಕ ಹೇಳಿಸುವ ಬಲ್ದೋಟ ಕಂಪನಿ ಅಸಂಖ್ಯೆಯ ಜನರ ಬಲಿ ಪಡೆಯಲು ಹಿಂದೇಟು ಹಾಕುವುದಿಲ್ಲವೆಂದು ಇದ–ರಿಂದ ತಿಳಿಯುತ್ತಿದೆ. ಯಾವುದೇ ಅಭಿವೃದ್ಧಿ ಪರಿಸರ, ಆರೋಗ್ಯ ಕಡೆಗಣಿಸಿದರೆ ಅಂತಹ ಅಭಿವೃದ್ಧಿ ಯಾವತ್ತೂ ಶೂನ್ಯವಾಗಿರುತ್ತದೆ ಎಂದು ಪ್ರತಿಪಾದಿಸಿದರು.ಇನ್ನೊರ್ವ ವೈದ್ಯ ಡಾ. ಮಂಜುನಾಥ ಸಜ್ಜನ್ ಮಾತನಾಡಿ, ಕೊಪ್ಪಳ ಶುದ್ಧ ಗಾಳಿಯಲ್ಲಿ ದೇಶದಲ್ಲಿ ಮೂರನೇ ಸ್ಥಾನದಲ್ಲಿದೆ ಎಂದು ನಮ್ಮನ್ನೇ ಕುಹುಕ ಮಾಡುತ್ತಿರುವ ವರದಿಯನ್ನು ಪ್ರಕಟ ಮಾಡಿಸಿ ನಮ್ಮ ಜನರ ಗಮನ ಬೇರೆಡೆ ಸೆಳೆಯುವ ಪ್ರಯತ್ನ ನಡೆಯುತ್ತಿದೆ. ಈಗ ಏರ್ ಕ್ವಾಲಿಟಿ ಇಂಡೆಕ್ಸ್ ಪ್ರಕಾರ ಕೊಪ್ಪಳ 163 ಅಂಶಗಳನ್ನು ದಾಟಿದೆ.

ಇದು ರಾತ್ರಿ 200–300 ಎಕ್ಯೂಐ ಆಗುವ ಸಾಧ್ಯತೆ ಇದೆ. ಮನುಷ್ಯ ಉಸಿರಾಡುವ ಗಾಳಿಯುವುದೇ ಕಾರಣಕ್ಕೂ 150 ಎಕ್ಯೂಐ ಮೀರಬಾರದು ನಾವು ಈಗ ಅಪಾಯದ ಜೋನ್ ನಲ್ಲಿದ್ದೇವೆ. ವೈದ್ಯರು ಕೂಡ ಇದೇ ವಾತಾವರಣದಲ್ಲಿ ಬದುಕಬೇಕಲ್ಲವೇ? ಸಾರಾಸಗಟು ಜನ ಗಂಭೀರ ಕಾಯಿಲೆಗೆ ತುತ್ತಾಗುತ್ತಿರುವುದು ಇಲ್ಲಿನ ಬೆರಳೆಣಿಕೆಯ ದವಾಖಾನೆ ಮತ್ತು ವೈದ್ಯರು ನೂರಾರು ಸಂಖ್ಯೆಯಲ್ಲಿ ಹೆಚ್ಚಾಗಿದ್ದಾರೆ ಎಂದರೆ ಏನರ್ಥ? ಇನ್ನೂ ಕೆಲವೇ ದಿನಗಳಲ್ಲಿ ತುಂಗಭದ್ರಾ ನೀರು ಮುಟ್ಟಲು ಸಹಿತ ಬರುವುದಿಲ್ಲ. ಈಗಾಲೇ ಈ ಕಾರ್ಖಾನೆಗಳ ತ್ಯಾಜ್ಯ, ಚರಂಡಿ, ವಿಷ ರಸಾಯನಿಕ ತ್ಯಾಜ್ಯ ನದಿಗೆ ಸೇರಿ ನೀರು ಹಸಿರು ಬಣ್ಣಕ್ಕೆ ತಿರುಗಿದೆ. ವಿಷಾನಿಲ ಸೇವಿಸುವ ಯಾರು ಕೂಡ ಆರೋಗ್ಯದಿಂದ ಇರಲು ಸಾಧಯವಿಲ್ಲ ಎಂದು ಎಚ್ಚರಿಸಿದರು.

ಎಸ್.ಎಸ್.ಕೆ ಮಹಿಳಾ ಮಂಡಳ ಭಾಗ್ಯನಗರ ಇದರ ಅಧ್ಯಕ್ಷರಾದ ವಿಜಯಲಕ್ಷ್ಮಿ ಪವಾರ ಮಾತನಾಡಿ, ನಾವು ಮಹಿಳೆಯರು ಮೌನವಾಗಿದ್ದೇವೆ ಎಂದರೆ ತಪ್ಪು. ಈ ಸಮಸ್ಯೆ ಗವಿಶ್ರೀಗಳು ಬೀದಿಗೆ ಬಂದು ಹೇಳಿದ ಮೇಲೆ ಅದಕ್ಕೆ ಇದುವರೆಗೆ ಪರಿಹಾರ ಸಿಕ್ಕಿಲ್ಲ ಎಂದಾದರೆ ಹದ್ದಿನ ಕಣ್ಣಿಟ್ಟು ಗಮನಿಸುತ್ತಿದ್ದೇವೆ. ನಾವು ಪುನಃ ಗವಿಶ್ರೀಗಳನ್ನು ಭೇಟಿ ಮಾಡಿ ಮುಂದೆ ನಿಂತುಕೊಳ್ಳಿ ಸ್ವಾಮೀಜಿ ಮಹಿಳೆಯರು ಹೋರಾಟ ಗೆದ್ದು ತೋರಿಸುತ್ತೇವೆ ಎಂದು ಕೇಳುತ್ತೇವೆ. ಜಾತ್ರೆ ಮುಗಿಯುವದನ್ನು ಕಾಯುತ್ತಿದ್ದೇವೆ ಎಂದರು.ಭಾಗ್ಯನಗರ

ಇನ್ನರವ್ಹೀಲ್ ಅಧ್ಯಕ್ಷರಾದ ಸುನಿತಾ ಅಂಟಾಳಮರದ್ ಮಾತನಾಡಿ, ಅವಳಿ ನಗರ ಈ ಬಲ್ದೋಟ ವಿಸ್ತರಣೆಯಾದರೆ ಮರುಭೂಮಿಯಾಗುತ್ತವೆ. ಗವಿಮಠ ಗದ್ದುಗೆ ಶಕ್ತಿ ಕೇಂದ್ರ ನಮ್ಮನ್ನು ಕಾಪಾಡುತ್ತದೆ ಎಂಬ ವಿಶ್ವಾಸ ಇದೆ, ಅದಕ್ಕೆ ಸಂಚಕಾರ ತರುವ ಯಾವುದೇ ಕಾರ್ಖಾನೆ, ಮನುಷ್ಯರು ಉಳಿಯಲು ಸಾಧ್ಯವಿಲ್ಲ. ಬಂದ ದಾರಿಗೆ ಸುಂಕವಿಲ್ಲವೆಂದು ತಿಳಿದು ಬಲ್ದೋಟ ವಾಪಸ್ ಹೋಗಬೇಕು. ಈಗಿರುವ ಪೆಲ್ಲೆಟ್ ಘಟಕವನ್ನು ಸಹ ಬಂದ್ ಮಾಡಿ ಕೊಪ್ಪಳ ಜನರ ಜೀವ ಉಳಿಸುವ ಕ್ರಮಕ್ಕೆ ಸರಕಾರ, ಜನಪ್ರತಿನಿಧಿಗಳು ಮುಂದಾಗಬೇಕು ಎಂದರು.

ಇದಕ್ಕೂ ಮೊದಲು ಅಶೋಕ ವೃತ್ತದಲ್ಲಿ ಕಾರ್ಖಾನೆ ವಿಸ್ತರಣೆ ವಿರೋಧಿಸಿ ಮೂರು ಸಂಘಟನೆಗಳ ಪ್ರಮುಖರು ಘೋಷಣೆ ಕೂಗಿ ಪ್ರತಿಭಟಿಸಿದವು. ಅಲ್ಲಿಂದ ಮೆರವಣಿಗೆ ಮೂಲಕ ಧರಣಿ ಸ್ಥಳದಲ್ಲಿ ಬಂದು ಸೇರಿಕೊಂಡು ಹೋರಾಟ ಬೆಂಬಲಿಸಿ ಮಾತನಾಡಿದರು.

ಧರಣಿಯಲ್ಲಿ ಜಂಟಿ ಕ್ರಿಯಾ ವೇದಿಕೆ ಪ್ರಧಾನ ಸಂಚಾಲಕ ಅಲ್ಲಮಪ್ರಭು ಬೆಟ್ಟದೂರು, ಸಂಚಾಲಕರಾದ ಮಲ್ಲಿಕಾರ್ಜುನ ಬಿ. ಗೋನಾಳ ಮತ್ತು ಮಂಜುನಾಥ ಜಿ. ಗೊಂಡಬಾಳ, ಪ್ರಕಾಶಕ ಡಿ. ಎಂ. ಬಡಿಗೇರ, ಡಾ. ಸಿ. ಎಸ್. ಕರಮುಡಿ, ಡಾ. ಬಿ. ಎಲ್. ಕಲ್ಮಠ, ಡಾ. ಶ್ರೀನಿವಾಸ್, ಡಾ. ಕಸ್ತೂರಿ ವಿ. ಕರಮುಡಿ, ಎಸ್.ಎಸ್.ಕೆ ಸಂಘಟನೆಯ ಗೀತಾ ದಲಬಂಜನ್, ಪುಷ್ಪಲತಾ ಏಳುಬಾವಿ, ರಮಾ ಅಂಟಾಳಮರದ, ರಾಖಿ ಆರ್. ಮಗ್ಗಿ, ರೇಶ್ಮಾ ಎಸ್. ಎಚ್., ಸುಮನ್ ಎಸ್.ಡಿ., ರಾಧಾ ವಿ. ಕಾಟವಾ, ಶ್ವೇತಾ ಕಟವಟೆ, ರೇಖಾ ದಲಬಂಜನ್, ಜ್ಯೋತಿ ನಿರಂಜನ್, ಸುರೇಖಾ ಕಾಟವಾ, ಪದ್ಮಾವತಿ ಮೇಘರಾಜ, ಶ್ರೇಯಾ ದಲಬಂಜನ್, ಎಸ್. ಬಿ. ರಾಜೂರ, ಶಾಂತಯ್ಯ ಅಂಗಡಿ, ಜಿ. ಬಿ. ಪಾಟೀಲ್, ರಾಜಶೇಖರ ಏಳುಬಾವಿ, ಬಸವರಾಜ್ ನರೇಗಲ್, ಮಹಾದೇವಪ್ಪ ಎಸ್. ಮಾವಿನಮಡು, ಕವಿ ಈಶ್ವರ ಹತ್ತಿ ಇತರರು ಪಾಲ್ಗೊಂಡರು.

## ಸಾರ್ವಜನಿಕರು ಘಟನೆಯ ದೃಶ್ಯಾವಳಿಗಳಿದ್ದಲ್ಲಿ ಪೊಲೀಸ್ ಠಾಣೆಗೆ ಮಾಹಿತಿ ನೀಡಲು ಮನವಿ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:

ನಗರದ ಸಿರುಗುಪ್ಪ ರಸ್ತೆಯ ಶಾಸಕ ಜನಾರ್ಧನ ರೆಡ್ಡಿ ಅವರ ಮನೆಯ ಮುಂದೆ ಜ.01 ರಂದು ಬ್ಯಾನರ್ ಹರಿದ ವಿಚಾರವಾಗಿ ನಡೆದ ಗಲಾಟೆಯ ಕುರಿತು ರೆಕಾರ್ಡ್ ಮಾಡಿದ ದೃಶ್ಯಾವಳಿಗಳು ಇದ್ದಲ್ಲಿ ಸಾರ್ವಜನಿಕರು ಹೆಚ್ಚಿನ ತನಿಖೆಗಾಗಿ ಬ್ರೂಸ್‌ಪೇಟೆ ಪೊಲೀಸ್ ಠಾಣೆಗೆ ಮಾಹಿತಿ ನೀಡಬಹುದು ಎಂದು ಠಾಣೆಯ ಪೊಲೀಸ್ ಇನ್ಸ್ ಪೆಕ್ಟರ್ ಮನವಿ ಮಾಡಿದ್ದಾರೆ.

ನಗರದಲ್ಲಿ ಜ.01 ರಂದು ರಾತ್ರಿ 09 ಗಂಟೆಯಿಂದ 9.20 ಗಂಟೆಯ ಮಧ್ಯದ ಅವಧಿಯಲ್ಲಿ ಸಿರುಗುಪ್ಪ ರಸ್ತೆಯ ಹವಂಭಾವಿಯ ಜನಾರ್ಧನ ರೆಡ್ಡಿ ಅವರ ಜಾಗದ ಮುಂದೆ ಸಾರ್ವಜನಿಕರ ರಸ್ತೆಯಲ್ಲಿ ಹಾಕಿದ್ದ ಬ್ಯಾನರ್ ಹರಿದ ವಿಚಾರಕ್ಕೆ ಸಂಬಂಧಿಸಿದಂತೆ ಸಾರ್ವಜನಿಕ ರಸ್ತೆಯಲ್ಲಿ ಗಲಾಟೆ ಆಗಿ ರಾಜಶೇಖರ್ ರೆಡ್ಡಿ ಎನ್ನುವವರು ಕೊಲೆ ಆಗಿದ್ದು, ಇದಕ್ಕೆ ಸಂಬಂಧಿಸಿದಂತೆ ಬ್ರೂಸ್‌ಪೇಟೆ ಪೊಲೀಸ್ ಠಾಣೆಯಲ್ಲಿ ಮೊಕದ್ದಮೆ ಸಂಖ್ಯೆ 01/2026 ಕಲಂ 103(1), 54, 352, 351(2) ಆಧಾರ 190 ಬಿ.ಎನ್.ಎಸ್–2023 ಹಾಗೂ ಕಲಂ 27 ಆರ್ಮ್ಸ್ ಆಕ್ಟ್–1959 ರಡಿ ಪ್ರಕರಣ ದಾಖಲಾಗಿರುತ್ತದೆ.

ಹಾಗಾಗಿ ಸಾರ್ವಜನಿಕರು ತಮ್ಮ ಮೊಬೈಲ್ ಹಾಗೂ ಇತರೆ ಎಲೆಕ್ಟ್ರಾನಿಕ್ ಸಾಧನಗಳಲ್ಲಿ ರೆಕಾರ್ಡಿಂಗ್ ಮಾಡಿದ್ದ ದೃಶ್ಯಾವಳಿಗಳು ಇದ್ದರೆ ಹೆಚ್ಚಿನ ತನಿಖೆಗಾಗಿ ಬ್ರೂಸ್ ಪೇಟೆ ಪೊಲೀಸ್ ಠಾಣೆಯ ಪೊಲೀಸ್ ಇನ್ಸ್ಪೆಕ್ಟರ್ ವ್ಯಾಟ್ಸಪ್ ಸಂಖ್ಯೆ 9480803045 ನಂಬರ್‌ಗೆ ಕಳಿಸಬಹುದು ಅಥವಾ ಖುದ್ದಾಗಿ ಠಾಣೆಗೆ ಹಾಜರಾಗಿ ಮಾಹಿತಿ ನೀಡಬಹುದು ಎಂದು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಬಳ್ಳಾರಿಗೆ ಉಪಮುಖ್ಯಮಂತ್ರಿ ಭೇಟಿ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:

ಬಳ್ಳಾರಿಯ ಹೋಟೆಲ್ ರಾಯಲ್ ಫೋರ್ಟ್ ನಲ್ಲಿ, ನಗರದಲ್ಲಿ ಇತ್ತೀಚೆಗೆ ನಡೆದಿರುವ ಘಟನೆಯ ಹಿನ್ನೆಲೆಯಲ್ಲಿ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರ ಸಭೆಯನ್ನು ಹಮ್ಮಿಕೊಳ್ಳಲಿದ್ದಾರೆ.

ಈ ಸಭೆಯಲ್ಲಿ ಎಐಸಿಸಿಯ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಜ್ಯಾಸಭಾ ಸದಸ್ಯರಾದ ಡಾ. ನಾಸಿರ್ ಹುಸೇನ್ ಅವರು, ಬಳ್ಳಾರಿ ಜಿಲ್ಲಾ ಉಸ್ತುವಾರಿ ಸಚಿವರಾದ ಬಿ.ಜೆಡ್. ಜಮೀರ್ ಅಹಮ್ಮದ್ ಖಾನ್, ಕರ್ನಾಟಕ ಸರ್ಕಾರದ ಲೋಕೋಪಯೋಗಿ ಇಲಾಖೆ ಸಚಿವರಾದ ಸತೀಶ್ ಜಾರಕಿಹೊಳಿ, ಲೋಕಸಭೆ ಸದಸ್ಯರಾದ ಈ.ತುಕಾರಾಂ ಅವರು, ಮಾಜಿ ಸಚಿವರು ಹಾಗೂ ಗ್ರಾಮಾಂತರ ಶಾಸಕರಾದ ಬಿ. ನಾಗೇಂದ್ರ, ನಗರ ಶಾಸಕರಾದ ನಾರಾ ಭರತ್ ರೆಡ್ಡಿ, ಕಂಪ್ಲಿ ಶಾಸಕರಾದ ಜೆ.ಎನ್. ಗಣೇಶ್, ಸಿರುಗುಪ್ಪ ಶಾಸಕರಾದ ಬಿ.ಎಂ. ನಾಗರಾಜ್, ಹಾಗೂ ಸಂಡೂರು ಶಾಸಕಿ ಅನ್ನಪೂರ್ಣಾ ಈ. ತುಕಾರಾಮ್ ಅವರು ಭಾಗವಹಿಸಲಿದ್ದಾರೆ. ಎಂದು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಅಲ್ಲಂ ಪ್ರಶಾಂತ್ ತಿಳಿಸಿದ್ದಾರೆ.

ಆದ್ದರಿಂದ ಬಳ್ಳಾರಿ ಜಿಲ್ಲಾ ಕಾಂಗ್ರೆಸ್ ಪಕ್ಷದ ಹಿರಿಯ ನಾಯಕರು, ಹಾಲಿ/ಮಾಜಿ ಸಂಸದರು, ಹಾಲಿ/ಮಾಜಿ ಸಚಿವರು, ಹಾಲಿ/ಮಾಜಿ ಶಾಸಕರು, ಹಾಲಿ/ಮಾಜಿ ವಿಧಾನ ಪರಿಷತ್ ಸದಸ್ಯರು, ಕೆಪಿಸಿಸಿ/ಡಿಸಿಸಿ/ಬಿಸಿಸಿಯ ಪದಾಧಿಕಾರಿಗಳು, ಮುಂಚೂಣಿ ಘಟಕಗಳ ಅಧ್ಯಕ್ಷರುಗಳು, ಮಹಾನಗರ ಪಾಲಿಕೆಯ ಸದಸ್ಯರು, ನಾಮನಿರ್ದೇಶಿತ ಸದಸ್ಯರು ಮತ್ತು ಪರಾಜಿತ ಅಭ್ಯರ್ಥಿಗಳು, ನಿಗಮ ಮಂಡಳಿಗಳ ಅಧ್ಯಕ್ಷರು ಹಾಗೂ ಸದಸ್ಯರು, ಜಿಲ್ಲಾ/ತಾಲೂಕು/ಗ್ರಾಮ ಪಂಚಾಯತಿಗಳ ಅಧ್ಯಕ್ಷರು ಮತ್ತು ಸದಸ್ಯರು, ಪಕ್ಷದ ಮುಖಂಡರು, ಕಾರ್ಯಕರ್ತರು ಮತ್ತು ಮಹಿಳಾ ಕಾರ್ಯಕರ್ತರು ಸಮಯಕ್ಕೆ ಸರಿಯಾಗಿ ಈ ಸಭೆಯಲ್ಲಿ ಭಾಗವಹಿಸಬೇಕೆಂದು ಕೋರಿದ್ದಾವೇ ಎಂದು ಹೇಳಿದರು.

## ಜಿಲ್ಲಾ ಮಟ್ಟದ ಸಿರಿಧಾನ್ಯಗಳ ತಾಂತ್ರಿಕ ಕಾರ್ಯಾಗಾರ ವಸ್ತು ಪ್ರದರ್ಶನಕ್ಕೆ ಚಾಲನೆ: ಜಮೀರ್ ಅಹ್ಮದ್ ಖಾನ್

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಕೃಷಿ ಇಲಾಖೆ ವತಿಯಿಂದ ಅಂತಾರಾಷ್ಟ್ರೀಯ ವಾಣಿಜ್ಯ ಮೇಳ–2026ರ ಅಂಗವಾಗಿ ರಾಷ್ಟ್ರೀಯ ಆಹಾರ ಭದ್ರತೆ ಹಾಗೂ ಆತ್ಮ ಯೋಜನೆಯಡಿ ನಗರದ ಡಾ.ರಾಜ್ ಕುಮಾರ್ ರಸ್ತೆಯ ಮುನಿಸಿಪಲ್ ಕಾಲೇಜು ಮೈದಾನದಲ್ಲಿ ಭಾನುವಾರ ಆಯೋಜಿಸಿದ್ದ ಜಿಲ್ಲಾಮಟ್ಟದ ತಾಂತ್ರಿಕ ಕಾರ್ಯಾಗಾರ ಮತ್ತು ವಸ್ತು ಪ್ರದರ್ಶನ ಕಾರ್ಯಕ್ರಮವನ್ನು ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಜಿಲ್ಲಾ ಉಸ್ತುವಾರಿ ಸಚಿವ ಬಿ.ಜೆಡ್.ಜಮೀರ್ ಅಹ್ಮದ್ ಖಾನ್ ಅವರು ಉದ್ಘಾಟಿಸಿ, ಚಾಲನೆ ನೀಡಿದರು.

ಬಳಿಕ ಅವರು, ಸಿರಿಧಾನ್ಯಗಳ ಬಳಕೆಯಿಂದ ಆರೋಗ್ಯಯುತ ಜೀವನಕ್ಕೆ ಸಾಕಷ್ಟು ಪ್ರಯೋಜನೆಗಳಿರುವುದರಿಂದ ಸಿರಿಧಾನ್ಯ ಬೆಳೆ ಬೆಳೆಯುವ ಕ್ರಮ ಹಾಗೂ ಇತ–ರೆ ಮಾಹಿತಿ ಕುರಿತಂತೆ ಆಯೋಜಿಸಿದ ತಾಂತ್ರಿಕ ಕಾರ್ಯಾಗಾರದಲ್ಲಿ ರೈತರು ಮಾಹಿತಿ ಪಡೆದುಕೊಳ್ಳಬೇಕು ಎಂದು ಶುಭ ಹಾರೈಸಿದರು.ಬಳಿಕ ಕಾರ್ಯಾಗಾರದಲ್ಲಿ ಮಹಾನಗರ ಪಾಲಿಕೆ ಮೇಯರ್ ಪಿ.ಗಾದೆಪ್ಪ ಅವರು ಮಾತನಾಡಿ, ಇಂದಿನ ದಿನಗಳಲ್ಲಿ ಗಾಳಿ, ನೀರು ಮತ್ತು ಆಹಾರ ಸೇರಿದಂತೆ ಎಲ್ಲವೂ ಕಲುಷಿತಗೊಳ್ಳುತ್ತಿವೆ. ಈ ಮಾಲಿನ್ಯದ ಪರಿಣಾಮವಾಗಿ ಹೃದಯಾಘಾತ, ರಕ್ತದೊತ್ತಡ ಹಾಗೂ ಮಧುಮೇಹದಂತಹ ಕಾಯಿಲೆಗಳು ಹೆಚ್ಚುತ್ತಿವೆ. ನಾವು ಸೇವಿಸುವ ಆಹಾರದಲ್ಲಿ ಗುಣಮಟ್ಟ ಕಾಪಾಡಿಕೊಂಡರೆ ಮಾತ್ರ ಆರೋಗ್ಯವಂತ ಜೀವನ ನಡೆಸಲು ಸಾಧ್ಯ ಎಂದು ಹೇಳಿದರು.

ಕೃಷಿ ಇಲಾಖೆಯು ರೈತರು ಮತ್ತು ಸಾರ್ವಜನಿಕರಲ್ಲಿ ಆಹಾರದ ಗುಣಮಟ್ಟದ ಕುರಿತು ವ್ಯಾಪಕ ಜಾಗೃತಿ ಮೂಡಿಸಬೇಕು.

ವಿಶೇಷವಾಗಿ ಶಾಲಾ–ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗಾಗಿ ಆಹಾರ ಜಾಗೃತಿ ಕಾರ್ಯಾಗಾರಗಳನ್ನು ಹಮ್ಮಿಕೊಳ್ಳಬೇಕು. ಯುವ ಪೀಳಿಗೆಯಲ್ಲಿ ಅರಿವು ಮೂಡಿದಾಗ ಮಾತ್ರ ಆರೋಗ್ಯಪೂರ್ಣ ಸಮಾಜ ನಿರ್ಮಾಣ ಸಾಧ್ಯ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ ಚಿದಾನಂದಪ್ಪ ಅವರು ಮಾತನಾಡಿ, ಸಾವಯವ ಪದ್ಧತಿಯಲ್ಲಿ ಬೆಳೆದ ಆಹಾರ ಪದಾರ್ಥಗಳ ಸೇವನೆಗೆ ಮುಂದಾಗಬೇಕು. ಹಿಂದೆ ಬಡವರ ಆಹಾರವೆಂದು ಪರಿಗಣಿಸಲಾಗಿದ್ದ ರಾಗಿ, ಸಜ್ಜೆ, ಜೋಳದಂತಹ ಸಿರಿಧಾನ್ಯಗಳಿಗೆ ಇಂದು ಹೆಚ್ಚಿನ ಬೇಡಿಕೆ ಬಂದಿದೆ. ಸಿರಿಧಾನ್ಯಗಳ ಬಳಕೆ ಹೆಚ್ಚುವುದರಿಂದ ರೈತರ ಬದುಕು ಹಸನಾಗುವುದಲ್ಲದೆ, ಜನರ ಆರೋಗ್ಯವೂ ಸುಧಾರಿಸುತ್ತದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಕೃಷಿ ವಿಜ್ಞಾನಿಗಳು ವಿಶೇಷ ಉಪನ್ಯಾಸ ನೀಡಿದರು.



**ಗಮನ ಸೆಳೆದ ಉತ್ಪನ್ನ, ವಿವಿಧ ಪರಿಕರ ಮಳಿಗೆಗಳು:**

ಅಂತಾರಾಷ್ಟ್ರೀಯ ವಾಣಿಜ್ಯ ಮೇಳ–2026ರ ಅಂಗವಾಗಿ ಮುನಿಸಿಪಲ್ ಕಾಲೇಜ್ ಮೈದಾನದ ಆವರಣದಲ್ಲಿ ಸಿರಿಧಾನ್ಯಗಳಿಂದ ತಯಾರಿಸಿದ ಉತ್ಪನ್ನಗಳ ಮಳಿಗೆ, ಕೃಷಿ, ತೋಟಗಾರಿಕೆ, ಮೀನುಗಾರಿಕೆ ಹಾಗೂ ವಿವಿಧ ಕೃಷಿ ಪರಿಕರಗಳ ಮಳಿಗೆಗಳು ಸೇರಿದಂತೆ ಒಟ್ಟು ವಿವಿಧ ಮಳಿಗೆಗಳು ಹಾಕಲಾಗಿತ್ತು. ಈ ಸಂದರ್ಭದಲ್ಲಿ ಡಾ.ಬಾಬು ಜಗಜೀವನ ರಾಮ್ ಚರ್ಮ ಕೈಗಾರಿಕಾ ನಿಗಮ ನಿಯಮಿತದ ಅಧ್ಯಕ್ಷ ಮುಂಡರಗಿ ನಾಗರಾಜ, ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ಕೆ., ಜಿಪಂ ಸಿಇಒ ಮಹಮ್ಮದ್ ಹಾರೀಸ್ ಸುಮೇರ್, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್.ಝುಬೇರ್, ಕೃಷಿ ಇಲಾಖೆ ಜಂಟಿ ನಿರ್ದೇಶಕ ಸೋಮಸುಂದರ್, ತಾಲೂಕು ಕೃಷಿ ಅಧಿಕಾರಿ ದಯಾನಂದ ಸೇರಿದಂತೆ ಕೃಷಿ ವಿಜ್ಞಾನಿಗಳು, ಕೃಷಿ ಅಧಿಕಾರಿಗಳು, ರೈತ ಮುಖಂಡರು, ರೈತರು ಪಾಲ್ಗೊಂಡಿದ್ದರು.

## ಜಾತ್ರೆ ಉತ್ಸವ ಕಾರ್ಯಗಳು ಶಾಂತಿ ಮತ್ತು ಸಹಬಾಳ್ವೆಯ ವೇದಿಕೆಯಾಗಿವೆ



• **ಮಲ್ಲಮ್ಮ ನುಡಿ ವಾರ್ತೆಕೊಪ್ಪಳ :**

ನಮ್ಮ ಪೂರ್ವಜರು ಹಾಕಿಕೊಟ್ಟಂತ ಧಾರ್ಮಿಕ ಕಾರ್ಯಕ್ರಮಗಳನ್ನು ಮಾಡುವುದರಿಂದ ಮನಸ್ಸಿಗೆ ನೆಮ್ಮದಿ ನೀಡುತ್ತವೆ ಎಂದು ಮುಖಂಡರಾದ ಕಳಕಪ್ಪ ಕಂಬಳಿ ಹೇಳಿದರು.

ತಾಲೂಕಿನ ಮಂಡಲಗೇರಿ ಗ್ರಾಮದ ಶ್ರೀ ದ್ಯಾಮಾಂಬಿಕಾ ದೇವಿ ದೇವಸ್ಥಾನದಲ್ಲಿ ಜರುಗಿದ ಮೂರ್ತಿ ಪ್ರತಿಷ್ಠಾಪನೆ ಹಾಗೂ ಜಾತ್ರಾ ಕಾರ್ಯಕ್ರಮದ ವೇದಿಕೆಯಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದ ಅವರು ಒಗ್ಗಟ್ಟು ಸಮಾನತೆ, ಸಹ ಬಾಳ್ವೆ ಎನ್ನುವುದು ಗ್ರಾಮೀಣ ಭಾಗದಲ್ಲಿ ಮಾತ್ರ ನಾವು ಕಾಣಬಹುದು, ದೊಡ್ಡ ದೊಡ್ಡ ಪಟ್ಟಣಗಳಲ್ಲಿ ಹೆಚ್ಚು ಸ್ವಾರ್ಥ ತಲೆ ದೂರುತ್ತಿದ್ದು ಸಮಾಜದ ಅಭಿವೃದ್ಧಿಗೆ ಮಾರಕವಾಗುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ಸಾನಿದ್ಯ ವಹಿಸಿ ಮಾತನಾಡಿದ ಮುಂಡರಗಿ ಅನ್ನದಾನೇಶ್ವರ ಶಾಖ ಮಠದ ಡಾ.ಮಹಾದೇವ ಸ್ವಾಮಿಜೀ ಆಶೀರ್ವಚನ ನೀಡಿ ಮನುಷ್ಯನಲ್ಲಿ ತ್ಯಾಗಮನೋಭಾವ ಹೊಂದಿದಾಗ ಮಾತ್ರ ಸಮಾಜದಲ್ಲಿ ಧರ್ಮ ಉಳಿಸಲು ಸಾಧ್ಯವಾಗುತ್ತದೆ ಎಂದರು.

ಗ್ರಾಮದಲ್ಲಿ ಜರುಗುವ ಜಾತ್ರೆ, ಉತ್ಸವ ಇನ್ನಿತರ ಧಾರ್ಮಿಕ ಕಾರ್ಯಕ್ರಮಗಳು ಸಮಾಜದಲ್ಲಿ ಶಾಂತಿ ಮತ್ತು ಸಹಬಾಳ್ವೆಯ ವೇದಿಕೆಗಳಾಗಿರುತ್ತವೆ, ಜಾತಿ ಬೇದ ಮರೆತು ಎಲ್ಲರೂ ಒಗ್ಗಟ್ಟಿನಿಂದ ಕೆಲಸ ಮಾಡಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುತ್ತಾರೆ ಇದರಿಂದ ಧರ್ಮ ನೆಲೆಸುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಪ್ರಾಸ್ತವಿಕವಾಗಿ ಹಿರಿಯ ಮುಖಂಡ ಹಂಚಾಳಪ್ಪ ತಳವಾರ್ ಮಾತನಾಡಿ ಗ್ರಾಮದೇವತೆ ಶ್ರೀ ದ್ಯಾಮಾಂಬಿಕ ದೇವಸ್ಥಾನದಲ್ಲಿ ಪ್ರತಿ ಐದು ವರ್ಷಕ್ಕೆ ಒಮ್ಮೆ ಜಾತ್ರೆ ಹಾಗೂ ಮೂರ್ತಿಯ ವರ್ಣ ಅಲಂಕಾರ ಮಾಡುವ ಮೂಲಕ ಹೋಮ, ಯಜ್ಞ, ಯಗಾದಿಗಳನ್ನು ಮಾಡಲಾಗುತ್ತದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಗುತ್ತಿಗೆದಾರರಾದ ಈರಪ್ಪ ಬಿಸ್ನಳ್ಳಿ, ಉದಯರಾಯ-ರೆಡ್ಡಿ, ಹನುಮಂತಪ್ಪ ಉಪ್ಪಾರ್, ಮಂಜುನಾಥ್ ಕಡೆಮನಿ, ಶ್ರೀಧರ್ ರಾವ್ ದೇಸಾಯಿ, ಜಂಬಣ್ಣ ಅಂಗಡಿ, ಪ್ರವೀಣ್ ಕುಮಾರ್ ಹಿರೇಮಠ, ಶರಣಬಸವನಗೌಡ ವರಪೇಟೆ, ಹನುಮಂತಪ್ಪ ಮೀಸೆ, ಸಿದ್ದಪ್ಪ ಗಿಡ್ಡರ್, ಸಿದ್ದನಗೌಡ ದ್ಯಾಮನಗೌಡ, ಬಸಯ್ಯ ಶಶಿಮಠ, ವಿಶ್ವನಾಥಯ್ಯ ಹಿರೇಮಠ, ಸಿದ್ದನಗೌಡ ಪೊಲೀಸ್ ಪಾಟೀಲ್, ಕೃಷ್ಣಪ್ಪ ಬಡಿಗೇರ್, ಕಳಕಪ್ಪ ಬಿನ್ನಾಳ, ಕಾಳಪ್ಪ ಬಡಿಗೇರ್, ರಫಿ ಮಂಡಲಗಿರಿ, ಹಾಗೂ ಇತರರು ಇದ್ದರು.

## ಕಾಲುವೆಯಲ್ಲಿ ಆಟೋಪಲ್ಟಿ ಡ್ರೈವರು ಮತ್ತೊಬ್ಬರು ನಾಪತ್ತೆ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ಭಾನುವಾರ ಸಾಯಂಕಾಲ ಬಳ್ಳಾರಿ ಸಮೀಪ ಮುಂಡರಗಿ ಹತ್ತಿರ ಕಿಲೋ ಮೀಟರ್ 92ರ ಬಳಿ ಎಚ್ ಎಲ್ ಸಿ ಕೆನಾಲಿನಲ್ಲಿ ಲಗೇಜ್ ಆಟೋ ಪಲ್ಟಿಯಾಗಿ ಮಲ್ಲಿಕಾರ್ಜುನ (43) ವರ್ಷ, ಶಿವಕುಮಾರ್ (36) ವರ್ಷ ಇಬ್ಬರು ನಾಪತ್ತೆಯಾಗಿದ್ದಾರೆ ಎಂದು ಬಳ್ಳಾರಿ ಟ್ರಾಫಿಕ್ ಪೊಲೀಸ್ ಠಾಣೆಯ ಇನ್ಸ್‌ಪೆಕ್ಟರ್ ಅಯ್ಯನಗೌಡ ಪಾಟೀಲ್ ತಿಳಿಸಿದ್ದಾರೆ. ಈ ಘಟನೆ ಬಗ್ಗೆ ಠಾಣೆಯಲ್ಲಿ ದೂರು ದಾಖಲಾಗಿದೆ ಎಂದು ತಿಳಿಸಿದ್ದಾರೆ.

ದಾವಣಗೆರೆ ಮೂಲದ ಆಟೋ ಏ೦17ಆ1562 ಭಾನುವಾರ ಸಾಯಂಕಾಲ ಬಳ್ಳಾರಿಗೆ ಲಗೇಜ್ ಆನ್ ಲೋಡ್ ಮಾಡಿ ತಿರಿಗಿ ದಾವಣಗೆರೆಗೆ ಹೋಗುವ ಸಂದರ್ಭದಲ್ಲಿ ಈ ಆಟೋ ಎಲ್ ಸಿ ಕೆನಾಲ್ ನಲ್ಲಿ ಪಲ್ಟಿ ಆಗಿದೆ ಎಂದು ತಿಳಿಸಿದ್ದಾರೆ.

ಸ್ಥಳೀಯರ ದೂರಿನ ಮೇರೆಗೆ ಟ್ರಾಫಿಕ್ ಪೊಲೀಸ್ ಠಾಣೆ ಸಿಬ್ಬಂದಿ ಹಾಗೂ ಎಚ್ ಎಲ್ ಸಿ ಕೆನಾಲಿಗೆ ಸಂಬಂಧಪಟ್ಟ



ಅಧಿಕಾರಿಗಳು ಸಂಘಟನಾ ಸ್ಥಳಕ್ಕೆ ಭೇಟಿ-ಕೊಟ್ಟು ಪರಿಶೀಲನೆ ಮಾಡಿದ್ದಾರೆ. ಆನಂತರ ಕಾಲುವೆಯಿಂದ ಆಟವನ್ನು ಕ್ರೈನ್ ಗಳ ಮುಖಾಂತರ ಹೊರ ತೆಗೆದಿದ್ದಾರೆ. ಆಟೋನಲ್ಲಿ ವಿವಿಧ ದಾಖಲೆಗಳನ್ನು ಪರಿಶೀಲನೆ ಮಾಡಿದಾಗ ಎರಡು ಮೊಬೈಲ್ ಫೋನುಗಳು ಕಂಡುಬಂದಿದ್ದು ಇವರು ಇಬ್ಬರು ದಾವಣಗೆರೆಯ ಮೂಲದ ವ್ಯಕ್ತಿಗಳು ಎಂದು ತಿಳಿದು ಬಂದಿದೆ.

ಇಬ್ಬರು ವ್ಯಕ್ತಿಗಳು ನಾಪತ್ತೆಯಾಗಿದ್ದು ಕಾಲುವೆಯಲ್ಲಿ ಶೋಧ ಕಾರ್ಯ ಪ್ರಾರಂಭ ಮಾಡಿದ್ದೇವೆ. ಎಲ್ಲಿದ್ದಾರ ಎಂಬ ತಿಳಿದು ಬಂದಿಲ್ಲ ಎಂದು ಟ್ರಾಫಿಕ್ ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ.

## ರಾಜ್ಯದ ಜನತೆಗೆ ಗವಿಸಿದ್ದೇಶ್ವರ ಒಳ್ಳೆಯ ಆಶೀರ್ವಾದ ಮಾಡಲಿ: ಸಚಿವ ತಂಗಡಗಿ

• **ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ:**

ಕೊಪ್ಪಳ ಜಿಲ್ಲೆ ಹಾಗೂ ರಾಜ್ಯದ ಜನರಿಗೆ ಶ್ರೀ ಗವಿಸಿದ್ದೇಶ್ವರ ಒಳ್ಳೆಯ ಆಶೀರ್ವಾದ ಮಾಡಿ, ಜನರು ನೆಮ್ಮದಿಯ ಬದುಕು ಕಟ್ಟಿಕೊಳ್ಳುವಂತಾಗಲಿ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ ಎಸ್. ತಂಗಡಗಿ ಹೇಳಿದರು.



ಅವರು ಸೋಮವಾರ ಶ್ರೀ ಗವಿಸಿದ್ದೇಶ್ವರ ಜಾತ್ರೆಯ ಅಂಗವಾಗಿ ಗವಿಸಿದ್ದೇಶ್ವರ ಮಠದ ತೇರು ಮೈದಾನದಲ್ಲಿ ಹಮ್ಮಿಕೊಂಡಿದ್ದ ತೋಟಗಾರಿಕೆ ಇಲಾಖೆಯ ಫಲ-ಪುಷ್ಪ ಪ್ರದರ್ಶನ, ಕೃಷಿ ಇಲಾಖೆಯ ವಸ್ತುಪ್ರದರ್ಶನ ಮಳಿಗೆಗಳ ಉದ್ಘಾಟನೆ ಮತ್ತು ಅಕ್ಕ-ಪಡೆಯ ವಾಹನ ಹಾಗೂ ಸಾರಿಗೆ ಇಲಾಖೆಯ ನೂತನ ಐದು ಬಸ್ಸುಗಳಿಗೆ ಚಾಲನೆ ನೀಡಿದ ನಂತರ ಪತ್ರಕರ್ತರಿಗೆ ಮಾಹಿತಿ ನೀಡಿ ಮಾತನಾಡಿದರು.

ದಕ್ಷಿಣ ಭಾರತದ ಕುಂಭಮೇಳ ಎಂದೇ ಪ್ರಸಿದ್ಧಿ ಪಡೆದ ಶ್ರೀ ಗವಿಸಿದ್ದೇಶ್ವರ ಜಾತ್ರೆ ಪ್ರತಿವರ್ಷದಂತೆ ಈ ವರ್ಷವೂ ಅದ್ದೂರಿಯಾಗಿ ನಡೆಯುತ್ತಿದೆ. ಜಿಲ್ಲೆಯ ಜನರು ಮಾತ್ರವಲ್ಲದೆ, ಉತ್ತರ ಕರ್ನಾಟಕ ಸೇರಿದಂತೆ ಇಡೀ ರಾಜ್ಯದ ಜನರು ಈ ಜಾತ್ರೆಯಲ್ಲಿ ಭಾಗವಹಿಸುತ್ತಾರೆ. ಗವಿಸಿದ್ದೇಶ್ವರ ಎಲ್ಲಾ ಜನರಿಗೆ ವಿಶೇಷವಾಗಿ ರೈತರಿಗೆ ಒಳ್ಳೆಯದನ್ನು ಮಾಡಲಿ. ಒಳ್ಳೆಯ ಮಳೆ ಬೆಳೆಯಾಗಿ ರೈತರು ನೆಮ್ಮದಿಯಾಗಿ ಇರುವಂತಾಗಲಿ. ಇಂದು ಗವಿಸಿದ್ದೇಶ್ವರ ಮಠದ ತೇರು ಮೈದಾನದಲ್ಲಿ ತೋಟಗಾರಿಕೆ ಇಲಾಖೆವತಿಯಿಂದ ಹಮ್ಮಿಕೊಂಡಿದ್ದ ಫಲ-ಪುಷ್ಪ ಪ್ರದರ್ಶನ ಹಾಗೂ ಕೃಷಿ ಇಲಾಖೆಯ ವಸ್ತುಪ್ರದರ್ಶನ ಮಳಿಗೆಗಳಿಗೆ ಚಾಲನೆ ನೀಡಲಾಗಿದ್ದು, ಇದರಲ್ಲಿ ಕೃಷಿ ಸಂಬಂಧಿಸಿದ ವಿಷಯಗಳ ಕುರಿತು ಬಹಳಷ್ಟು ಮಾಹಿತಿ ಜನರಿಗೆ ದೊರೆಯಲಿದ್ದು ಸಾರ್ವಜನಿಕರು ಹಾಗೂ ರೈತರು ಈ ಮೇಳದಲ್ಲಿ ಭಾಗವಹಿಸಿ ಇದರ ಸದುಪಯೋಗಪಡೆದುಕೊಳ್ಳಬೇಕೆಂದು ಹೇಳಿದರು.

ಕೊಪ್ಪಳ ವಿಧಾನಸಭಾ ಕ್ಷೇತ್ರದ ಶಾಸಕರಾದ ಕೆ. ರಾಘವೇಂದ್ರ ಹಿಟ್ನಾಳ ಅವರು ಮಾತನಾಡಿ, ಶ್ರೀ ಗವಿಸಿದ್ದೇಶ್ವರ ಜಾತ್ರೆಯ ವಿಶೇಷ ಭಕ್ತರೇ ಬಂದು ನಿಂತು ಈ ಜಾತ್ರೆಯನ್ನು ಮಾಡುವುದರ ಜೊತೆಗೆ ಸತತ 15 ದಿನಗಳ ಕಾಲ ಉಚಿತ ದಾಸೋಹ ನಡೆಸುತ್ತಾರೆ ಹಾಗೂ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಾರೆ. ರಥೋತ್ಸವ ನೋಡಲು ಲಕ್ಷಾಂತರ ಜನರು ಸೇರುತ್ತಾರೆ. ರಥೋತ್ಸವಕ್ಕೆ ಬರುವ ಭಕ್ತರು ಶಾಂತಿಯುತವಾಗಿ ಬಂದು ರಥೋತ್ಸವ ಮುಗಿಸಿಕೊಂಡು ಶಾಂತಿಯುತವಾಗಿ ಹಾಗೂ ಕ್ಷೇಮವಾಗಿ ತಮ್ಮ-ತಮ್ಮ ಊರುಗಳಿಗೆ ಹೋಗಬೇಕೆಂದು ಹೇಳಿದರು.

ಈ ಸಂದರ್ಭದಲ್ಲಿ ಕೊಪ್ಪಳ ಸಂಸದರಾದ ಕೆ. ರಾಜಶೇಖರ ಹಿಟ್ನಾಳ, ಜಿಲ್ಲಾಧಿಕಾರಿ ಸುರೇಶ ಬಿ. ಇಟ್ನಾಳ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಸಿದ್ದಿ, ಮಾಜಿ ಸಂಸದರಾದ ಸಂಗಣ್ಣ ಕರಡಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ರೆಡ್ಡಿ ಶ್ರೀನಿವಾಸ, ಉಪಾಧ್ಯಕ್ಷರಾದ ಮಂಜುನಾಥ ಗೊಂಡಬಾಳ, ತೋಟಗಾರಿಕೆ ಇಲಾಖೆಯ ಜಂಟಿ ನಿರ್ದೇಶಕರಾದ ಕೃಷ್ಣ ಉಕ್ಕುಂದ, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಜಿ.ಡಿ. ಕೃಷ್ಣಮೂರ್ತಿ ಸೇರಿದಂತೆ ಇತರೆ ಜನಪ್ರತಿನಿಧಿಗಳು, ಹಾಗೂ ಅಧಿಕಾರಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

## ಬಾಲ್ಯವಿವಾಹ ಮುಕ್ತ ಗ್ರಾ.ಪಂ ಪ್ರಶಸ್ತಿಗೆ ಅರ್ಜಿ

• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ಸರಕಾರ ಆದೇಶದನ್ವಯ 2024-25ನೇ ಸಾಲಿನ ಬಾಲ್ಯವಿವಾಹ ಶೂನ್ಯ ಸಹಿಷ್ಣುತೆ ಹೊಂದಿರುವ ಗ್ರಾಮ ಪಂಚಾಯತಿಗಳಿಗೆ ಬಾಲ್ಯವಿವಾಹ ಮುಕ್ತ ಗ್ರಾಮ ಪ್ರಶಸ್ತಿ ನೀಡುವ ಸಲುವಾಗಿ ಅರ್ಜಿ ಆಹ್ವಾನಿಸಲಾಗಿದೆ. ಪ್ರಶಸ್ತಿ ಮೊತ್ತ 25 ಸಾವಿರ ರೂ.ಗಳಾಗಿದ್ದು, ಅರ್ಜಿ ಸಲ್ಲಿಸುವ ಕೊನೆಯ ದಿನ ಜನವರಿ 20 ಸಂಜೆ 5 ಗಂಟೆಯಾಗಿದೆ. ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಸ್ತ್ರೀ ಶಕ್ತಿ ಭವನ, ಸೆಕ್ಟರ ನಂ.4, ನವನಗರ, ಬಾಗಲಕೋಟೆ ದೂಸಂ.08354-295345ಗೆ ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

## ನವನಗರ ಯೂನಿಟ್-1ರ ನಿವೇಶನ ಮಾಲಿಕರ ಗಮನಕ್ಕೆ

• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ಬಾಗಲಕೋಟೆ ಪಟ್ಟಣ ಅಭಿವೃದ್ಧಿ ಪ್ರಾಧಿಕಾರದಡಿ ಬರುವ ಬಾಗಲಕೋಟೆ ನವನಗರ ಯುನಿಟ್-1ರ ಸೆಕ್ಟರ ನಂ.29 ರಿಂದ 52, 57 ರಿಂದ 63, 63ಎ, ಅಟೋ ಸೆಕ್ಟರ ಹಾಗೂ ಇಂಡಸ್ಟ್ರೀಯಲ್ ಏರಿಯಾ ಮತ್ತು ಯುನಿಟ್-2ರ ಸೆಕ್ಟರ ನಂ.64 ರಿಂದ 66, 75 ರಿಂದ 80, 89 ರಿಂದ 94 ಮತ್ತು 103 ರಿಂದ 111ರ ನಿವೇಶನದಾರರು, ಬಾಡಿಗೆದಾರರು ಸದರಿ ಸ್ಥಳದಲ್ಲಿ ವಸತಿ ಮತ್ತು ವಾಣಿಜ್ಯ ಮಳಿಗೆಗಳನ್ನು ಕಟ್ಟಿಕೊಂಡಿದ್ದು, ಪ್ರಾಧಿಕಾರದ ನಿಯಮಾವಳಿಗಳನ್ವಯ ಒಳಚರಂಡಿ, ನೀರು ಸರಬರಾಜು ಹಾಗೂ ಇನ್ನೀತರ ಪರವಾನಿಗೆಗಳನ್ನು ಪಡೆದು ಕಟ್ಟಡ ನಿರ್ಮಾಣ ಮಾಡಬೇಕು.

ಆದರೆ ಸದರಿ ಸೆಕ್ಟರಗಳ ನಿವಾಸಿಗಳು, ಬಾಡಿಗೆದಾರರು ಪ್ರಾಧಿಕಾರದ ನಿಯಮಗಳನ್ನು ಉಲ್ಲಂಘಿಸಿ ಒಳಚರಂಡಿ, ನೀರು ಸರಬರಾಜು ಹಾಗೂ ಇನ್ನೀತರ ಪರವಾನಿಗೆಗಳನ್ನು ಪಡೆಯದೇ ಕಟ್ಟಡವನ್ನು ನಿರ್ಮಿಸಿರುವುದು ಕಂಡುಬಂದಿರುತ್ತದೆ. ಅದಲ್ಲದೇ ಮುಖ್ಯವಾಗಿ ಒಳಚರಂಡಿ, ನೀರು ಸರಬರಾಜು ಸಂಪರ್ಕ ಕಲ್ಪಿಸಲು ಪರವಾನಿಗೆ ಪಡೆದರೂ ಸಹ ಅಂಗಡಿಗಳ, ಮನೆಗಳ ಅಡುಗೆ ಮತ್ತು ಸ್ನಾನಗೃಹಕ್ಕಾಗಿ ಬಳಕೆ ಮಾಡುತ್ತಿರುವ ನೀರನ್ನು ಒಳಚರಂಡಿಗೆ ಬಿಡದೇ ರಸ್ತೆಯ ಬದಿ ಚರಂಡಿಗೆ ಬಿಟ್ಟಿರುವುದು ಕಂಡುಬಂದಿದ್ದು, ಇದು ಕಾನೂನು ಬಾಹೀರವಾಗಿರುತ್ತದೆ.

ಆದ್ದರಿಂದ ತಾವುಗಳು ಪ್ರಾಧಿಕರದ ನಿಯಮಗಳನ್ವಯ ಅಂಗಡಿಗಳ, ಮನೆಗಳ ಅಡುಗೆ ಮತ್ತು ಸ್ನಾನಗೃಹಕ್ಕಾಗಿ ಬಳಕೆ ಮಾಡಿದ ನೀರನ್ನು ಒಳಚರಂಡಿಗಳಿಗೆ ಸಂಪರ್ಕ ಕಲ್ಪಿಸುವುದು ಹಾಗೂ ರಾಷ್ಟ್ರೀಯ ಹಸಿರು ನ್ಯಾಯ ಮಂಡಳಿ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಮತ್ತು ಸಹಕರಿಸುವಂತೆ ಬಿಟಿಡಿಎ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಉತ್ಸವ ಎಲ್ಲ ಸಂಘಟನೆಗಳ ಪದಾಧಿಕಾರಿಗಳ ಸಭೆ

• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**

ರಾಯಚೂರು ಜಿಲ್ಲೆಯಲ್ಲಿ ಜನವರಿ 29, 30 ಹಾಗೂ 31ರಂದು ಎಡೆದೊರೆ ನಾಡು ರಾಯಚೂರು ಉತ್ಸವ-2026 ಹಮ್ಮಿಕೊಳ್ಳಲಾಗಿದ್ದು, ಈ ಉತ್ಸವದ ಸಿದ್ಧತೆಗಾಗಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜನವರಿ 8ರಂದು ಬೆಳಗ್ಗೆ 11 ಗಂಟೆಗೆ ಜಿಲ್ಲಾ ಪಂಚಾಯತ್ ಕಾರ್ಯಾಲಯದ ಸಭಾಂಗಣದಲ್ಲಿ ಪೂರ್ವಭಾವಿ ಸಭೆಯನ್ನು ಏರ್ಪಡಿಸಲಾಗಿದೆ.

ಈ ಸಭೆಗೆ ರಾಯಚೂರು ಜಿಲ್ಲೆಯಲ್ಲಿನ ವಿವಿಧ ಎಲ್ಲ ಸಂಘಟನೆಗಳ ಹಾಗೂ ಸಮಿತಿಗಳ ಅಧ್ಯಕ್ಷರು ಮತ್ತು ಪದಾಧಿಕಾರಿಗಳು ಹಾಜರಾಗಲು ಅಪರ ಜಿಲ್ಲಾಧಿಕಾರಿಗಳು ಮನವಿ ಮಾಡಿದ್ದಾರೆ.

## ಶ್ರೀಗಳು ಶಿಸ್ತುಬದ್ಧ ಜೀವನಕ್ಕೆ ಆದರ್ಶ ಅವರ ಜ್ಞಾನ ಸಂಪತ್ತು ಅಪಾರ



• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

20ನೇ ಶತಮಾನದ ಶ್ರೇಷ್ಠ ಸಂತ ಸಿದ್ದೇಶ್ವರ ಶ್ರೀಗಳ ಜ್ಞಾನಸಂಪತ್ತು ಅಪಾರವಾಗಿದ್ದು, ಅವರ ಸರಳ ಬದುಕಿನ ಸೂತ್ರ, ಶಿಸ್ತು, ನಿಷ್ಠೆ ನಮ್ಮೆಲ್ಲರ ಬದುಕಿಗೆ ಆದರ್ಶವಾಗಿವೆ ಎಂದು ಮಾಜಿ ಶಾಸಕ ಡಾ.ವೀರಣ್ಣ ಚರಂತಿಮಠ ಹೇಳಿದರು.

ಅವರು ನಗರದ ವಿದ್ಯಾಗಿರಿಯ ವಚನ ರಕ್ಷಕ ಗೆಳೆಯರ ಬಳಗದಿಂದ ಭಾನುವಾರ ಕುದರಿಕನ್ನೂರ ಬಡಾವಣೆಯಲ್ಲಿ ಜ್ಞಾನಯೋಗಿ ಶ್ರೀ ಸಿದ್ದೇಶ್ವರಸ್ವಾಮಿಗಳ ಗುರುವಂದನಾ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದ ಅವರು. ಬಾಗಲಕೋಟೆಗೂ ಸಿದ್ದೇಶ್ವರ ಶ್ರೀಗಳಿಗೂ ಅಪಾರ ನಂಟಿತ್ತು, ಅವರ ಪ್ರವಚನಕ್ಕೆ ಸಾವಿರ - ಸಾವಿರ ಭಕ್ತರು ನಸುಕಿನಲ್ಲಿ ಆಗಮಿಸುತ್ತಿದ್ದರು. ನಾವು ಸ್ವಾಮಿ ವಿವೇಕಾನಂದರನ್ನು ನೋಡಿಲ್ಲ ಆದರೆ ಅವರ ಎಲ್ಲ ಆದರ್ಶಗಳನ್ನು ಶ್ರೀಗಳಲ್ಲಿ ಕಂಡೆವು, 20 ನೇ ಶತಮಾನದ ಶ್ರೇಷ್ಠ ಸಂತರಾಗಿ ನಮಗೆಲ್ಲಾ ಜ್ಞಾನದ ಮಾರ್ಗವನ್ನು ತೋರಿಸಿದ್ದಾರೆ, ಅವರ ಮಾರ್ಗದರ್ಶನದಲ್ಲ ಎಲ್ಲರೂ ಜೀವನ ಸಾಗಿಸೋಣ ಅದುವೇ ಅವರಿಗೆ ನಾವು ನೀಡುವ ಗುರುವಂದನೆಯಾಗಿದೆ ಎಂದರು.

ಪ್ರಾಧ್ಯಾಪಕ ಡಾ.ಜಿ.ಜಿ.ಹಿರೇಮಠ ಅವರು ಉಪನ್ಯಾಸ ನೀಡಿದ ಅವರು ಶ್ರೀಗಳು ಪದ್ಮ ಪ್ರಶಸ್ತಿ ವಿನಮ್ರವಾಗಿ ನಿರಾಕರಿಸಿದ - ಶತಮಾನ ಕಂಡ ಜೇಬಿಲ್ಲದ ಸಂತ ಅವರು ಪ್ರಪಂಚಕ್ಕೇ ಆದರ್ಶಪ್ರಾಯವಾಗಿದ್ದರು, ಹೊಟ್ಟೆ, ನೆತ್ತಿ, ಮತ್ತು ನಾಲಿಗೆಯನ್ನು ಶುದ್ಧವಾಗಿರಿಸಿಕೊಂಡ ಸಾಧಕರಾಗಿದ್ದ ಅವರು, ಪ್ರಕೃತಿಯಲ್ಲೆ ದೈವ ಕಂಡವರು, ತಂಗಾಳಯಾಗಿ ಜ್ಞಾನದ ಪರಿಮಳವನ್ನು ಸುಳಿದವರು, 19ನೇ ವಯಸ್ಸಿನಲ್ಲಿ ಭಗವದ್ಗೀತೆ ಹಾಗೂ ಸಿದ್ದಾಂತ ಶಿಖಾಮಣಿಯನ್ನು ಅತ್ಯಂತ ಚಿಕ್ಕ ವಯಸ್ಸಿನಲ್ಲಿಯೆ ಅತ್ಯಂತ ವಿದ್ವಾಂಸದ ನೆಲೆಗೆ ತಗೆದುಕೊಂಡು ಹೋಗಿ ಅದನ್ನು ದಾಖಲಿಸಿ ಕೀರ್ತಿ ಸಿದ್ದೇಶ್ವರ ಶ್ರೀಗಳದ್ದು, ಗುರುಗಳಾದವರು ಹೀಗೇ ಇರಬೇಕು ಎಂದು ತೋರಿಸಿಕೊಟ್ಟವರು ಸಿದ್ದೇಶ್ವರ ಶ್ರೀಗಳು ಎಂದರು.

ಸಿದ್ದೇಶ್ವರ ಶ್ರೀಗಳ ಒಡನಾಡಿ - ಶಿಷ್ಯ ಜ್ಞಾನಯೋಗಾಶ್ರಮದ ಶ್ರೀ ಹರ್ಷಾನಂದ ಸ್ವಾಮಿಗಳು ಉಪನ್ಯಾಸ ನೀಡಿ ಶ್ರೀಗಳು ಕರುಣಾ ಸಾಗರವಾಗಿದ್ದರು. ಬಡವರ ಮೇಲೆ, ಪರಿಸರ - ಪ್ರಾಣಿಗಳ ಮೇಲೆ ಅಪಾರ ಕರುಣೆ ತೋರುತ್ತಿದ್ದರು ಅವರ ಮೊದಲ ಆದ್ಯತೆ ಜ್ಞಾನ ದಾಸೋಹ - ಅನ್ನದಾಸೋಹವಾಗಿತ್ತು ಎಂದು ನುಡಿದರು.

ಮೈಗೂರು ಶಿವಾನಂದ ಮಠದ ಶ್ರೀ ಗುರುಪ್ರಸಾದ ಸ್ವಾಮಿಗಳು ಹಾಗೂ ದಿವ್ಯ ಸಾನಿಧ್ಯ ವಹಿಸಿದ್ದ ವಿದ್ಯಾಗಿರಿಯ ಕನ್ನೂರ ಹಿರೇಮಠದ ಶ್ರೀ ಸ.ಸ. ವಿಶ್ವರಾಜೇಂದ್ರ ಮಹಾಸ್ವಾಮಿಗಳು ಆಶೀರ್ವಚನ ನೀಡಿ ಜಗತ್ತು ಕಂಡ ಶ್ರೇಷ್ಠ ಸಂತ-ತತ್ವಜ್ಞಾನಿ ಸಿದ್ದೇಶ್ವರ ಅಪ್ಪಂಗಳು ಅವರು ಹೇಳಿದ್ದೆಲ್ಲಾ ಆಗಿದೆ ನಾವು ನಮ್ಮ ಜೀವನದಲ್ಲಿ ಅಳವಡಿಸಿಕೊಂಡರೆ ಜೀವನ ಪಾವನವಾಗುವುದು, ಶ್ರೀ ಸಿದ್ದೇಶ್ವರ ಶ್ರೀಗಳು ಜಗತ್ತಿನ ಶ್ರೇಷ್ಠ ತತ್ವಜ್ಞಾನಿ ಎಂದರು.

ಶಾಸ್ತ್ರೀಯ ಸಂಗೀತ ಪಂಡಿತರಾದ ಜಯತೀರ್ಥ ತಾಸಗಾಂವಕರ ವಚನಗಾನ ನಮನ ನಡೆಸಿಕೊಟ್ಟರು ಅವರಿಗೆ ಚಂದ್ರಶೇಖರ ಆಲೂರ ತಬಲಾ ಹಾಗೂ ಪ್ರಕಾಶ ರುದ್ರಸ್ವಾಮಿಮಠ ಹಾರ್ಮೋನಿಯಮ್ ಸಾಥ ನೀಡಿದರು.

ಇದೇ ಸಂಧರ್ಭದಲ್ಲಿ ಸಾಧಕರಿಗೆ, ಭಾರತೀಯ ರಕ್ಷಣಾ ಪಡೆಯ ನಿವೃತ್ತ ಯೋಧರಿಗೆ, ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ. ವೃದ್ಧಾಶ್ರಮಕ್ಕೆ ಆಹಾರ ವಿತರಣೆ, ಅನಾಥ ಮಕ್ಕಳಿಗೆ ಸಹಾಯ ಧನ ವಿತರಣೆ ಹಾಗೂ ಬಡ ಶಾಲಾ ಮಕ್ಕಳಿಗೆ ನೋಟ ಬುಕ್, ಕಂಪಾಸುಗಳನ್ನು ವಿತರಿಸಲಾಯಿತು

ಸಾಹಿತಿ ರಾಜು ಗಡ್ಡಿಯವರು ರಚಿತ "ಖಾಲಿ ಕೊಡಗಳು "ಹಾಗೂ ಜಿ.ಎಮ್.ಸಿಂಧೂರ ರವರ ಕವನ ಸಂಕಲನ " ಬಿಂಬ " ಪುಸ್ತಕ ಬಿಡುಗಡೆ ಕೂಡ ಮಾಡಲಾಯಿತು. ವೇದಿಕೆಯ ಮೇಲೆ ಹಿರಿಯರಾದ ಶ್ರೀಶೈಲ ಡೆಂಗಿ ಉಪಸ್ಥಿತರಿದ್ದರು. ವಚನ ರಕ್ಷಕ ಗೆಳೆಯರ ಬಳಗಧ ಸಂಚಾಲಕ ಮುತ್ತು ಮಡಿವಾಳರ ಪ್ರಾಸ್ತವಿಕವಾಗಿ ಮಾತನಾಡಿದರು. ಶಿವಾನಂದ ಕುಂಬಾರ ಸ್ವಾಗತಿಸಿದರು, ಎಸ್ ಎಸ್..ತೆಗ್ಗಿ ವಂದಿಸಿದರು. ಡಾ. ರವಿ. ಕೋಟೆಣ್ಣವರ ಪರಿಚಯಿಸಿದರು. ಮೋಹನ ದೇಶಪಾಂಡೆ ನಿರೂಪಿಸಿದರು. ಶಶಿಧರ ಹಂಜಿ. ಆಯ್.ಎಮ್. ಗೌಡರ. ಶಿವಲಿಂಗಪ್ಪಾ ಕುದರಿಕನ್ನೂರ, ಎಚ್.ಡಿ.ಹೊಸಮನಿ. ರಾಜೇಂದ್ರ ರಾಠೋಡ.ರವಿ ಕಾಖಂಡಕಿ. ಚಂದ್ರಶೇಖರ ಗಾಣಿಗೇರ. ರವಿ ಕುದರಿಕನ್ನೂರ. ಶಿವಯ್ಯ ಕಲ್ಮಠ. ಕುಮಾರ ಮುಳ್ಳೂರ, ಚಂದ್ರಶೇಖರ ವಿರಕ್ತಿಮಠ, ಮಲ್ಲಪ್ಪ ಬಂಡಿವಡ್ಡರ, ಗುರು ಅಂಗಡಿ, ಪರಶುರಾಮ ಕಾಕಂಡಕಿ, ಸಂಗಪ್ಪ ಹಡಪದ, ಶಂಕ್ರಯ್ಯ ಗಣಾಚಾರಿ, ಅನ್ನದಾನ್ನಯ್ಯ ಹಿರೇಮಠ, ಸಿದ್ದಣ್ಣ ಬಿರಾದಾರ, ಶಂಕರಗೌಡ ಬೆನ್ನಿಯಾಳ , ರಮೇಶ ಬಡಿಗೇರ, ಸಿದ್ದು ಅಂಗಡಿ ,ವಿನಯ ಕುದುರಿ ಕನ್ನೂರ, ಪವನ ಮಡಿವಾಳರ, ಬಸವರಾಜ ಹುಲಗೇರಿ, ಮಾರುತಿ ಮಡಿವಾಳರ, ಈಶ್ವರ ಕುದರಿಕನ್ನೂರ, ವಿಜಯನಾಥ ಹಿರೇಮಠ, ವೀರೇಶ ಮುತ್ತಿನಮಠ. ಉಮೇಶ ಹಂಚನಾಳ.ಬಸವರಾಜ ಯಂಕಂಚಿ., ಮಲ್ಲು ಅರಳಿಮರದ ಆನಂದ ಎಚ್ ಉಣ್ಣ ಬಾವಿ ವೀರೇಶ ಬುದ್ಧನಿ ಪಿ ಎಸ್ ಅಂಗಡಿ ಸುರೇಶ ಮಡಿವಾಳರ ನಿರಲಗಿ ಅಂಬರೀಷ್ ಕಾರ್ಯಕ್ರಮದ ನೇತ್ರತ್ವ ವಹಿಸಿದ್ದರು. ಬಾಗಲಕೋಟೆ - ವಿದ್ಯಾಗಿರಿಯ - ನವನಗರದ ಸಾವಿರಾರು ಭಕ್ತರು ಭಾಗವಹಿಸಿ ಜ್ಞಾನ ದಾಸೋಹ ಅನ್ನದಾಸೋಹ ಪಡೆದು ಪುನಿತರಾದರು.

## ಸೈಕ್ಲಿಂಗ್ ಸ್ಪರ್ಧೆ ರಾಷ್ಟ್ರಮಟ್ಟಕ್ಕೆ ಆಯ್ಕೆ ವಿದ್ಯಾರ್ಥಿಗಳಿಗೆ ಅಭಿನಂಧನೆ



• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ಬಾಗಲಕೋಟೆಯ ಬಸವೇಶ್ವರ ಪೂರ್ವ ಪ್ರಾಥಮಿಕ, ಪ್ರಾಥಮಿಕ ಹಾಗೂ ನ್ಯೂ ಹೈಸ್ಕೂಲ ಬಾಗಲಕೋಟೆ ಶಾಲೆಯ ವಿದ್ಯಾರ್ಥಿಗಳಾದ ಸಹನಾ ಮುತ್ತಾಲ ಹಾಗೂ ವೈಷ್ಣವಿ ದಾಸನ್ನವರ್ ಈ ಇರ್ವ ವಿದ್ಯಾರ್ಥಿಗಳು ಪ್ರಾಥಮಿಕ ವಿಭಾಗದ ಸೈಕ್ಲಿಂಗ್ ಸ್ಪರ್ದೆಯಲ್ಲಿ ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗಿ ಸಂಘಕ್ಕೆ ಜಿಲ್ಲೆಗೆ ಹೆಮ್ಮೆ ತಂದ ಪ್ರಯುಕ್ತ ಬಿವಿವಿ ಸಂಘದ ಆಡಳಿತ ಕಛೇರಿಯ ಆವರಣದಲ್ಲಿ ಸಂಘದ ಕಾರ್ಯಾಧ್ಯಕ್ಷರಾದ ಡಾ.ವೀರಣ್ಣ ಚರಂತಿಮಠ ಅವರು ವಿದ್ಯಾರ್ಥಿಗಳಿಗೆ ಸನ್ಮಾನಿಸಿ ಗೌರವಿಸಿ ಅಭಿನಂಧಿಸಿದರು.

ಕ್ರೀಡೆಯಲ್ಲಿ ರಾಷ್ಟ್ರಮಟ್ಟಕ್ಕೆ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಅಭಿನಂಧನೆ

ಈ ಸಂಧರ್ಭದಲ್ಲಿ ಶಾಲಾ ಆಡಳಿತ ಮಂಡಳಿಯ ಕಾರ್ಯಧ್ಯಕ್ಷರಾದ ಮಹಾಂತೇಶ್ ಶೆಟ್ಟರ, ಶಾಲಾ ಆಡಳಿತ ಮಂಡಳಿಯ ಪದನಿಮಿತ್ತ ಕಾರ್ಯದರ್ಶಿಗಳಾದ ಕೆ.ಹೆಚ್ ಹೊಸೂರ, ಪ್ರಾಚಾರ್ಯರಾದ ಆರ್. ಎನ್.ಜೋಷಿ, ದೈಹಿಕ ಶಿಕ್ಷಕರು ಹಾಗೂ ಎಲ್ಲ ಸಿಬ್ಬಂದಿವರ್ಗದವರು ಇದ್ದರು.

# ರಾಜ್ಯ ಜನಪ್ರತಿನಿಧಿಗಳನ್ನು ನಿರ್ಲಕ್ಷಿಸಿದ ಇಲಾಖೆ

## ರೈಲ್ವೆ ಮೇಲ್ಸೇತುವೆ ಶಂಕುಸ್ಥಾಪನೆಯಲ್ಲಿ ಗಲಾಟೆ, ಧಿಕ್ಕಾರ

• **ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ**

ಜಿಲ್ಲೆಯಲ್ಲಿ ನಡೆಯುತ್ತಿರುವ ರೈಲ್ವೆ ಗ್ರಾಮಗಾರಿಗಳ ಶಂಕು ಸ್ಥಾಪನೆ ಮತ್ತು ಉದ್ಘಾಟನೆ ಕಾರ್ಯಕ್ರಮದಲ್ಲಿ ಅಡೆ–ತಡೆಗಳು ಜರುಗುತ್ತಲೇ ಇದ್ದು ಇದಕ್ಕೆ ಸೋಮವಾರ ಹಿಟ್ನಾ ಬಳಿ ನಡೆದ ರೈಲ್ವೆ ಮೇಲ್ ಸೇತುವೆ ಶಂಕುಸ್ಥಾಪನೆ ಕಾರ್ಯಕ್ರಮವೇ ತಾಜಾ ಉದಾಹರಣೆಯಾಗಿದೆ

ಹಲವು ವರ್ಷಗಳ ಹಿಂದೆ ಕೊಪ್ಪಳ ನಗರ–ಭಾಗ್ಯನಗರ ರಸ್ತೆಯ ಮೇಲ್ಸೇತುವೆ ಉದ್ಘಾಟನೆ ಸಂದರ್ಭ ಶಾಸಕ ರಾಘವೇಂದ್ರ ಹಿಟ್ನಾಳ , ಆಗಿನ ಸಂಸದರು ಸಂಗಣ್ಣ ಕರಡಿ ಪುತ್ರ ಅಮರೇಶ ನಡುವೆ ತೀವ್ರ ಮಾತಿನ ಚಕಮಕಿ ನಡೆದು ಪರಸ್ಪರ ದೂರು ನೀಡಲಾಗಿತ್ತು.

ಕಳೆದ ವರ್ಷ ಕುಷ್ಟಗಿ ರಸ್ತೆಯ ರೈಲ್ವೆ ಮೇಲ್ಸೇಸೇತುವೆ ಉದ್ಘಾಟನೆ ದಿನಾಂಕ ರೈಲ್ವೆ ರಾಜ್ಯ ಸಚಿವರಿಗೆ ತಿಳಿಸದೆ ಕಾರ್ಯಕ್ರಮ ಆಯೋಜಿಸಿದ್ದು ವಿವಾದವಾಗಿ ಕಾರ್ಯಕ್ರಮ ಮುಂದೂಡಿ ನಂತರ ನಡೆಸಲಾಗಿತ್ತು. ಈಗ ಇತಿಹಾಸವಾಗಿದ್ದು ಇಂದು ಮತ್ತೆ ರೈಲ್ವೆ ಮೇಲ್ ಸೇತುವೆ ಶಂಕು ಸ್ಥಾಪನೆ ಕಾರ್ಯಕ್ರಮ ಗೊಂದಲದ ಗೂಡಾಯಿತು.

ಕೊಪ್ಪಳ ತಾಲೂಕಿನ ಹಿಟ್ನಾಳ ಕ್ರಾಸ್ ಹತ್ತಿರ ರೈಲ್ವೆ ಕ್ರಾಸಿಂಗ್ ಮೇಲ್ಸೇತುವೆ ಕಾಮಗಾರಿಗೆ ಕೇಂದ್ರ ರೈಲ್ವೆ ರಾಜ್ಯ ಖಾತೆ ಸಚಿವ ವಿ. ಸೋಮಣ್ಣ ಅವರು ಶಂಕುಸ್ಥಾಪನೆ ನೆರವೇರಿಸುವ ಕಾರ್ಯಕ್ರಮ ರಂಣ ರಗಾಂಣದಂತಾಗಿದ್ದು ರಾಜ್ಯ ರೈಲ್ವೆ ಸಚಿವರ ವಿರುದ್ಧ ಕೂಗಾಟ ದಿಕ್ಕಾರ ಕೇಳಿ ಬಂದಿದ್ದು ಇದಕ್ಕೆಲ್ಲ ಕಾಂಗ್ರೆಸ್ ಶಾಸಕ ಮತ್ತು ಜಿಲ್ಲಾ ಉಸ್ತುವಾರಿಗಳ ಹೆಸರುಗಳನ್ನು ನಿರ್ಲಕ್ಷಿಸಿದೆ ಕಾರಣ ಎಂದು ಹೇಳಲಾಗುತ್ತಿದೆ.

ಕಾಮಗಾರಿ ಶಿಲನ್ಯಾಸದ ಕಲ್ಲಿನಲ್ಲಿ ಜಿಲ್ಲಾ ಉಸ್ತುವಾರಿ ಸಚಿವರ, ಕೊಪ್ಪಳ ಶಾಸಕರ, ಕೊಪ್ಪಳ ಸಂಸದರ ಹೆಸರು ಇಲ್ಲ ಎಂದು ಉಸ್ತುವಾರಿ ಸಚಿವ ಶಿವರಾಜ ತಂಗಡಗಿ ಮಾಡಿದ ಅವಸರದ ಆರೋಪದಿಂದ ಗೊಂದಲ ನಿರ್ಮಾಣವಾಗಿದ್ದು,ನಮ್ಮ ಹೆಸರುಗಳು ಇಲ್ಲ ಎಂದು ತಂಗಡಗಿ ಮಾತಿನಿಂದ ತಬ್ಬಿಬ್ಬಾದ ಸೋಮಣ್ಣನವರು ಅಲ್ಲಿಯೆ ಪರಿಶೀಲನೆ ಮಾಡಿದಾಗ ಶಿಲನ್ಯಾಸದ ಕಲ್ಲಿನಲ್ಲಿ ಪ್ರೋಟೋಕಾಲ್ ಪ್ರಕಾರ ಶಾಸಕರು,ಸಂಸದರು ಜಿಲ್ಲಾ ಸಚಿವರ ಹೆಸರು ನಮೂದಿಸಿದ್ದು ಕಂಡುಬಂದಿದ್ದು.ಅಷ್ಟರೊಳಗೆ ಕಾಂಗ್ರೆಸ್ ಕಾರ್ಯಕರ್ತರು ಕುರ್ಚಿಗಳನ್ನು ಎಸೆದಾಡಿದ್ದರು



ರೈಲ್ವೆ ಸಚಿವರ ವಿರುದ್ಧ ಧಿಕ್ಕಾರ ಕೂಗಿದ್ದರು.

ನಂತರ ಬ್ಯಾನರ್ ನಲ್ಲಿ ಫೋಟೋ ಇಲ್ಲ ಎಂದು ಆರೋಪಿಸಿ ಗಲಾಟೆ ನಡೆದಿದೆ. ರೈಲ್ವೆ ಇಲಾಖೆಯ ಯಾವುದೇ ಕಾರ್ಯಕ್ರಮದ ಬ್ಯಾನರ್ ನಲ್ಲಿ ಪ್ರಧಾನ ಮಂತ್ರಿಗಳ ಫೋಟೋ ಹೊರತು ಬೇರೆ ಯಾರ ಫೋಟೋ ಇರುವುದಿಲ್ಲ.

ರೈಲ್ವೆ ಅಧಿಕಾರಿಗಳು ಪ್ರೋಟೋಕಾಲ್ ಪಾಲನೆ ಮಾಡಿದ್ದಾರೆ. ಕೊಪ್ಪಳ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ನಿಂದ ಗೆದ್ದಿರುವ ಸಂಸದರಿದ್ದರು ಕೂಡ ನಾವು ಅಭಿವೃದ್ಧಿಯಲ್ಲಿ ಯಾವುದೇ ಭೇದಭಾವ ಮಾಡುವುದಿಲ್ಲ. ಇದರಲ್ಲಿ ಅನಾವಶ್ಯಕ ವಿವಾದ ಮಾಡಬೇಡಿ ಎಂದು ಸೋಮಣ್ಣನವರು ಮನವಿ ಮಾಡುವ ಮೂಲಕ ಪರಿಸ್ಥಿತಿ ತಿಳಿಗೊಳಿಸಿದರಾದರು ಅಷ್ಟೊತ್ತಿಗೆ ಕಾರ್ಯಕ್ರಮ ಮುಗಿದು ಜನರೆಲ್ಲ ಎದ್ದು ಹೋಗಿದ್ದರು.

# ತಂತ್ರಜ್ಞಾನದ ಮೂಲಕ ಸುಸ್ಥಿರ ಪರಿಸರ ಸೃಷ್ಟಿ

SAMSUNG

**ಬೆಂಗಳೂರು:** ಬಹಳಷ್ಟು ದಶಕಗಳಿಂದ ಪರಿಸರ ಸುಸ್ಥಿರತೆ ವಿಚಾರದಲ್ಲಿ ರಾಜಿ ಮಾಡಿಕೊಂಡೇ ಬರಲಾಗುತ್ತಿದೆ. ಇದೀಗ ಸ್ಯಾಮ್‌ಸಂಗ್ ಸಂಸ್ಥೆಯು ಐಐಟಿ ದೆಹಲಿ ಸಹಭಾಗಿತ್ವದಲ್ಲಿ ನಡೆಸುವ ತನ್ನ ಪ್ರಮುಖ ಶೈಕ್ಷಣಿಕ ಯೋಜನೆಯಾದ ಸ್ಯಾಮ್‌ಸಂಗ್ ಸಾಲ್ವ್ ಫಾರ್ ಟುಮಾರೋ (ಎಸ್‌ಎಫ್‌ಟಿ) 2025 ಮೂಲಕ ಬದಲಾವಣೆ ತರುವ ಪ್ರಯತ್ನ ಮಾಡಿದೆ. ಕಂಪನಿಯ ಪ್ರೇರಣೆಯಿಂದ ಯುವ ಸಂಶೋಧಕರು ತಂತ್ರಜ್ಞಾನವು ಗ್ರಹವನ್ನು ರಕ್ಷಿಸುತ್ತಾ ಸಮೃದ್ಧಿಯನ್ನು ಉಂಟು ಮಾಡಬಹುದು ಎಂಬುದನ್ನು ತೋರಿಸಿಕೊಟ್ಟಿದ್ದಾರೆ. ಈ ಸ್ಪರ್ಧೆಯಡಿಯಲ್ಲಿ ಭಾರತದಾದ್ಯಂತ ಇರುವ ಸಾವಿರಾರು ವಿದ್ಯಾರ್ಥಿಗಳು "ತಂತ್ರಜ್ಞಾನದ ಮೂಲಕ ಪರಿಸರ ಸುಸ್ಥಿರತೆ" ಎಂಬ ಥೀಮ್‌ನಡಿ ಸಂಪನ್ಮೂಲ ಸಂರಕ್ಷಣೆ, ತ್ಯಾಜ್ಯ ನಿರ್ವಹಣೆ, ಶುದ್ಧ ನೀರು ಮತ್ತು ಕಾರ್ಬನ್ ಕಡಿತಗೊಳಿಸುವಿಕೆಯ ಮೇಲೆ ಗಮನ ಕೇಂದ್ರೀಕರಿಸಿ ಅತ್ಯಾಧುನಿಕ ಪರಿಹಾರೋತ್ಪಗಳನ್ನು ವಿನ್ಯಾಸಗೊಳಿಸಿದ್ದಾರೆ.

## ಪರಿಸರ ಸಂರಕ್ಷಣೆಗೆ ಮಹತ್ವದ ಹೆಜ್ಜೆ

**ಬೀದರ:** ಕರ್ನಾಟಕ ಘನ ಸರ್ಕಾರದ ಮಾನ್ಯ ಸಚಿವರಾದ ಸನ್ಮಾನ್ಯ ಶ್ರೀ ಈಶ್ವರ ಖಂಡ್ರೆ ಯವರು ಬೆಂಗಳೂರು ಹೃದಯ ಭಾಗದಲ್ಲಿ 153



ಎಕರೆ ಪ್ರದೇಶದಲ್ಲಿ ವಿಶ್ವಗುರು ಬಸವಣ್ಣ ಜೀವವೈವಿಧ್ಯ ಉದ್ಯಾನ ಯೋಜನೆಗಾಗಿ ಮೀಸಲಿರಿಸಿದ್ದಾರೆ. ಈ ಅಪೂರ್ವ ಕಾರ್ಯವು ನಗರದ ಮಧ್ಯ ಪರಿಸರ ಸಂರಕ್ಷಣೆಗೆ ಮಹತ್ವದ ಹೆಜ್ಜೆಯಾಗಿದೆ. ಈ ಉದ್ಯಾನವನ ಮಹಾಮಾನವತವಾದಿ ಸಾಂಸ್ಕೃತಿಕ ನಾಯಕ ಬಸವಣ್ಣನವರ ಹೆಸರಿನಲ್ಲಿ ನಾಮಕರಣ ಮಾಡಲಾಗಿದೆ. ಇದು ಆಧ್ಯಾತ್ಮಿಕ ಮತ್ತು ಪರಿಸರ ಸಾಮರಸ್ಯದ ಸಂಕೇತವಾಗಿದೆ. ಸಚಿವರ ದೂರದೃಷ್ಟಿ, ನಾಯಕತ್ವ ಮತ್ತು ಅಚಲ ನಿರ್ಧಾರ ಕರ್ನಾಟಕದ ಪರಿಸರ ಇತಿಹಾಸದಲ್ಲಿ ಚಿರಸ್ಥಾಯಿಯಾಗಿದೆ. ಈ ಮಹತ್ವದ ಕಾರ್ಯಕ್ಕಾಗಿ ಬೀದರ ಬಸವಸೇವಾ ಪ್ರತಿಷ್ಠಾನದ ಅಧ್ಯಕ್ಷರಾದ ಪೂಜ್ಯ ಡಾ. ಗಂಗಾಂಬಿಕಾ ಅಕ್ಕ ಹೃತ್ಪೂರ್ವಕ ಅಭಿನಂದನೆ ಸಲ್ಲಿಸಿದ್ದಾರೆ.

## ನೂತನ ಪದಾಧಿಕಾರಿಗಳ ಆಯ್ಕೆ



**ಹುಣಸೂರು:** ತಾಲೂಕಿನ ಬಹುಜನ ಸಮಾಜ ಪಾರ್ಟಿ, ನೂತನವಾಗಿ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಗಿದೆ ಎಂದು ಜಿಲ್ಲಾಧ್ಯಕ್ಷರಾದ ಚಂದ್ರಶೇಖರ್ ತಿಳಿಸಿದ್ದಾರೆ.

ನಗರದ ಪತ್ರಕರ್ತರ ಸಂಘದ ಕಚೇರಿಯಲ್ಲಿ ಕರೆಯಲಾಗಿದೆ ಸುದ್ದಿಗೋಷ್ಠಿಯಲ್ಲಿ ಮಾತನಾಡಿ ತಾಲೂಕಿನ ನೂತನ ಅಧ್ಯಕ್ಷರಾಗಿ ಕೆಎಎಸ್‌ಆರ್. ಸಿ ಇಲಾಖೆಯ ನಿವೃತ್ತ ಅಧಿಕಾರಿ ಕೃಷ್ಣ ಎಂ ಬೀಜಗನಹಳ್ಳಿ ಉಪಾಧ್ಯಕ್ಷರಾಗಿ ಚಂದ್ರೇಗೌಡ ಮೂಕನ ಹಳ್ಳಿ ಪ್ರಧಾನ ಕಾರ್ಯದರ್ಶಿಯಾಗಿ ಜಯರಾಮ್ ನೆಲ್ಲೂರು ಪಾಲ ತಾಲೂಕು ಉಸ್ತುವಾರಿಯಾಗಿ ಮಂಜುನಾಥ್ ಹಳೇಬೀಡು ಖಜಾಂಚಿ ಲೋಕೇಶ್ ಜಿಲ್ಲಾ ಕಾರ್ಯದರ್ಶಿಯಾಗಿ. ಕೃಷ್ಣಪ್ಪ ಕಚೇರಿಯ ಕಾರ್ಯದರ್ಶಿಯಾಗಿ ನರಸಿಂಹ ಹಳೇಬೀಡು ನಗರದ ಅಧ್ಯಕ್ಷರಾಗಿ ಮುಬಾರಕ್ ರವರಿಗೆ ಆಯ್ಕೆ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

ರಾಜ್ಯ ಸ್ಥಳೀಯ. ಸಂಸ್ಥೆ ಮುಂಬರುವ ಚುನಾವಣೆಗೆ ನಮ್ಮ ಪಕ್ಷದ ಸಿದ್ಧಾಂತಗಳನ್ನು ಒಪ್ಪಿಕೊಂಡು ಬಿಎಸ್ಪಿ ಪಕ್ಷಕ್ಕೆ ಬರುವವರಿಗೆ ನಾವು ಆಹ್ವಾನಿಸುತ್ತೇವೆ ಅವರಿಗೆ ಚುನಾವಣೆಯನ್ನು ಸ್ಪರ್ಧಿಸಲು ಅವಕಾಶವನ್ನು ಮಾಡಿಕೊಡುತ್ತೇವೆ ಎಂದು ತಿಳಿಸಿದ್ದಾರೆ.

ಬಿ ಎಸ್ ಪಿ ಪಕ್ಷ ಯಾವುದೇ ಉದ್ಯಮಿಗಳಿಂದ ಹಾಗೂ ಬಂಡವಾಳ ಶಾಹಿಗಳು ಹಣ ಪಡೆದೆ ಅಧಿಕಾರಕ್ಕೆ ಬಂದಿಲ್ಲತಮ್ಮ ಸ್ವಂತ ಬಲದಿಂದ ಅಧಿಕಾರ ಮಾಡಿರುವ ನಮ್ಮ ಬಿ ಎಸ್ ಪಿ ಪಕ್ಷ ಅಧಿಕಾರ ಮಾಡಿದ್ದೇವೆ ಎಂದು ತಿಳಿಸಿದರು. ಬಿ ಎಸ್ ಪಿ ಪಕ್ಷದ ನಾಯಕರಾದ ಮಾಯಾವತಿ ರವರ ಹುಟ್ಟುಹಬ್ಬಕ್ಕೆ ತಾಲೂಕಿನಲ್ಲಿ ಮನೆಮನೆಗಳಿಗೆ ಭೇಟಿ ನೀಡಿ ದೇಣಿಯನ್ನು ಸಂಗ್ರಹಿಸಲಾಗುವುದು ಹಾಗೂನಮ್ಮ ಪಕ್ಷದ ನಾಯಕರಾದ ಮಾಯಾವತಿ ರವರ 69ನೆಯ ಹುಟ್ಟುಹಬ್ಬವನ್ನು ಜನವರಿ 15 ರಂದುಮೈಸೂರಿನ ಜಗನ್ ಮೋಹನ್ ಪ್ಯಾಲೇಸ್ ಆಚರಿಸಲಾಗಿದೆ. ಸುದ್ದಿಗೋಷ್ಠಿಯಲ್ಲಿ ಬಿಎಸ್ಪಿ ಯ ರಾಜ್ಯ ಕಾರ್ಯದರ್ಶಿ ಭರತ್ ಗೌಡ ಜಿಲ್ಲಾ ಉಸ್ತುವಾರಿ ಬಸವಣ್ಣ ದುಂಡಿಗೆರೆ ತಾಲೂಕಿನ ಅಧ್ಯಕ್ಷರು ಕೃಷ್ಣ ಎಂ ಉಪಾಧ್ಯಕ್ಷರಾದ ಚಂದ್ರೇಗೌಡ ಜಿಲ್ಲಾ ಕಾರ್ಯದರ್ಶಿ ರಾಜೇಶ್ ಹಾಗೂ ಇನ್ನಿತರು ಹಾಜರಿದ್ದರು.

## ಜನತೆ ಶಾಂತಿಯಿಂದ ಇರಲು ಭೀಮರಾವ ಪಾಟೀಲ ಮನವಿ



**ಹುಮನಾಬಾದ್:** ಇತ್ತೀಚಿನ ಬೆಳವಣಿಗೆಗಳ ಹಿನ್ನೆಲೆಯಲ್ಲಿ ಹುಮನಾಬಾದ್ ತಾಲ್ಲೂಕಿನ ಜನತೆ ಯಾವುದೇ ಗೊಂದಲಕ್ಕೆ ಒಳಗಾಗದೆ ಶಾಂತಿ ಮತ್ತು ಸೌಹಾರ್ದತೆಯಿಂದ ಇರಬೇಕೆಂದು ಎಂಎಲ್ ಸಿ ಭೀಮರಾವ ಪಾಟೀಲ ಅವರು ಸೊಮವಾರ ಸುದ್ದಿಗೊಷ್ಠಿ ಕರೆದು ಮನವಿ ಮಾಡಿದ್ದಾರೆ. ಸಮಾಜದಲ್ಲಿ ಶಾಂತಿ ಕಾಪಾಡುವುದು ಎಲ್ಲರ ಕರ್ತವ್ಯವಾಗಿದ್ದು, ಕಾನೂನು ಕೈಗೆತ್ತಿಕೊಳ್ಳದೇ ಆಡಳಿತ ಹಾಗೂ ಪೊಲೀಸ್ ಇಲಾಖೆಯೊಂದಿಗೆ ಸಹಕಾರ ನೀಡಬೇಕು ಎಂದು ಹೇಳಿದರು. ಯಾವುದೇ ಸಮಸ್ಯೆಗಳಿದ್ದರೂ ಸಂವಾದ ಮತ್ತು ಕಾನೂನು ಮಾರ್ಗದ ಮೂಲಕ ಪರಿಹಾರ ಕಂಡುಕೊಳ್ಳುವುದು ಅಗತ್ಯವಿದೆ ಎಂದು ಅವರು ತಿಳಿಸಿದರು.

## ವಾಲ್ಮೀಕಿ ಪುತ್ತಳಿ ಅನಾವರಣ: ತಪಾಸಣೆ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**



ವಾಲ್ಮೀಕಿ ಪುತ್ತಲಿ ಅನಾವರಣ ಕಾರ್ಯಕ್ರಮದ ಹಿನ್ನೆಲೆ ಹಾಗೂ ಇತ್ತೀಚೆಗೆ ನಡೆದ ಗಲಭೆ ಪ್ರಕರಣದ ಹಿನ್ನೆಲೆಯಲ್ಲಿ ಗಂಗಾವತಿ ಕ್ಷೇತ್ರದ ಹಾಲಿ ಶಾಸಕ ಗಾಲಿ ಜನಾರ್ಧನ್ ರೆಡ್ಡಿ ಅವರ ನಿವಾಸದ ಮುಂಭಾಗ ಇಂದು ಬೆಳಿಗ್ಗೆ ಬಾಂಬ್ ಸ್ಕ್ವಾಡ್ ತಂಡವು ಸಮಗ್ರ ತಪಾಸಣೆ ನಡೆಸಿತು. ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಮುನ್ನೆಚ್ಚರಿಕಾ ಕ್ರಮವಾಗಿ ಪೊಲೀಸ್ ಇಲಾಖೆ ಈ ಕ್ರಮ ಕೈಗೊಂಡಿದೆ.

ವಾಲ್ಮೀಕಿ ಪುತ್ತಲಿ ಅನಾವರಣ ಕಾರ್ಯಕ್ರಮದ ಸಂದರ್ಭದಲ್ಲಿ ಉಂಟಾದ ಉದ್ವಿಗ್ನ ಪರಿಸ್ಥಿತಿ ಹಾಗೂ ನಂತರ ನಡೆದ ಗಲಭೆ ಪ್ರಕರಣವು ಜಿಲ್ಲೆಯಾದ್ಯಂತ ಚರ್ಚೆಗೆ ಗ್ರಾಸವಾಗಿದ್ದು, ಭದ್ರತಾ ದೃಷ್ಟಿಯಿಂದ ಜನಾರ್ಧನ್ ರೆಡ್ಡಿ ಅವರ ನಿವಾಸದ ಸುತ್ತಮುತ್ತ ಹೆಚ್ಚುವರಿ ಎಚ್ಚರಿಕೆ ವಹಿಸಲಾಗಿದೆ. ಈ ಹಿನ್ನೆಲೆ ಇಂದು ಬೆಳಿಗ್ಗೆ ಬಾಂಬ್ ಸ್ಕ್ವಾಡ್ ಸಿಬ್ಬಂದಿ ಪೊಲೀಸ್ ಇಲಾಖೆಯ ಸಹಯೋಗದೊಂದಿಗೆ ಮನೆ ಮುಂಭಾಗ, ಆವರಣ ಹಾಗೂ ಸುತ್ತಲಿನ ಪ್ರದೇಶಗಳಲ್ಲಿ ಸೂಕ್ಷ್ಮ ಪರಿಶೀಲನೆ ನಡೆಸಿದರು.

ಆಧುನಿಕ ಸಾಧನಗಳ ಸಹಾಯದಿಂದ ತಪಾಸಣೆ ನಡೆಸಿದ ಬಾಂಬ್ ಸ್ಕ್ವಾಡ್ ತಂಡಕ್ಕೆ ಯಾವುದೇ ಸ್ಫೋಟಕಗಳು ಅಥವಾ ಅನುಮಾನಾಸ್ಪದ ವಸ್ತುಗಳು ಪತ್ತೆಯಾಗಿಲ್ಲ ಎಂದು ಪೊಲೀಸ್ ಮೂಲಗಳು ತಿಳಿಸಿವೆ. ಆದರೂ, ಪರಿಸ್ಥಿತಿಯ ಗಂಭೀರತೆಯನ್ನು ಗಮನದಲ್ಲಿಟ್ಟುಕೊಂಡು ಸ್ಥಳದಲ್ಲಿ ಪೊಲೀಸ್ ಬಿಗಿ ಬಂದೋಬಸ್ತ್ ಏರ್ಪಡಿಸಲಾಗಿದ್ದು, ಸಾರ್ವಜನಿಕರ ಸಂಚಾರದ ಮೇಲೂ ಕಟ್ಟುನಿಟ್ಟಿನ ನಿಗಾವಹಿಸಲಾಗಿದೆ ಎಂದು ಪೊಲೀಸ್ ಅಧಿಕಾರಿಗಳು ಸ್ಪಷ್ಟಪಡಿಸಿದ್ದಾರೆ.

## ಹಾವಗೀಸ್ವಾಮಿ ಜಾತ್ರಾ ಮಹೋತ್ಸವ ಪಾದಯಾತ್ರೆ

• **ಮಲ್ಲಮ್ಮ ನುಡಿ ವಾರ್ತೆ ಕಮಲನಗರ**



ಗಡಿಭಾಗದ ಮಹಾರಾಷ್ಟ್ರದ ಉದಗೀರ ಪಟ್ಟಣದಲ್ಲಿ ಹಾವಗೀಸ್ವಾಮಿ ಜಾತ್ರಾ ಮಹೋತ್ಸವದ ನಿಮಿತ್ತ ಕಮಲನಗರ ತಾಲೂಕಿ ಡೋಣಗಾಂವ(ಎಮ್) ಗ್ರಾಮದ ಹಾವಗೀಸ್ವಾಮಿ ಮಠದಿಂದ ಭಾನುವಾರ ಬೆಳಿಗ್ಗೆ ಆರಂಭಗೊಂಡ ಪಾದಯಾತ್ರೆಗೆ ಮಠದ ಉಮಾಕಾಂತ ದೇಶಿ ಕೇಂದ್ರ ಚಾಲನೆ ನೀಡಿದರು.

ದಾರಿಯೂದ್ದಕ್ಕೂ ಭಜನೆ, ಹಾವಗೀಸ್ವಾಮಿಯವರ ಜೈಕಾರ ಮುಗಿಲು ಮುಟ್ಟುವಂತೆ ಹಾಕಿದರು. ದಾರಿ ಮಧ್ಯೆ ಭಕ್ತಾದಿಗಳಿಗೆ ಅಲ್ಲಲ್ಲಿ ಪ್ರಸಾದ ವ್ಯವಸ್ಥೆ ಮಾಡಲಾಗಿತ್ತು.ಪಾದಯಾತ್ರೆಯು ಮುರ್ಕಿ ಮಾರ್ಗವಾಗಿ ಮುರ್ಕಿವಾಡಿ, ಧೊಂಡಿಪುರಗಾ, ತೊಂಡಚಿರ್, ಶೆಲ್ಯಾಳ ಮಾರ್ಗವಾಗಿ ಉದಗೀರ ಪಟ್ಟಣದ ಹಾವಗೀಸ್ವಾಮಿ ಮಠದವರೆಗೆ ಸಾಗಿತು.

ಈ ಸಂದರ್ಭದಲ್ಲಿ ಶೈಲೇಶ ದೇಶಮುಖ, ವಿಜಯಕುಮಾರ ದೇಶಮುಖ, ಬಾಲಾಜಿ ದೇಶಮುಖ, ಅಪ್ಪಾಸಾಬ ದೇಶಮುಖ, ವಿಶಾಲ ದೇಶಮುಖ, ವಿಜಯಕುಮಾರ ದೇಶಮುಖ, ಶೈಲೇಶ ಪೇನೆ, ಉಮಾಕಾಂತ ಪಾಂಚಾಳ, ಶಿವಾನಂದ ಸ್ವಾಮಿ, ಮಾಣಿಕರಾವ ಹೊಂಡಾಳೆ, ಕಂಟೇಪ್ಪಾ ಹೊಂಡಾಳೆ, ಸೋಮನಾಥ ಚಂದಾಪುರೆ, ಅಜಯ ಬಾವಲಗಾವೆ ಹಾಗೂ ಹಾಗೂ ಅನೇಕ ಗ್ರಾಮದ ಮಹಿಳೆಯರು, ಪುರುಷರು ಪಾಲ್ಗೊಂಡಿದ್ದರು.

## ವಿಶ್ವಗುರು ಬಸವಣ್ಣ ಜೀವವೈವಿಧ್ಯ ಉದ್ಯಾನಕ್ಕೆ ಸಂಪುಟದ ಅನುಮೋದನೆ

• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ**



ಬೆಂಗಳೂರಿನಲ್ಲಿ ವಿಶ್ವಗುರು ಬಸವಣ್ಣನವರ ಜೀವವೈವಿಧ್ಯ ಉದ್ಯಾನಕ್ಕೆ ಕರ್ನಾಟಕ ಸಚಿವ ಸಂಪುಟ ಅನುಮೋದನೆ ನೀಡಿದ ಹಿನ್ನಲೆಯಲ್ಲಿ, ಖಟಕಚಿಂಚೋಳಿ ಹುಗ್ಗೆಳ್ಳಿ ಹಿರೇಮಠದ ಶ್ರೀ ಬಸವಲಿಂಗ ಸ್ವಾಮೀಜಿಯವರ ನೇತೃತ್ವದಲ್ಲಿ ಅರಣ್ಯಸಚಿವ ಈಶ್ವರ ಖಂಡ್ರೆಯವರಿಗೆ ಅಭಿನಂದನೆ ಸಲ್ಲಿಸಲಾಯಿತು.

ಪಟ್ಟಣದ ಸಚಿವರ ನಿವಾಸದಲ್ಲಿ ಸೋಮವಾರ ಖಟಕಚಿಂಚೋಳಿಯ ಹಿರೇಮಠ (ಹುಗ್ಗೆಳ್ಳಿ) ಸಂಸ್ಥಾನದ ಪೀಠಾಧಿಪತಿ ಶ್ರೀ ಬಸವಲಿಂಗ ಸ್ವಾಮೀಜಿ ನೇತೃತ್ವದಲ್ಲಿ ತಾಲೂಕಿನ ಲಿಂಗಾಯತ ಮುಖಂಡರು ಉದ್ಯಾನವನಕ್ಕೆ ಪ್ರಯತ್ನಿಸಿ, ಅನುಮೋದನೆ ಪಡೆದ ಅರಣ್ಯ ಸಚಿವರಿಗೆ ಅಭಿನಂದನೆ ಸಲ್ಲಿಸಿ ಮಾತನಾಡಿದರು. ವಿಶ್ವಗುರು ಬಸವಣ್ಣನವರ ತತ್ವಾದರ್ಶಗಳನ್ನು ಜನಮಾನಸದಲ್ಲಿ ಅಚ್ಚಳಿಯದೇ ಇರಲು, ಬೆಂಗಳೂರು ಮಹಾನಗರದಲ್ಲಿ ಅರಣ್ಯ ಇಲಾಖೆಯಿಂದ 153 ಎಕರೆ ಪ್ರದೇಶದಲ್ಲಿ ವಿಶ್ವಗುರು ಬಸವಣ್ಣ ಜೀವವೈವಿಧ್ಯ ಉದ್ಯಾನ ಯೋಜನೆಗೆ ಸಚಿವ ಸಂಪುಟದಲ್ಲಿ ಅನುಮೋದನೆ ನೀಡಿ, ಬೆಂಗಳೂರು ಮಹಾನಗರದಲ್ಲಿ ಅತ್ಯಗತ್ಯವಾದ ಶ್ವಾಸತಾಣ ಹಾಗೂ ಮನೋಲ್ಲಾಸ ಕೇಂದ್ರವಾಗಿ ಈ ಉದ್ಯಾನವನ್ನು ಅಭಿವೃದ್ಧಿಪಡಿಸಲು, ಸುಮಾರು 50 ಕೋಟಿ ರೂ. ಅನುದಾನ ಮಂಜೂರು ಮಾಡಿರುವುದು ಅತ್ಯಂತ ಸಂತೋಷ ತಂದಿದೆ ಎಂದರು.

ಅಭಿನಂದನೆ ಸ್ವೀಕರಿಸಿ ಮಾತನಾಡಿದ ಸಚಿವ ಈಶ್ವರ ಖಂಡ್ರೆ, ವಿಶ್ವಗುರು ಬಸವಣ್ಣನವರು 12ನೇ ಶತಮಾನದಲ್ಲಿ ಅನುಭವಮಂಟಪ ಸ್ಥಾಪಿಸುವ ಮೂಲಕ ಜಗತ್ತಿಗೆ ಪ್ರಪ್ರಥಮವಾಗಿ ಸಂಸತ್ತಿನ ಕಲ್ಪನೆಯನ್ನು ನೀಡಿದರು. ಅಂದಿನ ಕಾಲದಲ್ಲಿ ತುಳಿತಕ್ಕೆ ಒಳಗಾಗಿರುವ ವಿವಿಧ ಸಮುದಾಯ ಕಾಯಕಜೀವಿಗಳ 770 ಪ್ರತಿನಿಧಿನಗಳು ಅಂದಿನ ಅನುಭವಮಂಟಪದ ನಿರ್ಣಯದಲ್ಲಿ ಪಾಲ್ಗೊಳ್ಳುತ್ತಿದ್ದರು. ಅವರೆಲ್ಲರೂ ಒಗ್ಗೂಡಿ ಪ್ರತಿನಿತ್ಯ ಅನುಭಾವ ನಡೆಸುತ್ತಿದ್ದರು. ಅವರ ಅನುಭಾವದಿಂದ ಹೊರಹೊಮ್ಮಿದ ವಚನ ಸಾಹಿತ್ಯ ಇಂದು ಸಕಲ ಜೀವಾತ್ಮರ ಕಲ್ಯಾಣ ಬಯಸುವ ವೈಶ್ವಿಕ ಸಾಹಿತ್ಯವಾಗಿದೆ. ವೀರಶೈವ ಮತ್ತು ಲಿಂಗಾಯತ ಒಂದೇ ವೇದಿಕೆಯಾಗಿವೆ. ಹಿರೇಮಠದ ಲಿಂ.ಡಾ.ಚನ್ನಬಸವ ಪಟ್ಟದ್ದೇವರು, ಹಾನಗಲ್ಲ ಕುಮಾರ ಸ್ವಾಮೀಜಿಗಳ ಹತ್ತಿರ ಸುಮಾರು ವರ್ಷಗಳಕಾಲ ಸಂಸ್ಕಾರ ಪಡೆದು, ವೀರಶೈವ ಮಹಾಸಭಾದ ಸಂಸ್ಥಾಪಕರಿಂದ ಉತ್ತಮ ಸ್ವಾಮೀಜಿಗಳಾಗಿ ಹೀರೇಮಠ ಸಂಸ್ಥಾನ ಭಾಲ್ಕಿಯ ಪೀಠಾಧ್ಯಕ್ಷರಾಗಿದ್ದು ಎಲ್ಲರಿಗೂ ತಿಳಿದ ವಿಷಯ. ಹೀಗಾಗಿ ಲಿಂಗಾಯತರು ಯಾವುದೇ ಭೇದಗಳಿಗೆ ಮನಸ್ಸುಕೊಡದೆ, ವೀರಶೈವ ಲಿಂಗಾಯತ ಎರಡೂ ಒಂದೇ ವೇದಿಕೆಯಲ್ಲಿ ಮುನ್ನಡೆಸುವ ಕಾರ್ಯಮಾಡಬೇಕು ಎಂದರು.

ಚಿಂಚೋಳಿ ಹಿರೇಮಠ (ಹುಗ್ಗೆಳ್ಳಿ) ಮಠದ ಶ್ರೀ ಬಸವಲಿಂಗ ಸ್ವಾಮೀಜಿ ಮಾತನಾಡಿ, ಒಂದೂವರೆ ಶತಮಾನಗಳ ಬಳಿಕ ಬೆಂಗಳೂರಿನಲ್ಲಿ ಮತ್ತೊಂದು ಬೃಹತ್ ಉದ್ಯಾನವನ ನಿರ್ಮಾಣವಾಗುತ್ತಿರುವುದು ಹೆಮ್ಮೆಯ ವಿಷಯ. ಅರಣ್ಯ ಸಚಿವರಾದ ಈಶ್ವರ ಖಂಡ್ರೆಯವರಿಗೆ ಮತ್ತು ಸಂಪುಟದ ಎಲ್ಲಾ ಸಚಿವರಿಗೆ, ಮುಖ್ಯಮಂತ್ರಿಗಳಿಗೆ ವೀರಶೈವ ಲಿಂಗಾಯತ ಮಠಾಧಿಪತಿಗಳಿಂದ ಹೃತ್ಪೂರ್ವಕ ಅಭಿನಂದನೆ ಸಲ್ಲಿಸಲಾಗುವುದು ಎಂದು ಹೇಳಿದರು.


ಈ ಸಂದರ್ಭದಲ್ಲಿ ಪ್ರಮುಖರಾದ ಪುರಸಭೆ ಉಪಾಧ್ಯಕ್ಷ ವಿಜಯಕುಮಾರ ರಾಜಭವನ, ಜೈರಾಜ ಪಾತ್ರೆ, ಸಂತೋಷ ಬಿಜಿಪಾಟೀಲ, ಸೋಮನಾಥಪ್ಪ ಅಸ್ಟೂರೆ, ಚಂದ್ರಕಾಂತ ಪಾಟೀಲ, ವಿಲಾಸ ಬಕ್ಕಾ, ದೀಪಕ ಥಮಕೆ ಮತ್ತಿತರರು ಇದ್ದರು.

**ಬೆಂಗಳೂರಿನಲ್ಲಿ ಅರಣ್ಯ ಇಲಾಖೆಯಿಂದ ಉತ್ತಮ ಪಾರ್ಕ ನರ್ಮಾಣಕ್ಕೆ ಇಷ್ಟೊಂದು ಅಭಿಮಾನ ದೊರೆತಿರುವುದು ಸಂತಸದ ಸಂಗತಿ, ಭಾಲ್ಕಿಯ ಅಭಿವೃದ್ಧಿಗೂ ಸಾಕಷ್ಟು ಪ್ರಯತ್ನಿಸಲಾಗುತ್ತಿದೆ. ಇಂಚೂರಿನಲ್ಲಿ ಟಿ.ಪಾರ್ಕ ನಿರ್ಮಾಣಕಾರ್ಯ ಪ್ರಗತಿಯಲ್ಲಿದೆ, ಭಾಲ್ಕಿ ಪಟ್ಟಣದ ಕೆರೆ ಅಭಿವೃದ್ಧಿಗೆ 15 ಕೋಟಿ ರೂ. ಅನುದಾನ ನೀಡಲಾಗಿದೆ.**

**–ಈಶ್ವರ ಖಂಡ್ರೆ**
**ಜಿಲ್ಲಾ ಉಸ್ತುವಾರಿ ಸಚಿವರು**

# ಅಕ್ಕಮಹಾದೇವಿ ಜೀವನ ಕುರಿತು ಉಪನ್ಯಾಸ, ಕನ್ನಡದ ನಂದಾದೀಪ ಕೃತಿ ವಿಮರ್ಶೆ

• **ಮಲ್ಲಮ್ಮ ನುಡಿ ವಾರ್ತೆ ಬೀದರ್**



ಕರ್ನಾಟಕ ವಚನಸಾಹಿತ್ಯ ಪರಿಷತ್ ವತಿಯಿಂದ ನಗರದ ಮಾಧವ ನಗರದಲ್ಲಿರುವ ಅಕ್ಕಮಹಾದೇವಿ ಮಂಟಪದಲ್ಲಿ ಮಾಸಿಕ ಶರಣ ಚಿಂತನ ಗೋಷ್ಠಿ ಕಾರ್ಯಕ್ರಮ ಭಾನುವಾರ ಮಧ್ಯಾಹ್ನ 1.30ಕ್ಕೆ ನಡೆಯಿತು. ಈ ಸಂದರ್ಭದಲ್ಲಿ ವೈರಾಗ್ಯ ನಿಧಿ ಅಕ್ಕಮಹಾದೇವಿಯವರ ಜೀವನ ಕುರಿತು ವಿಶೇಷ ಉಪನ್ಯಾಸ ಹಾಗೂ 'ಕನ್ನಡದ ನಂದಾದೀಪ' ಕೃತಿ ವಿಮರ್ಶೆ ಜರುಗಿತು.

ಕಾರ್ಯಕ್ರಮವನ್ನು ವಚನಾಮೃತ ಕನ್ನಡ ಸಂಘದ ಅಧ್ಯಕ್ಷ ಪ್ರೊ. ಸಿದ್ರಾಮಪ್ಪಾ ಮಾಸಿಮಾಡೆ ಸಸಿಗೆ ನೀರು ಎರೆಯುವ ಮೂಲಕ ಉದ್ಘಾಟಿಸಿದರು. ಅವರು ಮಾತನಾಡಿ, ಅಕ್ಕಮಹಾದೇವಿಯವರ ವಚನಗಳು ವಿಶ್ವಕ್ಕೆ ಶ್ರೇಷ್ಠ ಸಂದೇಶಗಳನ್ನು ನೀಡಿದ್ದು, ಅವರ ಮೇರು ವ್ಯಕ್ತಿತ್ವ ಸ್ತ್ರೀಕುಲಕ್ಕೆ ಆದರ್ಶವಾಗಿದೆ ಎಂದರು. 12ನೇ ಶತಮಾನದಲ್ಲಿ ಬಸವಾದಿ ಶರಣರು ನೀಡಿದ ವೈಚಾರಿಕ ಮತ್ತು ಆಧ್ಯಾತ್ಮಿಕ ತತ್ವಗಳನ್ನು 20ನೇ ಶತಮಾನದಲ್ಲಿ ಪೂಜ್ಯ ಡಾ. ಚನ್ನಬಸವ ಪಟ್ಟದೇವರು ಅಕ್ಷರ, ಕಾಯಕ ಮತ್ತು ದಾಸೋಹ ಸೇವೆಗಳ ಮೂಲಕ ಸಮಾಜಕ್ಕೆ ತಲುಪಿಸಿದ್ದಾರೆ ಎಂದು ಹೇಳಿದರು.

ಸಾಹಿತಿಗಳಾದ ಜೈಶ್ರೀ ಸುಕಾಲೆ ಅಕ್ಕಮಹಾದೇವಿಯವರ ಜೀವನ ಕುರಿತು ವಿಶೇಷ ಉಪನ್ಯಾಸ ನೀಡಿ, ಅಕ್ಕನ ವಚನಗಳು ಮಾನವ ಬದುಕಿಗೆ ಉತ್ತಮ ಮಾರ್ಗದರ್ಶಿಯಾಗಿವೆ ಎಂದು ಹೇಳಿದರು. ಲಿಂಗಾಂಗ ಸಾಮರಸ್ಯದ ಮೂಲಕ ಅಕ್ಕಮಹಾದೇವಿ ಆಧ್ಯಾತ್ಮಿಕ ಉತ್ತುಂಗವನ್ನು ತಲುಪಿದ್ದಾರೆ ಎಂದು ಅವರು ವಿವರಿಸಿದರು.

'ಕನ್ನಡದ ನಂದಾದೀಪ' ಕೃತಿಯ ದಾಸೋಹಿಗಳಾದ ಡಾ. ಗುರಮ್ಮಾ ಸಿದ್ದಾರೆಡ್ಡಿ ಮಾತನಾಡಿ, ಮಕ್ಕಳಲ್ಲಿ ಸಂಸ್ಕಾರ ಮತ್ತು ಮಾನವೀಯ ಮೌಲ್ಯಗಳನ್ನು ಬೆಳೆಸಲು ವಚನ ಸಾಹಿತ್ಯ ಅಧ್ಯಯನ ಅಗತ್ಯವಿದೆ ಎಂದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ವಚನ ಸಾಹಿತ್ಯ ಪರಿಷತ್ತಿನ ಅಧ್ಯಕ್ಷೆ ಹಾಗೂ ಕೃತಿಯ ಸಂಪಾದಕಿ ಸುನೀತಾ ದಾಡಗೆ ಮಾತನಾಡಿ, ತಾಳ್ಮೆ, ಸಹನೆ ಮತ್ತು ಹೊಂದಾಣಿಕೆಯಿಂದ ಬದುಕು ಸಾಗಿಸಿದರೆ ಜೀವನ ಹೂವಿನಂತೆ ಸುಂದರವಾಗುತ್ತದೆ ಎಂದರು.

ಈ ಸಂದರ್ಭದಲ್ಲಿ ಜಗನ್ಮಾತೆ ವೈರಾಗ್ಯ ನಿಧಿ ಅಕ್ಕಮಹಾದೇವಿ ಚಲನಚಿತ್ರದ ನಿರ್ದೇಶಕ–ನಿರ್ಮಾಪಕ ಬಿ.ಜೆ. ವಿಷ್ಣುಕಾಂತ ಹಾಗೂ ನಟಿ ಸುಲಕ್ಷಾ ಕೈರಾ ಅವರನ್ನು ಸನ್ಮಾನಿಸಲಾಯಿತು. ನಿವೃತ್ತ ಯೋಜನಾಧಿಕಾರಿ ವಿಶ್ವನಾಥ ಬಿರಾದಾರ ಪ್ರಸಾದ ದಾಸೋಹ ನೆರವೇರಿಸಿದರು. ಕುಮಾರಿ ಭಕ್ತಿ ಶಿವಲಿಂಗ ಹೆಡೆ ವಚನ ನೃತ್ಯ, ವರ್ಷಾರಾಣಿ ಶ್ರೀನಿವಾಸ ಬಿರಾದಾರ ವಚನ ಗಾಯನ ನಡೆಸಿದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.
PRGI NO. 120927 (RNINO:KARKAN/2011/48371)